ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 12 ಸಂಚಿಕೆ : 212

14–2–2025 ಶುಕ್ರವಾರ

₹3 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 12 ISSUE : 212

## ನೇಣು ಬಿಗಿದುಕೊಂಡು ಸರ್ವೆ ಅಧಿಕಾರಿ ಶಿವಕುಮಾರ್ ಆತ್ಮಹತ್ಯೆ

**ಚಿಕ್ಕಮಗಳೂರು:** ಚಿಕ್ಕಮಗಳೂರು ಜಿಲ್ಲೆಯ ಮೂಡಿಗೆರೆ ಪಟ್ಟಣದಲ್ಲಿ ಸರ್ವೆ ಅಧಿಕಾರಿಯೊಬ್ಬರು ನೇಣು ಬಿಗಿದುಕೊಂಡು ಆತ್ಮಹತ್ಯೆಗೆ ಶರಣಾಗಿರುವ ಘಟನೆ ಗುರುವಾರ ನಡೆದಿದೆ.



ಮೂಡಿಗೆರೆ ಸರ್ವೆ ಕಚೇರಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ತುಮಕೂರು ಜಿಲ್ಲೆಯ ಗುಬ್ಬಿ ಮೂಲದ ಶಿವಕುಮಾರ್ (45) ಅವರು ಇಂದು ಆತ್ಮಹತ್ಯೆ ಮಾಡಿಕೊಂಡಿದ್ದಾರೆ.

ಚಿಕ್ಕಮಗಳೂರು ನೌಕರರ ಸಂಘದ ನಿರ್ದೇಶಕರಾಗಿದ್ದ ಶಿವಕುಮಾರ್ ಅವರು ಮೂಡಿಗೆರೆ ಬಸ್ ನಿಲ್ದಾಣದ ಬಳಿಯ ಬಾಡಿಗೆ ಮನೆಯಲ್ಲಿ ನೇಣಿಗೆ ಕೊರಳೊಡ್ಡಿದ್ದಾರೆ.

ಈ ಸಂಬಂಧ ಮೂಡಿಗೆರೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ನಿನ್ನೆಯಷ್ಟೇ ಹೊಸ ಸಿಮ್ ಖರೀದಿ ಮಾಡಿದ್ದ ಶಿವಕುಮಾರ್ ಅವರು, 10 ವರ್ಷಗಳಿಂದ ಬಳಸುತ್ತಿದ್ದ ಸಿಮ್ ಚೇಂಜ್ ಮಾಡಿದ್ದರು. ಸದ್ಯ ಸರ್ವೆ ಅಧಿಕಾರಿಯ ಆತ್ಮಹತ್ಯೆ ಅನುಮಾನಕ್ಕೆ ಕಾರಣವಾಗಿದೆ. ಪೊಲೀಸರು ಮನೆ ಬಳಿ ಯಾರನ್ನೂ ಬಿಡದೆ ಬ್ಯಾರಿಕೇಡ್ ಹಾಕಿದ್ದು, ಆತ್ಮಹತ್ಯೆ ಕುರಿತು ತನಿಖೆ ನಡೆಸುತ್ತಿದ್ದಾರೆ.

## ಅನ್ನಭಾಗ್ಯಕ್ಕೆ ಹಿನ್ನಡೆ; 5 ತಿಂಗಳಿನಿಂದ ಖಾತೆಗೆ ಹಣ ಬಂದಿಲ್ಲ

**ಬೆಂಗಳೂರು :** ಕಾಂಗ್ರೆಸ್ ಸರ್ಕಾರದ ಐದು ಗ್ಯಾರಂಟಿಗಳಲ್ಲಿ ಒಂದಾದ 'ಅನ್ನಭಾಗ್ಯ'ಕ್ಕೆ ಹಿನ್ನಡೆಯಾಗಿದೆ. ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಗೆ ಅನುದಾನದ ಕೊರತೆಯಿಂದಾಗಿ ಸರ್ಕಾರದಿಂದ ಪ್ರತಿ ಕುಟುಂಬಕ್ಕೆ 5 ಕೆಜಿ ಅಕ್ಕಿ ಬದಲಿಗೆ ನೀಡಲಾಗುತ್ತಿದ್ದ 170 ರೂಪಾಯಿ ಹಣ ಕಳೆದ ಅಕ್ಟೋಬರ್ ತಿಂಗಳಿನಿಂದ ಫಲಾನುಭವಿಗಳಿಗೆ ಸಂದಾಯವಾಗಿಲ್ಲ. ಈ ಬಗ್ಗೆ ಬಿಪಿಎಲ್ ಫಲಾನುಭವಿಗಳು ಸರ್ಕಾರದ ವಿರುದ್ಧ ಆಕ್ರೋಶ ಹೊರಹಾಕಿದ್ದಾರೆ. ತಕ್ಷಣವೇ ಖಾತೆಗೆ ಹಣ ಹಾಕುವಂತೆ ಫಲಾನುಭವಿಗಳು ಆಗ್ರಹಿಸಿದ್ದಾರೆ. ಈ ಬಗ್ಗೆ ಪ್ರತಿಕ್ರಿಯಿಸಿರುವ ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯ ಜಂಟಿ ನಿರ್ದೇಶಕ ಮಧುಸೂಧನ್, ಅಕ್ಟೋಬರ್ ತಿಂಗಳ ಪಾವತಿಯನ್ನು ಒಂದೆರಡು ದಿನಗಳಲ್ಲಿ ಮಾಡಲಾಗುತ್ತದೆ ಎಂದರು.

# 7 ವರ್ಷ ಅಲ್ಲ, 10 ವರ್ಷ ಸಿದ್ದರಾಮಯ್ಯನೇ ಸಿಎಂ!

## ಎಂ.ಬಿ. ಪಾಟೀಲ್ ಭರ್ಜರಿ ಬ್ಯಾಟಿಂಗ್

**ಬೆಂಗಳೂರು:** ರಾಜ್ಯ ಕಾಂಗ್ರೆಸ್‌ನಲ್ಲಿ ಅಧಿಕಾರ ಹಸ್ತಾಂತರ ಚರ್ಚೆಯ ನಡುವೆ ಸಿಎಂ ಸಿದ್ದರಾಮಯ್ಯ ಪರವಾಗಿ ಸಚಿವ ಎಂಬಿ ಪಾಟೀಲ್ ಭರ್ಜರಿ ಬ್ಯಾಟಿಂಗ್ ಮಾಡಿದ್ದಾರೆ. 7 ವರ್ಷ ಅಲ್ಲ, 10 ವರ್ಷ ಸಿದ್ದರಾಮಯ್ಯ ಅವರೇ ಸಿಎಂ ಎಂದು ಹೇಳುವ ಮೂಲಕ ಅಧಿಕಾರ ಹಸ್ತಾಂತರ ಚರ್ಚೆಗೆ ತಿರುಗೇಟು ನೀಡಿದ್ದಾರೆ.

7 ವರ್ಷ 7 ತಿಂಗಳುಗಳ ಕಾಲ ದೇವರಾಜ ಅಸರು ಸಿಎಂ ಆಗಿರುವ ದಾಖಲೆಯನ್ನು ಸಿದ್ದರಾಮಯ್ಯ ಮುರಿಯಲಿ ಎಂಬ ಡಾ. ಜಿ ಪರಮೇಶ್ವರ್ ಹೇಳಿಕೆಗೆ ಪ್ರತಿಕ್ರಿಯೆ ನೀಡಿರುವ ಎಂಬಿ ಪಾಟೀಲ್ ಸಿದ್ದರಾಮಯ್ಯ ಪರವಾಗಿ ಬ್ಯಾಟಿಂಗ್ ಮಾಡಿದರು.'

ದೇವರಾಜು ಅರಸು 7ವರ್ಷ 7 ತಿಂಗಳುಗಳ ಕಾಲ ಸಿಎಂ ಆಗಿದ್ದರು. ಸಿದ್ದರಾಮಯ್ಯನವರು





ಪೂರ್ಣಾವಧಿ ಇರ್ತಾರೆ. ಏಳು ವರ್ಷಗಳಲ್ಲ 10ವರ್ಷ ಇರ್ತಾರೆ. ಹೈಕಮಾಂಡ್ ಸಿದ್ದರಾಮಯ್ಯನವರನ್ನ ಸಿಎಂ ಮಾಡಿದ್ದಾರೆ ಹಾಗಿರುವಾಗ ಪೂರ್ಣಾವಧಿ ಸಿಎಂ ಆಗಿ ಸಿದ್ದರಾಮಯ್ಯ ಇರ್ತಾರೆ ಎಂದು ವಿರೋಧಿಗಳಿಗೆ ತಿರುಗೇಟು ನೀಡಿದರು. ಸದ್ಯ ರಾಜ್ಯದಲ್ಲಿ ಸಿಎಂ ಕುರ್ಚಿ ಖಾಲಿ ಇಲ್ಲ. ಈ ಅವಧಿ ಪೂರೈಸಿ ಮತ್ತೆ ಸಿದ್ದರಾಮಯ್ಯ ನೇತೃತ್ವದಲ್ಲಿ ಚುನಾವಣೆ ಎದುರಿಸ್ತೇವೆ. ಮುಂದಿನ ಬಾರಿಯ ನಾವು ಅಧಿಕಾರಕ್ಕೆ ಬರ್ತೇವೆ ಎಂದು ಇದೇ ಸಂದರ್ಭದಲ್ಲಿ ಎಂಬಿ ಪಾಟೀಲ್ ವಿಶ್ವಾಸ ವ್ಯಕ್ತಪಡಿಸಿದರು.

ಮೆಟ್ರೋ ದರ ಇಳಿಕೆಗೆ ಸಿಎಂ ಸಿದ್ದರಾಮಯ್ಯ ಸೂಚಿಸಿರುವ ವಿಚಾರವಾಗಿ ಮಾತನಾಡಿದ ಎಂಬಿ ಪಾಟೀಲ್, ಮೆಟ್ರೋದಲ್ಲಿ ಸಹಭಾಗಿತ್ವವನ್ನು ನಾವು ಹೊಂದಿದ್ದೇವೆ. ಸಾರ್ವಜನಿಕ ಸಾರಿಗೆಯಲ್ಲೂ ದರ ಹೆಚ್ಚಿಸಿದರೆ ವಾಹನದಲ್ಲಿ ಓಡಾಡುವುದಕ್ಕೂ ಮೆಟ್ರೋ ಓಡಾಟಕ್ಕೂ ಒಂದೇ ದರ ಎಂಬಂತೆ ಆಗುತ್ತದೆ. ಮೆಟ್ರೋ ದರ ಇಳಿಸಿದ್ರೆ ಜನಸಾಮಾನ್ಯರಿಗೆ ಅನುಕೂಲ ಆಗುತ್ತೆ. ಬೆಂಗಳೂರು ಒತ್ತಡ ಕಡಿಮೆ ಆಗಬೇಕಾದರೆ ಸಬ್ ಅರ್ಬನ್ ರೈಲ್ವೇ, ಫೆರಿಫೆರಲ್ ರಿಂಗ್ ರೋಡ್ ಎಲ್ಲಾ ಆಗಬೇಕು ಎಂದು ಅಭಿಪ್ರಾಯ ಪಟ್ಟರು.

ತೇಜಸ್ವಿ ಸೂರ್ಯ ಆರೋಪ ವಿಚಾರವಾಗಿ ಮಾತನಾಡಿ, ಈ ಬಗ್ಗೆ ಕುಳಿತು ಚರ್ಚೆ ಮಾಡಬೇಕು. ಎರಡು ಸರ್ಕಾರ ಜನರ ಮೇಲೆ ಹೊರೆ ಆಗುವ ಕೆಲಸ ಮಾಡಬಾರದು. ನಮ್ಮ ರಾಜ್ಯದ ಭಾಗವನ್ನು ಸಿಎಂ ಹೇಳಿದ್ದಾರೆ. ರಾಜಕಾರಣ ಮಾಡಬೇಕಾದರೆ ಸಿಎಂ ಹೇಳಿದಂತೆ ಅವರು ಮಾಡಲಿ. ಸಿಎಂ ಪತ್ರ ಬರೆದಿಲ್ಲ ಎಂದರೆ ಈಗ ಅಧಿಕೃತವಾಗಿ ಹೇಳಿದ್ದಾರೆ . ನೀವು ಕೇಂದ್ರ ರೈಲ್ವೇ ಸಚಿವ ಅಶ್ವಿನಿ ವೈಷ್ಣವ್ ಅವರಲ್ಲಿ ಹೇಳಬೇಕಿತ್ತು. ರಾಜ್ಯ ಸರ್ಕಾರ ಕಡಿಮೆ ಮಾಡಿದ್ರೆ ನಾವು ಮಾಡ್ತೇವೆ ಎನ್ನಬೇಕಿತ್ತು. ನಿಮ್ಮವರು ಯಾಕಾಗಿ ಮೌನವಾಗಿದ್ದಾರೆ ಎಂದು ಪ್ರಶ್ನಿಸಿದರು.

## ಗ್ಯಾರಂಟಿ ಯೋಜನೆಗಳು ಸಮರ್ಪಕ ಅನುಷ್ಠಾನವಾಗಲಿ



**ಚಿಕ್ಕಮಗಳೂರು: ಫೆ. 13:** ರಾಜ್ಯ ಸರ್ಕಾರ ಬಡ ಹಾಗೂ ಮಧ್ಯಮ ವರ್ಗದವರ ಅನುಕೂಲಕ್ಕಾಗಿ ಜಾರಿಗೊಳಿಸಿರುವ ಪಂಚ ಗ್ಯಾರಂಟಿ ಯೋಜನೆಗಳು ಸಮರ್ಪಕವಾಗಿ ಅನುಷ್ಠಾನವಾಗಬೇಕು. ಇವುಗಳಿಂದ ಜನರ ಬದುಕಿನಲ್ಲಿ ಬೆಳಕು ಮೂಡಬೇಕು ಎಂದು ಗ್ಯಾರಂಟಿ ಯೋಜನೆಗಳ ಜಿಲ್ಲಾ ಮಟ್ಟದ ಅನುಷ್ಠಾನ ಸಮಿತಿಯ ಜಿಲ್ಲಾ ಅಧ್ಯಕ್ಷರಾದ ಎಂ.ಸಿ. ಶಿವಾನಂದ ಸ್ವಾಮಿ ಹೇಳಿದರು.

ಜಿಲ್ಲಾ ಪಂಚಾಯಿತಿ ಮಿನಿ ಸಭಾಂಗಣದಲ್ಲಿ ಇಂದು ನಡೆದ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಅಸಹಾಯಕ ಮತ್ತು ಬಡ ಕುಟುಂಬಗಳಿಗೆ ವರದಾನವಾಗಿರುವ ಪಂಚ ಗ್ಯಾರಂಟಿ ಯೋಜನೆಗಳನ್ನು ಅರ್ಹ ಫಲಾನುಭವಿಗಳಿಗೆ ತಲುಪಿಸಲುವಲ್ಲಿ ಜಿಲ್ಲೆಯು ರಾಜ್ಯದಲ್ಲೇ ಪ್ರಥಮ ಸ್ಥಾನ ಗಳಿಸಿದೆ. ರಾಜ್ಯ ಸರ್ಕಾರವು ಸಮಾಜದ ಹಿಂದುಳಿದ ವರ್ಗದ ಜನರನ್ನು ಆರ್ಥಿಕವಾಗಿ ಸಬಲರನ್ನಾಗಿಸಲು ಅವರ ಜೀವನ ಮಟ್ಟ ಸುಧಾರಿಸಲು ಹಲವಾರು ಜನಪರ ಯೋಜನೆಗಳನ್ನು ಜಾರಿ ಮಾಡಿ ಅವರನ್ನು ಸಮಾಜದ ಮುಖ್ಯವಾಹಿನಿಗೆ ತರಲು ಶ್ರಮಿಸುತ್ತಿದೆ. ಈ ಕಾರ್ಯಕ್ಕೆ ಬೆಂಬಲವಾಗಿ ಗೃಹಲಕ್ಷ್ಮಿ, ಗೃಹಜ್ಯೋತಿ, ಅನ್ನಭಾಗ್ಯ, ಯುವನಿಧಿ ಹಾಗೂ ಶಕ್ತಿ ಯೋಜನೆಗಳು ಸಹಕಾರಿಯಾಗಿವೆ ಎಂದರು.

ಜಿಲ್ಲೆಯಾದ್ಯಂತ 2024ರ ಅಕ್ಟೋಬರ್ ವರೆಗೆ ಗೃಹಲಕ್ಷ್ಮಿ ಯೋಜನೆಯಡಿ 2,70,273 ಫಲಾನುಭವಿಗಳು ನೋಂದಾಯಿಸಿಕೊಂಡಿದ್ದು ಒಟ್ಟು ರೂ. 52,59,32,000 ಹಣ ನೇರವಾಗಿ ಫಲಾನುಭವಿಗಳ ಖಾತೆಗೆ ವರ್ಗಾಹಿಸಲಾಗಿದ್ದು, ಶೇ 96.20 ರಷ್ಟು ಪ್ರಗತಿಯಾಗಿದೆ. ತಿದ್ದುಪಡಿಯಾದ ಪಡಿತರ ಚೀಟಿಗಳ, ಆದಾಯ ತೆರಿಗೆ ಪಾವತಿದಾರರಲ್ಲದ ಫಲಾನುಭವಿಗಳ ಪಟ್ಟಿಯನ್ನು ಸರಿಪಡಿಸಲು ಕೇಂದ್ರ ಕಛೇರಿಗೆ ಕಳುಹಿಸಲಾಗಿದೆ. 44 NPCI Inactive ಫಲಾನುಭವಿಗಳ ಮಾಹಿತಿಯನ್ನು ಸರಿಪಡಿಸಲು ಕ್ರಮವಹಿಸಲಾಗುತ್ತಿದೆ ಎಂದ ಅವರು. 'ಮಹಿಳೆಯರಿಗಲ್ಲದೇ ತೃತೀಯ ಲಿಂಗಿಗಳಿಗೂ ಯೋಜನೆಯನ್ನು ವಿಸ್ತರಿಸಿದ್ದು, ಜಿಲ್ಲಾಧಿಕಾರಿಗಳ ಕಛೇರಿಯಿಂದ ಪಡೆದ ಗುರುತಿನ ಚೀಟಿ ಹೊಂದಿರುವ ತೃತೀಯ ಲಿಂಗಿಗಳು ಈ ಯೋಜನೆಯಡಿ ನೊಂದಾಯಿಸಿಕೊಳ್ಳಬಹುದಾಗಿದ್ದು, ಜಿಲ್ಲೆಯಲ್ಲಿ 381 ತೃತೀಯ ಲಿಂಗಿಗಳು ಇದ್ದಾರೆ. ಈವರೆಗೆ 20 ಜನ ತೃತೀಯ ಲಿಂಗಿಗಳು ನೊಂದಾಯಿಸಿಕೊಂಡಿರುತ್ತಾರೆ. ಈಗಾಗಲೇ ಇಲಾಖೆಯಿಂದ ಈ ಯೋಜನೆಯಡಿ ನೊಂದಾಯಿಸಿಕೊಳ್ಳುವಂತೆ ಅವರಿಗೆ ಉತ್ತೇಜನ ನೀಡುತ್ತಿದ್ದು, ಗ್ಯಾರಂಟಿ ಸಮಿತಿಯ ಪ್ರತಿನಿಧಿಗಳು ತಮ್ಮ ಗಮನಕ್ಕೆ ಬಂದಂತಹ ತೃತೀಯ ಲಿಂಗಿಗಳನ್ನು ಯೋಜನೆಗೆ ನೊಂದಾಯಿಸಿಕೊಳ್ಳುವಂತೆ ತಿಳಿಸಬೇಕೆಂದು ಹೇಳಿದರು.

## ಅಂತರ್ಜಲ ಮಟ್ಟ ಏರಿಕೆ ಕೃಷಿ ಚಟುವಟಿಕೆಗಳಿಗೆ ಸಹಕಾರಿ

### ಸಚಿವ ಮಧು ಎಸ್. ಬಂಗಾರಪ್ಪ



**ಶಿವಮೊಗ್ಗ :** ವರದಾನದಿಯ ಅಭಿವೃದ್ಧಿಗಾಗಿ ಕೈಗೆತ್ತಿ ಕೊಂಡಿರುವ ಈ ಯೋಜನೆಗಳಿಂದಾಗಿ ತಾಲೂಕಿನ 39 ಗ್ರಾಮಗಳ ನಿವಾಸಿಗಳಿಗೆ ಶುದ್ಧ ಕುಡಿಯುವ ನೀರು ಪೂರೈಸಲು, ಕೆರೆ–ಕಟ್ಟೆ–ಕಾಲುವೆಗಳ ಭರ್ತಿ ಮಾಡಲು ಸಹಕಾರಿಯಾಗಲಿದೆ. ಅಲ್ಲದೆ ಅಂತರ್ಜಲ ಮಟ್ಟ ಹೆಚ್ಚಳವಾಗಲಿದೆ. 3013 ಎಕರೆ ಭೂ ಪ್ರದೇಶದಲ್ಲಿ ಕೃಷಿ ಚಟುವಟಿಕೆಗಳಿಗೆ ಅನುಕೂಲವಾಗಲಿದೆ. 53 ಕಿ.ಮೀ. ಯೋಜನಾ ವ್ಯಾಪ್ತಿಯ ಉದ್ದವಿದ್ದು, ಅಂದಾಜು 218.62 ಎಂ.ಸಿ.ಎಫ್ .ಟಿ. ಸಾಮರ್ಥ್ಯದ ನೀರಿನ ಶೇಖರಣೆ ಆಗಲಿದೆ ಎಂದರು.

ಅವರು ಇಂದು ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭಿವೃದ್ಧಿ ಇಲಾಖೆ ವತಿಯಿಂದ ಸೊರಬ ತಾಲೂಕಿನ ಕಡಸೂರು ಗ್ರಾಮದಲ್ಲಿ ಏರ್ಪಡಿಸಲಾಗಿದ್ದ ಕಾಗೋಡು, ತಡಗಳಲೆ, ಶುಂಠಿಕೊಪ್ಪ, ಕಡಸೂರು, ಚಿಕ್ಕಮಾಕೊಪ್ಪ ಮತ್ತು ದುಗ್ಗಿ ಗ್ರಾಮಗಲ್ಲಿ **(3ನೇ ಪುಟಕ್ಕೆ**



## ಇಂದಿನ ರಾಶಿ ಭವಿಷ್ಯ

### ಮೇಷ ರಾಶಿ

ಇತ್ತೀಚೆಗೆ ನಿಮ್ಮಲ್ಲಿ ಕೆಲವರು ಓವರ್ಟೈಮ್ ಮಾಡುತ್ತಿರುತ್ತಾರೆ ಹಾಗೂ ನಿಮ್ಮ ಚೈತನ್ಯ ಉಡುಗುತ್ತಿರುತ್ತದೆ- ಇಂದು ನೀವು ಒತ್ತಡ ಹಾಗೂ ಸಂದಿಗ್ಧತೆಯನ್ನು ಬಯಸುವುದಿಲ್ಲ. ಯಾರ ಹತ್ತಿರವಾದರು ಸಾಲವನ್ನು ತೆಗೆದುಕೊಂಡಿರುವ ಜನರು, ಇಂದು ಯಾವುದೇ ಪರಿಸ್ಥಿತಿಯಲ್ಲೂ ಸಾಲವನ್ನು ಮರುಪಾವತಿಸಬೇಕಾಗುತ್ತದೆ, ಇದರಿಂದ ಆರ್ಥಿಕ ಪರಿಸ್ಥಿತಿ ಸ್ವಲ್ಪ ದುರ್ಬಲವಾಗುತ್ತದೆ.

### ವೃಷಭ ರಾಶಿ

ನೀವು ಸಂದಿಗ್ಧ ಪರಿಸ್ಥಿತಿಯನ್ನು ಎದುರಿಸಿದಲ್ಲಿ ಖಿನ್ನತೆಗೊಳಗಾಗಬೇಡಿ. ಆಹಾರದ ಸ್ವಾದಕ್ಕೆ ಉಪ್ಪು ಬೇಕಾದ ಹಾಗೆ ಅತೃಪ್ತಿಯಿಂದ ಮಾತ್ರ ನೀವು ಸಂತೋಷದ ಮೌಲ್ಯವನ್ನು ಅರ್ಥ ಮಾಡಿಕೊಳ್ಳುತ್ತೀರಿ.

ನಿಮ್ಮ ಮನಸ್ಥಿತಿಯನ್ನು ಬದಲಾಯಿಸಲು ಕೆಲವು ಸಾಮಾಜಿಕ ಸಮಾರಂಭಗಳಿಗೆ ಹಾಜರಾಗಿ. ಸ್ವಲ್ಪ ಹೆಚ್ಚು ಹಣ ಮಾಡಲು ನಿಮ್ಮ ನವೀನ ಕಲ್ಪನೆಯನ್ನು ಬಳಸಿ. ಕುಟುಂಬದ ಸದಸ್ಯರೊಂದಿಗೆ ಕಾಲ ಕಳೆಯುವುದು ಆನಂದಮಯವಾಗಿರುತ್ತದೆ. ನಿಮ್ಮ ಪ್ರೀತಿಪಾತ್ರರ ಅನಗತ್ಯ ಬೇಡಿಕೆಗಳನ್ನು ಒಪ್ಪಿಕೊಳ್ಳಬೇಡಿ.

### ಮಿಥುನ ರಾಶಿ

ಅತಿಯಾಗಿ ತಿನ್ನುವುದನ್ನು ತಪ್ಪಿಸಿ ಮತ್ತು ನಿಮ್ಮ ತೂಕದ ಮೇಲೆ ಹಿಡಿತ ಹೊಂದಿರಿ. ಸ್ವಲ್ಪ ಹೆಚ್ಚು ಹಣ ಮಾಡಲು ನಿಮ್ಮ ನವೀನ ಕಲ್ಪನೆಯನ್ನು ಬಳಸಿ. ನಿಮ್ಮ ಮಗುವಿನ ಒಂದು ಪ್ರಶಸ್ತಿ ಪ್ರದಾನ ಕಾರ್ಯಕ್ರಮಕ್ಕೆ ಆಮಂತ್ರಣ ಸಂತೋಷದ ಮೂಲವಾಗಬಹುದು. ಅವನು(ಳು) ನಿಮ್ಮ ನಿರೀಕ್ಷೆಗಳನ್ನು ಪೂರೈಸುವುದು ನಿಮ್ಮ ಕನಸನ್ನು ನನಸಾಗಿಸಬಹುದು. ಒಬ್ಬ ಆಸಕ್ತಿದಾಯಕ ವ್ಯಕ್ತಿಯನ್ನು ಭೇಟಿ ಮಾಡುವ ಸಾಧ್ಯತೆಗಳಿವೆ.

### ಕರ್ಕ ರಾಶಿ

ಸ್ವತಃ ಔಷಧಿ ತೆಗೆದುಕೊಳ್ಳುವುದು ಔಷಧ ಅವಲಂಬನೆಯನ್ನು ಉಂಟುಮಾಡಬಹುದು. ಯಾವುದೇ ಔಷಧ ತೆಗೆದುಕೊಳ್ಳುವ ಮೊದಲು ವೈದ್ಯರ ಸಲಹೆ ಪಡೆಯಿರಿ. ಇಲ್ಲದಿದ್ದಲ್ಲಿ ಔಷಧ ಅವಲಂಬನೆಯ ಸಾಧ್ಯತೆ ಅಧಿಕವಾಗಿದೆ. ಈ ರಾಶಿಚಕ್ರದ ವಿವಾಹಿತ ಜನರಿಗೆ ಇಂದು ಅತ್ತೆಮನೆಯ ಕಡೆಯಿಂದ ಹಣದ ಪ್ರಯೋಜನವಾಗುವ ಸಾಧ್ಯತೆ ಇದೆ. ನಿಮ್ಮ ಸಹೋದರನಿಗೆ ವಿಷಯಗಳನ್ನು ನಿಯಂತ್ರಣದಲ್ಲಿರಿಸಿಕೊಳ್ಳಲು ಸಹಾಯ ಮಾಡಿ.

### ಸಿಂಹ ರಾಶಿ

ಸ್ನೇಹಿತರು ನಿಮ್ಮ ಆಲೋಚನೆಗಳ ಮೇಲೆ ಗಮನಾರ್ಹ ಪ್ರಭಾವ ಬೀರಬಹುದಾದ ಯಾರಾದರೂಬ್ಬರನ್ನು ನಿಮಗೆ ಪರಿಚಯಿಸುತ್ತಾರೆ. ಇಂದು ನೀವು ಸ್ನೇಹಿತರೊಂದಿಗೆ ಪಾರ್ಟಿಯಲ್ಲಿ ಸಾಕಷ್ಟು ಹಣವನ್ನು ಖರ್ಚು ಮಾಡಬಹುದು ಆದರೆ ಇದರ ಹೊರತಾಗಿಯೂ ನಿಮ್ಮ ಆರ್ಥಿಕ ಭಾಗವು ಬಲವಾಗಿರುತ್ತದೆ ನಿಮ್ಮ ಸ್ನೇಹಿತರು ನಿಮಗೆ ಅವರ ಅವಶ್ಯಕತೆ ಅತ್ಯಂತ ಹೆಚ್ಚಿದ್ದಾಗ ನಿಮ್ಮನ್ನು ನಿರಾಸೆಗೊಳಿಸಬಹುದು.

### ಕನ್ಯಾ ರಾಶಿ

ನಿಮ್ಮನ್ನು ನೀವೇ ನೋಡಿಕೊಳ್ಳುವ ಬಯಕೆಗೆ ಇತರರ ಅಗತ್ಯಗಳು ಕಡಿವಾಣ ಹಾಕುತ್ತವೆ. ನಿಮ್ಮ ಭಾವನೆಗಳನ್ನು ತಡೆಹಿಡಿಯಬೇಡಿ ಹಾಗೂ ವಿಶ್ರಾಂತಿ ಪಡೆಯುವ ಸಲುವಾಗಿ ನೀವು ಇಷ್ಟಪಡುವುದನ್ನೇನಾದರೂ ಮಾಡಿ.

ಬಹಳ ಪ್ರಯೋಜನಕಾರಿ ದಿನವಲ್ಲ- ಆದ್ದರಿಂದ ನಿಮ್ಮ ಹಣದ ಪರಿಸ್ಥಿತಿಯನ್ನು ಪರಿಶೀಲಿಸಿ ಮತ್ತು ನಿಮ್ಮ ವೆಚ್ಚಗಳ ಮೇಲೆ ಮಿತಿ ಹೇರಿ. ಸಂಬಂಧಿಗಳು ನಿಮ್ಮ ಅತೀ ಉದಾರ ವರ್ತನೆಯ ಅನುಚಿತ ಲಾಭ ಪಡೆಯಲು ಪ್ರಯತ್ನಿಸುತ್ತಾರೆ. ನಿಮ್ಮನ್ನು ನಿಯಂತ್ರಿಸಕೊಳ್ಳದಿದ್ದರೆ ನೀವು ಮೋಸಹೋಗಬಹುದು

### ತುಲಾ ರಾಶಿ

ನಿಮ್ಮ ಒರಟು ವರ್ತನೆ ನಿಮ್ಮ ಸ್ನೇಹಿತರಿಗೆ ಸ್ವಲ್ಪ ಸಮಸ್ಯೆ ಉಂಟುಮಾಡಬಹುದು. ನಿಮ್ಮ ಸಹೋದರ-ಸಹೋದರಿಯರಲ್ಲಿ ಒಬ್ಬರು ಇಂದು ನಿಮ್ಮಿಂದ ಹಣವನ್ನು ಎರವಲು ಪಡೆಯಬಹುದು, ನೀವು ಅವರಿಗೆ ಹಣವನ್ನು ಸಾಲವಾಗಿ ಕೊಡುತ್ತೀರಿ ಆದರೆ ಇದರಿಂದ ನಿಮ್ಮ ಆರ್ಥಿಕ ಪರಿಸ್ಥಿತಿ ಹದಗೆಡಬಹುದು. ಧರ್ಮಕಾರ್ಯಗಳು ಅಥವಾ ಶುಭಕರವಾದ ಸಮಾರಂಭಗಳನ್ನು ಮನೆಯಲ್ಲಿ ನಡೆಸಬೇಕು. ಅನಿರೀಕ್ಷಿತ ಪ್ರಣಯ ಪ್ರಸಂಗಗಳು ಇಂದು ಎದುರಾಗಬಹುದು.

### ವೃಶ್ಚಿಕ ರಾಶಿ

ಇಂದು ಧಾರ್ಮಿಕ ಮತ್ತು ಆಧ್ಯಾತ್ಮಿಕ ಆಸಕ್ತಿಗಳನ್ನು ಅನುಸರಿಸಲೂ ಒಂದು ಒಳ್ಳೆಯ ದಿನ. ಆರ್ಥಿಕ ಭಾಗವು ಬಲಗೊಳ್ಳುವ ಪೂರ್ಣ ಸಾಧ್ಯತೆ ಇದೆ.ನೀವು ಯಾವುದೇ ವ್ಯಕ್ತಿಗೆ ಸಾಲ ನೀಡಿದ್ದರೆ, ಇಂದು ನೀವು ಆ ಹಣವನ್ನು ಮರಳಿ ಪಡೆಯುವ ನಿರೀಕ್ಷೆಯಿದೆ ಸಂತೋಷದ ಚೈತನ್ಯದಾಯಕ - ಪ್ರಿಯವಾದ ಚಿತ್ತದ - ನಿಮ್ಮ ಖುಷಿಯ ಸ್ವಭಾವ ನಿಮ್ಮ ಸುತ್ತಲಿನವರಿಗೆ ಸಂತೋಷ ಮತ್ತು ಖುಷಿಯನ್ನು ತರುತ್ತದೆ.

### ಧನು ರಾಶಿ

ನಿಮ್ಮ ಆಕರ್ಷಕ ವರ್ತನೆ ಗಮನ ಸೆಳೆಯುತ್ತದೆ. ಹಣದ ಪರಿಸ್ಥಿತಿ ದಿನದಲ್ಲಿ ನಂತರ ಸುಧಾರಿಸುತ್ತದೆ. ನಿಮ್ಮ ಕುಟುಂಬ ಸದಸ್ಯರು ಹೇಳಿದ್ದೆಲ್ಲವಕ್ಕೂ ನೀವು ಒಪ್ಪದಿರಬಹುದು - ಆದರೆ ನೀವು ಅವರ ಅನುಭವದಿಂದ ಕಲಿಯಲು ಪ್ರಯತ್ನಿಸಬೇಕು. ನಿಮ್ಮ ಅಚ್ಚುಮೆಚ್ಚಿನವರಿಂದ / ಪತಿ/ ಪತ್ನಿಯಿಂದ ಪಡೆಯುವ ದೂರವಾಣಿ ಕರೆ ನಿಮ್ಮ ದಿನವನ್ನು ಬೆಳಗಲಿದೆ. ಜನರು ನಿಮ್ಮ ಕೆಲಸದಲ್ಲಿನ ಪ್ರಯತ್ನಗಳಿಗೆ ನಿಮ್ಮನ್ನು ಗುರುತಿಸುತ್ತಾರೆ.

### ಮಕರ ರಾಶಿ

ನಿಮ್ಮ ವೈಯಕ್ತಿಕ ಸಮಸ್ಯೆಗಳು ಮಾನಸಿಕ ಸಂತೋಷವನ್ನು ಹಾಳು ಮಾಡಬಹುದು. ಆದರೆ ಒತ್ತಡವನ್ನು ನಿಭಾಯಿಸಲು ಆಸಕ್ತಿದಾಯಕವಾದದ್ದನ್ನೇನಾದರೂ ಓದುವ ಮೂಲಕ ಸ್ವಲ್ಪ ಮಾನಸಿಕ ವ್ಯಾಯಾಮ ಮಾಡಿಕೊಳ್ಳಿ. ರಿಯಲ್ ಎಸ್ಟೇಟ್ ಮತ್ತು ಆರ್ಥಿಕ ವ್ಯವಹಾರಗಳಿಗೆ ಒಳ್ಳೆಯ ದಿನ. ಇತರರಲ್ಲಿ ಅನಗತ್ಯವಾಗಿ ದೋಷಗಳನ್ನು ಹುಡುಕುವ ನಿಮ್ಮ ಬುದ್ಧಿಗೆ ಸಂಬಂಧಿಕರಿಂದ ಟೀಕೆ ಎದುರಾಗಬಹುದು.

### ಕುಂಭ ರಾಶಿ

ಆರೋಗ್ಯ ಚೆನ್ನಾಗಿರುತ್ತದೆ. ಇಂದು ನೀವು ಸ್ನೇಹಿತರೊಂದಿಗೆ ಪಾರ್ಟಿಯಲ್ಲಿ ಸಾಕಷ್ಟು ಹಣವನ್ನು ಖರ್ಚು ಮಾಡಬಹುದು ಆದರೆ ಇದರ ಹೊರತಾಗಿಯೂ ನಿಮ್ಮ ಆರ್ಥಿಕ ಭಾಗವು ಬಲವಾಗಿರುತ್ತದೆ ನೀವು ಪ್ರೀತಿಸುವವರಿಂದ ಉಡುಗೊರೆಗಳನ್ನು ಪಡೆಯಲು ಹಾಗೂ ನೀಡಲು ಪವಿತ್ರವಾದ ದಿನ. ನಿಮ್ಮ ಪ್ರೀತಿಪಾತ್ರರ ಭಾವನೆಗಳನ್ನು ಇಂದು ಅರ್ಥಮಾಡಿಕೊಳ್ಳಿ.

### ಮೀನ ರಾಶಿ

ನಿಮ್ಮಲ್ಲಿ ಇಂದು ಚುರುಕುತನವನ್ನು ನೋಡಬಹುದು. ನಿಮ್ಮ ಆರೋಗ್ಯವು ಇಂದು ನಿಮ್ಮನ್ನು ಸಂಪೂರ್ಣವಾಗಿ ಬೆಂಬಲಿಸುತ್ತದೆ. ದೊಡ್ಡ ಯೋಜನೆಗಳನ್ನು ಮತ್ತು ಕಲ್ಪನೆಗಳಿರುವ ಯಾರಾದರೂ ನಿಮ್ಮ ಗಮನ ಸೆಳೆಯುತ್ತಾರೆ - ಯಾವುದೇ ಹೂಡಿಕೆಗಳನ್ನು ಮಾಡುವ ಮೊದಲು ವ್ಯಕ್ತಿಯ ವಿಶ್ವಾಸಾರ್ಹತೆ ಮತ್ತು ಪ್ರಾಮಾಣಿಕತೆಯನ್ನು ದೃಢೀಕರಿಸಿ. ಮನೆಯ ಸಮಸ್ಯೆಗಳಿಗೆ ತಕ್ಷಣ ಗಮನ ನೀಡುವ ಅಗತ್ಯವಿರುತ್ತದೆ.

## ಬಡ್ಡಿ ವಸೂಲಿಗಾರರಿಂದ ಬಡಜನರನ್ನು ಶೋಷಣೆಯಿಂದ ರಕ್ಷಣೆಗೆ ಮಹತ್ವದ ಕಾನೂನು ಇದಾಗಿದೆ: ಎಚ್.ಕೆ. ಪಾಟೀಲ

**ಗದಗ:** ಮೈಕ್ರೋ ಸಾಲ, ಸಣ್ಣ ಸಾಲ ಬಲವಂತದ ವಸೂಲಿ ಪ್ರತಿಬಂಧಕ ಅಧ್ಯಾದೇಶಕ್ಕೆ ರಾಜ್ಯಪಾಲರಿಂದ ಬುಧವಾರ ಒಪ್ಪಿಗೆ ಸಿಕ್ಕಿದೆ. ಕಾನೂನು ಬಾಹಿರ ಲೇವಾದೇವಿ ವ್ಯವಹಾರ ಮಾಡಿ ಸಾಲ ಪಡೆದವರನ್ನು ಹಿಂಸಿಸುವ, ಒತ್ತೆ ಆಳುಗಳನ್ನಾಗಿ ಮಾಡಿಕೊಳ್ಳುವ, ದೈಹಿಕ ಹಿಂಸೆ ಮಾಡುವ ಅಕ್ರಮ ಕೃತ್ಯವನ್ನು ನಿಯಂತ್ರಿಸಲು ಮತ್ತು ಅಕ್ರಮ ಲೇವಾದೇವಿ ವ್ಯವಹಾರದ ಮೇಲೆ ನಿಯಂತ್ರಿಸಲು ಈ ಸುಗ್ರೀವಾಜ್ಞೆ ಮೂಲಕ ಸರ್ಕಾರ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗುವುದು ಎಂದು ರಾಜ್ಯದ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ.ಪಾಟೀಲ ಅವರು ಹೇಳಿದರು.

ಜಿಲ್ಲಾಡಳಿತ ಭವನದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ರಾಜ್ಯಪಾಲರು ಒಪ್ಪಿಗೆ ನೀಡಿದ್ದರಿಂದ ಬಡವರ ರಕ್ಷಣೆಗೆ ಸರ್ಕಾರಕ್ಕೆ ಬಲ ಬಂದಂತಾಗಿದೆ. ಸಾಲಗಾರರಿಂದ ಜನರನ್ನು ರಕ್ಷಿಸಲು ಜನಪರ ಕಾನೂನು ಅವಶ್ಯವಿತ್ತು. ಸಾಲ ವಸೂಲಿ ಹೆಸರಲ್ಲಿ ಕಿರುಕುಳ, ಅಮಾನವೀಯ ಕೃತ್ಯಗಳು, ವಿಪರೀತ ಬಡ್ಡಿ, ಮೀಟರ್ ಬಡ್ಡಿ ದಂಧೆಗಳಿಗೆ ತಡೆ ನೀಡಬೇಕು ಎಂಬ ನಿಲುವು ಸರ್ಕಾರ ಹೊಂದಿದೆ. ಇದರ ಪರಿಣಾಮವೇ ಸುಗ್ರೀವಾಜ್ಞೆ ಎಂದು ಹೇಳಿದರು.

ಸುಗ್ರೀವಾಜ್ಞೆ ತರುವ ಸಂದರ್ಭದಲ್ಲಿ ರಾಜ್ಯದಲ್ಲಿ ಸಂವಾದ, ವಾದ, ವಿವಾದ, ಆಲೋಚನೆಗಳನ್ನು ಸಮದೂಗಿಸಿ ಜನಪರ ಸುಗ್ರೀವಾಜ್ಞೆ ತರಲಾಗಿದೆ. ರೈತರು, ಮಹಿಳೆ, ಮಹಿಳಾ ಸ್ವಸಹಾಯ ಗುಂಪು, ಮಹಿಳಾ ರೈತರು, ಫೂಟ್ ಪಾತ್ ಉದ್ದಿಮೆಗಳು, ಅಂಗಂಡಿಗಳಲ್ಲಿ ಕೆಲಸ ಮಾಡುವರು, ಬಡವರು, ಆರ್ಥಿಕವಾಗಿ ಹಿಂದುಳಿದವರ ರಕ್ಷಣೆ ಮಾಡಲು ಈ ಸುಗ್ರೀವಾಜ್ಞೆ ಅನುಕೂಲ ಆಗಲಿದೆ.



ನೋಂದಾಯಿತ ಅಲ್ಲದ, ಕಾನೂನು ಬಾಹಿರ ಲೇವಾದೇವಿ ವ್ಯವಹಾರ ಮಾಡುವರ ಮೇಲೆ ಕ್ರಮ ಕೈಗೊಳ್ಳಲಾಗುವುದು. ಸಾಲ ಪಡೆದವರಿಗೆ ಒತ್ತಾಯ ಪೂರ್ವಕ ಕಿರುಕುಳ, ಅವರನ್ನು ಒತ್ತೆ ಆಳುಗಳಾಗಿ ಮಾಡಿಕೊಳ್ಳುವುದು ಕಾನೂನು ಬಾಹಿರ ಚಟುವಟಿಕೆ ಆಗಿತ್ತು. ಲೇವಾದೇವಿ ವ್ಯವ್ಯಹಾರ ಮಾಡುವರಿಂದ ಕಿರುಕಳಕ್ಕೆ ಒಳಪ್ಪಟ್ಟವರನ್ನು ರಕ್ಷಣೆ ಮಾಡುವ ಕಾನೂನು ಅಗತ್ಯ ಇತ್ತು. ಇಂತಹ ಕಾನೂನಿಂದ ಜನರ ರಕ್ಷಣೆಯನ್ನು ಕಾನೂನು ಚೌಕಟ್ಟಿನ ಒಳಗೆ ತಂದಂತಾಯಿತು ಎಂದು ಎಚ್.ಕೆ. ಪಾಟೀಲ ಹೇಳಿದರು.

ಈ ಸುಗ್ರೀವಾಜ್ಞೆ ಮೂಲಕ ಸಾಲಗಾರನ ಜೀವನದ ಘನತೆಯನ್ನು ಕಾಪಾಡಿ,ಬಡಜನರ ಶೋಷಣೆಯನ್ನು ತಡೆಯಲಿಕ್ಕೆ ಅನುಕೂಲವಾಗಿದ್ದು ಸಮಾಜದಲ್ಲಿರುವ ಬಡವರ ರಕ್ಷಣೆಗೆ ಸಹಾಯಕವಾಗಿದೆ ಸಾಲ ಪಡೆದವರು ಬದುಕಿನಲ್ಲಿ ಅಂಜದೆ ಸಮಾದಾನ ಬದುಕು ನಡೆಸಬಹುದಾಗಿದೆ ಎಂದು ರಾಜ್ಯದ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ.ಪಾಟೀಲ ಅವರು ಹೇಳಿದರು.

ನಗಾರಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಅಕ್ಬರ ಸಾಬ ಬಬರ್ಚಿ,ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ, ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ,ಡಿಸಿಎಫ್ ಸಂತೋಷಕುಮಾರ ಸಿದ್ದು ಪಾಟೀಲ, ಬಿ.ಬಿ.ಅಸೂಟಿ, ಅಶೋಕ ಮಂದಾಲಿ ಇತರರು ಇದ್ದರು.

## ರಾಷ್ಟ್ರೀಯ ಲೋಕ ಅದಾಲತ್

**ಚಿಕ್ಕಮಗಳೂರು:** ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ನಿರ್ದೇಶನದಂತೆ ಮಾರ್ಚ್ 08 ರಂದು ರಾಷ್ಟ್ರೀಯ ಲೋಕ ಅದಾಲತ್ನ್ನು ಆಯೋಜಿಸಲಾಗಿದೆ. ಈ ಲೋಕ ಅದಾಲತ್ನಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಸಾರ್ವಜನಿಕರು, ಕಕ್ಷಿದಾರರು ಭಾಗವಹಿಸಿ ಪ್ರಕರಣಗಳನ್ನು ಇತ್ಯರ್ಥ ಪಡಿಸಿಕೊಳ್ಳಲು ಅವಕಾಶವಿದ್ದು ಸಾರ್ವಜನಿಕರು ರಾಷ್ಟ್ರೀಯ ಲೋಕ ಅದಾಲತ್ನ ಸದುಪಯೋಗ ಪಡೆದುಕೊಳ್ಳುವಂತೆ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಹನುಮಂತಪ್ಪ .ವಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮೆಸ್ಕಾಂ ಜನ ಸಂಪರ್ಕ ಸಭೆ

**ಚಿಕ್ಕಮಗಳೂರು:** ಮೆಸ್ಕಾಂ ಆಲ್ದೂರು ಉಪವಿಭಾಗ ಕಛೇರಿಯಲ್ಲಿ ಫೆಬ್ರವರಿ 15 ರಂದು ಬೆಳಿಗ್ಗೆ 11.00 ಗಂಟೆಗೆ ಜನ ಸಂಪರ್ಕ ಸಭೆ ಏರ್ಪಡಿಸಲಾಗಿದೆ.ಮೆಸ್ಕಾಂನ ಅಧಿಕಾರಿಗಳು ಭಾಗವಹಿಸಲಿದ್ದು, ಈ ಸಭೆಯಲ್ಲಿ ಸಂಬಂಧಪಟ್ಟ ಪ್ರದೇಶದ ಗ್ರಾಹಕರ ಅಹವಾಲುಗಳನ್ನು ಸ್ವೀಕರಿಸುವುದರಿಂದ ಗ್ರಾಹಕರು ಈ ಅವಕಾಶವನ್ನು ಸದುಪಯೋಗಪಡಿಸಿಕೊಳ್ಳುವಂತೆ ಮೆಸ್ಕಾಂನ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅರ್ಜಿ ಆಹ್ವಾನ

**ಚಿಕ್ಕಮಗಳೂರು:** ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ ವತಿಯಿಂದ ಚಿಕ್ಕಮಗಳೂರು ಪ್ರಾದೇಶಿಕ ಕೇಂದ್ರದಲ್ಲಿ 2024-25ನೇ ಸಾಲಿನ ಶೈಕ್ಷಣಿಕ ವರ್ಷದಲ್ಲಿ ಪ್ರಥಮ ವರ್ಷದ ಬಿ.ಎ.,/ ಬಿ.ಕಾಂ, ಬಿ.ಎಸ್ಸಿ., ಬಿ.ಸಿ.ಎ, ಬಿ.ಬಿ.ಎ, ಬಿ.ಎಲ್.ಎಸ್ಸಿ/ಎಂ.ಎಲ್.ಐ.ಎಸ್ಸಿ, ಎಂ.ಎ/ಎಂ.ಕಾಂ, ಎಂ.ಎಸ್ಸಿ/ಎಂ.ಬಿ.ಎ/ಡಿಪ್ಲೊಮೋ ಸರ್ಟಿಫಿಕೇಟ್ ಕೋರ್ಸ್ಗಳಿಗೆ ಪ್ರವೇಶಾತಿಗೆ ಅರ್ಜಿ ಆಹ್ವಾನಿಸಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ಕ.ರಾ.ಮು.ವಿ ಪ್ರಾದೇಶಿಕ ನಿರ್ದೇಶಕರು ಗುರುದತ್ ಕೆ.ಪಿ. ಇವರನ್ನು ಅಥವಾ ದೂ.ಸಂ. 8088716236, 8951686199, 9449396155, 9481478448, 8971124601 ನ್ನು ಸಂಪರ್ಕಿಸಬಹುದಾಗಿದೆ ಎಂದು ಕ.ರಾ.ಮು.ವಿ ಪ್ರಾದೇಶಿಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮಾರ್ಚ್ ಅಂತ್ಯದೊಳಗೆ ಜೆಜೆಎಂ ಕಾಮಗಾರಿ ಪೂರ್ಣಗೊಳಿಸಿ : ಮಧು ಬಂಗಾರಪ್ಪ

**ಶಿವಮೊಗ್ಗ:** ಜಿಲ್ಲೆಯಲ್ಲಿ ಪ್ರತಿ ಮನೆಗೆ ಶುದ್ದ ಕುಡಿಯುವ ನೀರು ಪೂರೈಸುವ ಜಲ ಜೀವನ ಮಿಷನ್ ಕಾಮಗಾರಿಗಳನ್ನು ಮಾರ್ಚ್ ಅಂತ್ಯದೊಳಗೆ ಪೂರ್ಣಗೊಳಿಸಬೇಕು ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಮಧು ಬಂಗಾರಪ್ಪ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಲೋಕೋಪಯೋಗಿ ಭವನದ ಸಭಾಂಗಣದಲ್ಲಿ ಬುಧವಾರ ಏರ್ಪಡಿಸಲಾಗಿದ್ದ ವಿವಿಧ ಇಲಾಖೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜೆಜೆಎಂ ಯೋಜನೆಯನ್ನು ತ್ವರಿತ ಗತಿಯಲ್ಲಿ ಪೂರೈಸಬೇಕು. ಇಲ್ಲಿಯವರೆಗೆ ಶೇ.60 ರಿಂದ 70 ಭಾಗ ಮಾತ್ರ ಕಾಮಗಾರಿ ಪೂರ್ಣಗೊಂಡಿದೆ. ಕಾಮಗಾರಿಗೆ ಸಂಬಂಧಿಸಿದಂತೆ ಅರಣ್ಯ ಸೇರಿಂದತೆ ಇತರೆ ವಿಷಯಗಳನ್ನು ಜಿಲ್ಲಾಧಿಕಾರಿಗಳು, ಅರಣ್ಯ ಇಲಾಖೆ ಅಧಿಕಾರಿಗಳೊಂದಿಗೆ ಚರ್ಚಿಸಿ, ಸರಿಪಡಿಸಿಕೊಂಡು ಶೀಘ್ರವಾಗಿ ಕಾಮಗಾರಿ ಪೂರ್ಣಗೊಳಿಸಬೇಕು. ಈ ಕುರಿತು ನಾನು ಸರ್ಕಾರದ ಕಾರ್ಯದರ್ಶಿಯವರೊಂದಿಗೆ ಮಾತನಾಡುತ್ತೇನೆ. ಮಾರ್ಚ್ ಅಂತ್ಯದೊಳಗೆ ಶೇ.95 ರಷ್ಟು ಕೆಲಸ ಆಗಬೇಕು ಎಂದು ಸೂಚಿಸಿದರು.

ಗ್ರಾಮೀಣ ಕುಡಿಯುವ ನೀರು ಸರಬರಾಜು ಇಲಾಖೆಯ ಕಾರ್ಯಪಾಲಕ ಅಭಿಯಂತರ ರೂಪ್ಲಾನಾಯ್ಕ ಮಾತನಾಡಿ, ಜಿಲ್ಲೆಯಲ್ಲಿ ಜೆಜೆಎಂ ಯೋಜನೆಯಡಿ ಶೇ. 67.5 ಪ್ರಗತಿ ಸಾಧಿಸಲಾಗಿದೆ. 2528 ಕಾಮಗಾರಿಗಳಲ್ಲಿ 1707 ಕಾಮಗಾರಿ ಪೂರ್ಣಗೊಂಡಿದ್ದು, 821 ಕಾಮಗಾರಿಗಳು ಪ್ರಗತಿಯಲ್ಲಿವೆ ಎಂದರು.



ಸಚಿವರು, ಶಿಕಾರಿಪುರ-ಸೊರಬ-ಆನವಟ್ಟಿ ಸೇರಿ 154 ಗ್ರಾಮಗಳಿಗೆ ನೀರು ನೀಡುವ ಬಹುಗ್ರಾಮ ಯೋಜನೆಯನ್ನು ತ್ವರಿತವಾಗಿ ಪೂರ್ಣಗೊಳಿಸಬೇಕು. ಬಹುಗ್ರಾಮ ಮತ್ತು ಇತರೆ ಯೋಜನೆಗಳಿಗೆ ಒಳಪಡದ ಗ್ರಾಮಗಳನ್ನು ಸಹ ಗುರುತಿಸಿ ನೀರು ಕೊಡಲು ವ್ಯವಸ್ಥೆ ಮಾಡಬೇಕು. ಹಾಗೂ ಕುಂಸಿ ಬಹು ಗ್ರಾಮ ಯೋಜನೆಯನ್ನು ಕೈಗೆತ್ತಿಕೊಂಡು ಕಾರ್ಯಾರಂಭಿಸುವಂತೆ ತಿಳಿಸಿದರು.

ಜಿಲ್ಲೆಯಲ್ಲಿ ಎಷ್ಟು ಶಾಲೆಗಳು, ಪಿಹೆಚ್ಸಿಗಳು ಮತ್ತು ಅಂಗನವಾಡಿಗಳಲ್ಲಿ ಕುಡಿಯುವ ನೀರಿನ ಸಂಪರ್ಕ ಇದೆ ಮತ್ತು ಇಲ್ಲವೆಂದು ಡಿಡಿಪಿಐ, ಡಿಹೆಚ್ಓ ಮತ್ತು ಮಹಿಳಾ ಮತ್ತು ಮಕ್ಕಳ ಅಭಿವೃದ್ದಿ ಇಲಾಖೆಯ ಅಧಿಕಾರಿಗಳು ವರದಿ ನೀಡಬೇಕು. ಕುಡಿಯುವ ನೀರಿನ ಸಂಪರ್ಕವಿಲ್ಲದ ಶಾಲೆಗಳು, ಅಂಗನವಾಡಿ ಮತ್ತು ಪಿಹೆಚ್ಸಿಗಳಿಗೆ ಗ್ರಾಮೀಣ ಕುಡಿಯುವ ನೀರು ಸರಬರಾಜು ಇಲಾಖೆಯಿಂದ ಸಂಪರ್ಕ ಒದಗಿಸಲಾಗುವುದು ಎಂದು ತಿಳಿಸಿದರು.

ಹಾಗೂ ಬಹುಮುಖ್ಯವಾಗಿ ಬೇಸಿಗೆಯಲ್ಲಿ

**ಂಆರೋಗ್ಯ ಇಲಾಖೆ** : ಜಿಲ್ಲೆಯಲ್ಲಿ ಮುಖ್ಯವಾಗಿ ಮಲೆನಾಡು ಭಾಗದಲ್ಲಿ ಕೆಎಫ್ಡಿ ಪ್ರಕರಣಗಳು ಹೆಚ್ಚದಂತೆ ಜನರಲ್ಲಿ ಅರಿವು ಮೂಡಿಸಬೇಕು. ಕೆಎಫ್ಡಿ ಹರಡಲು ಕಾರಣವಾಗುವ ಉಣ್ಣಿಗಳು ಸಕ್ರಿಯವಾಗಿರುವ ಸಮಯದಲ್ಲಿ ಕಾಡಿಗೆ, ಹೊರಗೆ ಜನರು ಹೋಗದಂತೆ ತಿಳುವಳಿಕೆ ನೀಡಬೇಕು. ಜ್ವರದ ಲಕ್ಷಣಗಳು ಕಂಡು ಬಂದ ತಕ್ಷಣ ತಾವೇ ಚಿಕಿತ್ಸೆ ಮಾಡಿಕೊಳ್ಳದೇ ಹತ್ತಿರದ ಸರ್ಕಾರಿ ಆಸ್ಪತ್ರೆಗೆ ತೆರಳಿ ಪರೀಕ್ಷಿಸಿಕೊಳ್ಳಬೇಕೆಂದು ತಿಳಿಸಿದರು.

ಡಿಎಸ್ಓ ಡಾ.ನಾಗರಾಜ್ ನಾಯ್ಕ್ ಮಾತನಾಡಿ, ನವೆಂಬರ್ ಮಾಹೆಯಿಂದಲೇ ಉಣ್ಣಿ, ಜ್ವರ ಮತ್ತು ಮಂಗನ ಸಾವು ಕುರಿತು ಸರ್ವೇಕ್ಷಣೆ ಕೈಗೊಳ್ಳಲಾಗಿದೆ. ಪಾಸಿಟಿವ್ ಪ್ರಕರಣಗಳನ್ನು ಎಬಿಎಆರ್ಕೆ ಯೋಜನೆಯಡಿ ರೆಫರ್ ಮಾಡಿ ಚಿಕಿತ್ಸೆ ನೀಡಲಾಗುತ್ತಿದೆ ಎಂದರು.

ಸಿಮ್ಸ್ ನಿರ್ದೇಶಕ ಡಾ.ವಿರೂಪಾಕ್ಷಪ್ಪ ಮಾತನಾಡಿ, ಸಿಮ್ಸ್ ಆವರಣದಲ್ಲಿ ಪಿಎಂ ಅಭಿಮ್ ಯೋಜನೆಯಡಿ 50 ಹಾಸಿಗೆ ಸಾಮರ್ಥ್ಯದ ಕ್ರಿಟಿಕಲ್ ಕೇರ್ ಮತ್ತು ಹೈಟೆಕ್ ಪ್ರಯೋಗಶಾಲೆ ಮಂಜೂರಾಗಿದ್ದು ಟೆಂಡರ್ ಕರೆಯಲಾಗಿದೆ ಎಂದರು.

ಸಚಿವರು, ಈ ತಿಂಗಳ ಕೊನೆಯಲ್ಲಿ ಸಿಮ್ಸ್ ಆವರಣದಲ್ಲಿ ಪೂರ್ಣಗೊಂಡಿರುವ ಎಂಸಿಹೆಚ್ ಆಸ್ಪತ್ರೆ, ಲೈಬ್ರರಿ, ರೀಜಿನಲ್ ವ್ಯಾಕ್ಸಿನ್ ಸೆಂಟರ್ನ್ನು ಉದ್ಘಾಟಿಸಲಾಗುವುದು ಎಂದರು.

ಜಿಲ್ಲಾಸ್ಪತ್ರೆಗೆ ಪ್ರಸ್ತಾವನೆ ಸಲ್ಲಿಸಲು ಸೂಚನೆ: ಪ್ರಸ್ತುತ ಮೆಗ್ಗಾನ್ ಆಸ್ಪತ್ರೆಯು ಸಿಮ್ಸ್ ಬೋಧನಾ ಆಸ್ಪತ್ರೆಯೂ ಆಗಿದ್ದು ಕಾರ್ಯದೊತ್ತಡ ಹೆಚ್ಚಿದೆ. ಅನೇಕ ಕೊರತೆಗಳೂ ಇವೆ. ಮೆಗ್ಗಾನ್ ಆಸ್ಪತ್ರೆಯಲ್ಲಿ ಸಿಬ್ಬಂದಿ ಕೊರತೆಯೂ ಇದೆ. ಆಸ್ಪತ್ರೆಯಲ್ಲಿ ದಟ್ಟಣೆ, ರೋಗಿಗಳ ಸಂಖ್ಯೆಯೂ ಹೆಚ್ಚುತ್ತಿದ್ದು ಇತರೆ ಜಿಲ್ಲೆಗಳಿಗೆ ತೆರಳುತ್ತಿದ್ದಾರೆ.

ಆದ್ದರಿಂದ ಜನರಿಗೆ ಅನುಕೂಲವಾಗುವಂತಹ ಸ್ಥಳದಲ್ಲಿ 400 ರಿಂದ 500 ಬೆಡ್ ಸಾಮರ್ಥ್ಯದ ಆಸ್ಪತ್ರೆ ನಿರ್ಮಿಸಲು ನಗರದಲ್ಲಿ ಒಂದು ಉತ್ತಮ ಜಾಗವನ್ನು ನೋಡಿ, ಯೋಜನೆ ರೂಪಿಸಬೇಕು. ಈ ನಿಟ್ಟಿನಲ್ಲಿ ಜಿಲ್ಲಾಧಿಕಾರಿಗಳು ಇತರೆ ಅಧಿಕಾರಿಗಳೊಂದಿಗೆ ಚರ್ಚಿಸಿ ಒಂದು ಸೂಕ್ತ ಸ್ಥಳ ನೋಡಿ, ಯೋಜನೆ ರೂಪಿಸಿ, ಪ್ರಸ್ತಾವನೆ ಸಲ್ಲಿಸುವಂತೆ ತಿಳಿಸಿದರು.

ಸಭೆಯಲ್ಲಿ ಜಿಲ್ಲಾಧಿಕಾರಿ ಗುರುದತ್ತ ಹೆಗಡೆ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಜಿ.ಕೆ.ಮಿಥುನ್ ಕುಮಾರ್, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಚಂದ್ರಭೂಪಾಲ್, ಮೆಗ್ಗಾನ್ ಆಸ್ಪತ್ರೆ ವೈದ್ಯಕೀಯ ಅಧೀಕ್ಷಕರು, ಜಿಲ್ಲಾ ಶಸ್ತ್ರಚಿಕಿತ್ಸಕರು, ಆರೋಗ್ಯ ಇಲಾಖೆ ಅಧಿಕಾರಿಗಳು, ನಗರ ನೀರು ಸರಬರಾಜು ಮಂಡಳಿ ಎಇ , ಇತರೆ ಅಧಿಕಾರಿಗಳು ಪಾಲ್ಗೊಂಡಿದ್ದರು.

## ಕ್ಷೌರಿಕರು ಪರಿಶಿಷ್ಟ ಜಾತಿಯ ಒಂದು ಭಾಗ - ಕೃಷ್ಣಾ ಹಡಪದ ಅಭಿಮತ



**ಗದಗ** : ಸವಿತಾ ಸಮಾಜಕ್ಕೆ ಸಂಬಂಧಿಸಿದ 27 ಉಪಪಂಗಡದ ಎಲ್ಲಾ ಕ್ಷೌರಿಕರು ಪರಿಶಿಷ್ಟ ಜಾತಿಯ ಒಂದು ಭಾಗ ಅಂದರೆ ತಪ್ಪಾಗಲಾರದು ಎಂದು ಗದಗ ಜಿಲ್ಲಾ ಸವಿತಾ ಸಮಾಜದ ಜಿಲ್ಲಾಧ್ಯಕ್ಷರು ಹಾಗೂ ಶ್ರೀ ಗದ್ವಾಲ್ ಜಮಲಮ್ಮ ದೇವಿ ದೇವಸ್ಥಾನ ಟ್ರಸ್ಟ್ ಕಮೀಟಿಯ ಮಾಜಿ ಅಧ್ಯಕ್ಷರಾದ ಕೃಷ್ಣಾ ಎಚ್. ಹಡಪದ ಅಭಿಪ್ರಾಯಪಟ್ಟರು.

ಅವರು ಸವಿತಾ ಮಹರ್ಷಿ ಜಯಂತಿ ಅಂಗವಾಗಿ ಸವಿತಾ ಸಮಾಜದ ಬಾಂಧವರೊಂದಿಗೆ ಸೇರಿ ಗದಗ ಜಿಲ್ಲಾಡಳಿತ ಭವನದಿಂದ ಬೈಕ್ ರಾಲಿ ಮೂಲಕ ಹೊರಡಿ ಗಂಗಿಮಡಿ ರೋಡ ಮಧ್ಯದಲ್ಲಿರುವ ರಾಜ್ಯದ ಪ್ರಥಮ ಸವಿತಾ ಮಹರ್ಷಿ ವೃತ್ತಕ್ಕೆ ತಲುಪಿ ವೃತ್ತಕ್ಕೆ ಗೌರವಗಳೊಂದಿಗೆ ಮಾಲಾರ್ಪಣೆ ಮಾಡಿ ಘಟಾಕಿ ಸಿಡಿಸಿ ಸಿಹಿ ಹಂಚಿ ಸಂಭ್ರಮಿಸಲಾಯಿತು ಈ ಒಂದು ಕಾರ್ಯಕ್ರಮದ ಅಧ್ಯಕ್ಷತೆ ಒಹಿಸಿ ಮಾತನಾಡಿ ಭಾರತದ ಸರ್ವೋಚ್ಚ ನ್ಯಾಯಾಲಯ ರಾಜ್ಯ ಸರ್ಕಾರಗಳಿಗೆ ಒಳಮೀಸಲಾತಿ ನೀಡುವ ನಿರ್ದೇಶನವನ್ನು ನೀಡಿದ್ದು ಈ ಕುರಿತು ಹಿಂದುಳಿದ ವರ್ಗಗಳ ಆಯೋಗದ ವರದಿಯನ್ನು ಸದನದಲ್ಲಿ ಮಂಡಿಸಿ ಮುಂದಿನ ಕ್ರಮ ಕೈಗೊಳ್ಳಬೇಕು ಎಂಬ ಮಾಜಿ ಸಚಿವರು ಎಚ್. ಆಂಜನೇಯ ಅವರ ಮಾತುಗಳನ್ನು ಕೃಷ್ಣ ಎಚ್. ಹಡಪದ ಸ್ವಾಗತಿಸಿ ಮಾತನಾಡಿ ನಾವುಗಳು ಪ್ರಬಲ ಜಾತಿಗಳ ಮುಖಂಡರ ಹಾಗೂ ಬಲಿಷ್ಟ ಜಾತಿಗಳ ದೌರ್ಜನ್ಯಕ್ಕೆ ಮುಲಾಜಿಗೆ ಹೆದರಿ ಇವತ್ತು ಹಿಂದುಳಿದ ವರ್ಗದಲ್ಲಿ ಅಪಮಾನಕ್ಕೆ ಜಾತಿ ನಿಂದನೆಗೆ, ಅಪಹಾಸ್ಯಕ್ಕೆ ಗುರಿಯಾಗಿ ಹಿಂದುಳಿದವರಲ್ಲಿ ಅತೀ ಹಿಂದುಳಿದವರಾಗಿ ಉಳಿದಿದ್ದೆವೆ ಎಂದು ಹೇಳಿದರಲ್ಲದೆ ಇನ್ನು ಮುಂದೆ ಯಾರಿಗೂ ಹೆದರುವ ಅವಶ್ಯಕತೆ ಬೇಡ ಹೆದರಿಸುವವರ ವಿರೂದ್ದ ಹೋರಾಡಲು ಗದಗ ಜಿಲ್ಲಾ ಸವಿತಾ ಸಮಾಜವು ಸನ್ನದ್ದವಾಗಿದೆ ಮತ್ತು ಸಮಾಜದ ಕಟ್ಟ ಕಡೆಯವರೆಗೂ ಕ್ಷೌರ ಮಾಡುವುದು ನಮ್ಮ ಕ್ಷೌರಿಕ ಧರ್ಮವಾಗಿದೆ ಈ ನಿಟ್ಟಿನಲ್ಲಿ ಎಲ್ಲಾ ದಲಿತ ಸಮುದಾಯದ ಬಂಧು ಬಾಂದವರಿಗೆ ಕ್ಷೌರ ಸೇವೆಯನ್ನು ನೀಡಬೇಕಾಗಿ ರಾಜ್ಯದ ಎಲ್ಲಾ ಕ್ಷೌರಿಕರಲ್ಲೂ ಕೃಷ್ಣಾ ಎಚ್. ಹಡಪದ ಮನವಿ ಮಾಡಿ ಕರೆ ನಿಡಿದರು ಅಥಿತಿಗಳಾಗಿ ಬಾಗವಹಿಸಿದ ದಾವಣಗೇರಿ ಸವಿತಾ ಸಮಾಜದ ಮುಖಂಡರಾದ ವೆಂಕಟೇಶ ಅವರು ಮಾತನಾಡಿ ಜಾತಿ ಬೇಧವಿಲ್ಲದೆ ರೋಗ ರುಜಿನುಗಳನ್ನು ಲೆಕ್ಕಿಸದೆ ಮಾಡುವ ವೃತ್ತಿ ಕ್ಷೌರಿಕ ವೃತ್ತಿ, ನಿಷೇಧಿತ (ಹಜಾಮ) ಎಂಬ ಪದ ಬಳಸುವುದರಿಂದ ನಮ್ಮ ಸವಿತಾ ಸಮಾಜಕ್ಕೆ ಕ್ಷೌರಿಕ ವೃತ್ತಿ ಮಾಡುವ ರಾಜ್ಯದ ಎಲ್ಲ ಕೇಶ ವಿನ್ಯಾಸಕರಿಗೆ ತುಂಬಲಾರದ ನೋವುಂಟಾಗುತ್ತಿದೆ ಈ ವಿಷಯವನ್ನು ಹಿರಿಯರು ಹಾಗೂ ಕಾನೂನು ಸಚೀವರಾದ ಎಚ್.ಕೆ.ಪಾಟೀಲರು ಹಾಗೂ ಕರ್ನಾಟಕ ಸರ್ಕಾರವು ಗಂಭೀರವಾಗಿ ಪರಿಗಣಿಸಿ ತಕ್ಷಣ ಸಚಿವ ಸಂಪುಟ ಸಭೆಯಲ್ಲಿ ಯಾರೇ ಈ ಪದ ಬಳಕೆ ಮಾಡಿದರೂ, ಅವರಿಗೆ ತಕ್ಷಣ ಶಿಕ್ಷೆ ಆಗುವಂತಹ ಕಾಯ್ದೆ ಜಾರಿಗೆ ತರಬೇಕು ಎಂದು ಆಗ್ರಹಿಸಿದರು

ಧಾನಿಗಳು ಹಾಗೂ ಜಿಲ್ಲಾ ಸವಿತಾ ಸಮಾಜದ ಪ್ರಮುಖ ನಾಯಕರಾದ ಪರಶುರಾಮ ಬಳ್ಳಾರಿ ಅವರು ಪ್ರಾಸ್ತಾವಿಕವಾಗಿ ಮಾತನಾಡಿದರು

ಸವಿತಾ ಮಹರ್ಷಿ ಜಯಂತಿ ನಿರ್ವಹಣೆ ಸಮಿತಿ ಅಧ್ಯಕ್ಷರಾದ ನವೀನ ಕೊಟೇಕಲ್ಲ ನಿರೂಪಿಸಿದರು ಉಪಾಧ್ಯಕ್ಷರಾದ ವಿಜಯ ಬುದೂರ ಸ್ವಾಗತಿಸಿದರು ಸದಶ್ಯ ಸುದೀರ ಮಾನೆ ವಂದನಾರ್ಪಣೆ ಗೈದರು

ಈ ಸಂದರ್ಭದಲ್ಲಿ ಗದಗ ಸವಿತಾ ಸಮಾಜ ಸುಧಾರಣಾ ಸಂಘದ ಅಧ್ಯಕ್ಷರಾದ ಪರಶುರಾಮ ಕೋಟೆಕಲ್ಲ. ಉಪಾಧ್ಯಕ್ಷರಾದ ಜಂಬಣ್ಣ ಕಡಮೂರ, ಶ್ರೀ ಸಂತಸೇನಾ ಮಹರಾಜ ನಾಭೀಕ್ ಮರಾಠ ಸಮಾಜದ ಜಿಲ್ಲಾಧ್ಯಕ್ಷರಾದ ರಾಜು ಮಾನೆ ನಗರ ಅಧ್ಯಕ್ಷರಾದ ವಿಕಾಸ ಕ್ಷೀರಸಾಗರ ಬೆಟಗೇರಿ ಸವಿತಾ ಸಮಾಜದ ಅಧ್ಯಕ್ಷರಾದ ರಮೇಶ ರಾಂಪೂರ ಹಿರಿಯರಾದ ಹನಮಂತಪ್ಪ ರಾಂಪೂರ ಪಾಂಡು ಕಾಳೆ. ಬಾಲರಾಜ ಕೊಟೇಕಲ್ಲ ದೀಪಕ ಮಾನೆ, ಹೇಮಂತ ವಡ್ಡೆಪಲ್ಲಿ, ಕೀರಣ ರಾಂಪೂರ ರವಿಕುಮಾರ ಹಡಪದ ತುಕಾರಾಮ ಮಾನೆ ಸುರೇಶ ಬುದೂರ ಶ್ರೀನಿವಾಸ ಕೊಟೇಕಲ್ಲ ಜಿಲ್ಲಾ ಖಜಾಂಚಿ ಅರುಣ ರಾಂಪೂರ, ಪ್ರ. ಕಾರ್ಯದರ್ಶಿ ಮಂಜುನಾಥ ಮಾನೆ ಪ್ರಮುಖ ಯುವ ನಾಯಕರಾದ ಸುನೀಲ ರಾಯಚೂರ ಕೃಷ್ಣಾ ಬುದೂರ ವೆಂಕಟೇಶ ಕೊಟೇಕಲ್ಲ ವಿಶಾಲ ಮಾನೆ ವಿನಾಯಕ ರಾಯಚೂರ ಶ್ರೀಧರ ಕಡಬೂರ, ಕಾರ್ತಿಕ ಆಗಲಾವೆ, ಅಕ್ಷಯ ಮಾನೆ. ಸಾಗರ ಕೊಟೇಕಲ್ಲ ಸುರೇಶ ರಾಂಪೂರ ಗೋಪಾಲ ರಾಂಪೂರ ಹಾಗೂ ಸಮಾಜದ ನೂರಾರು ಪ್ರಮುಖರು ಹಾಜರಿದ್ದು ರಾಜ್ಯದ ಪ್ರಥಮ ಸವಿತಾ ಮಹರ್ಷಿ ವೃತ್ತಕ್ಕೆ ಮಾಲಾರ್ಪಣೆ ಮಾಡುವ ಮೂಲಕ ಗೌರವ ಸಮರ್ಪಿಸಿದರು.

## ಎಸ್ಸೆಸ್ಸೆಫ್ ಚಿಕ್ಕಮಗಳೂರು ಜಿಲ್ಲೆಗೆ ನೂತನ ಸಾರಥ್ಯ



**ಚಿಕ್ಕಮಗಳೂರು:** ಕರ್ನಾಟಕ ರಾಜ್ಯ ಸುನ್ನೀ ಸ್ಟೂಡೆಂಟ್ಸ್ ಫೆಡರೇಷನ್ (ರಿ.) ಎಸ್ಸೆಸ್ಸೆಫ್ ಚಿಕ್ಕಮಗಳೂರು ಜಿಲ್ಲೆ ಇದರ ವಾರ್ಷಿಕ ಕೌನ್ಸಿಲ್ ಇತ್ತೀಚೆಗೆ ವಿಜಯಪುರ ನೂರುಲ್ ಇಸ್ಲಾಂ ಮದ್ರಸಾ ಹಾಲ್ ನಲ್ಲಿ ನಡೆಯಿತು. ಅಧ್ಯಕ್ಷರಾದ ಶಂಸುದ್ದೀನ್ ಶೈಖ್ ಬದ್ರಿಯಾ ರವರ ಸಭಾಧ್ಯಕ್ಷತೆಯಲ್ಲಿ ನಡೆದ ಸದರಿ ಸಭೆಯನ್ನು ಫಾಝಿಲ್ ಸಅದಿ ಉದ್ಘಾಟಿಸಿ ಶುಭ ಹಾರೈಸಿದರು. ಶಾಧುಲಿ ಜುಮಾ ಮಸ್ಜಿದ್ ಮುದರ್ರಿಸರಾದ ಮಾಚಾರು ಇಸ್ಮಾಯಿಲ್ ಸಅದಿಯವರು ಉದ್ಘಾಟಿಸಿ ಸಂಘಟನಾ ಕಾರ್ಯಾಚರಣೆ ಬಗ್ಗೆ ಮಾತನಾಡಿದರು. ವೀಕ್ಷಕರಾಗಿ ಎಸ್ಸೆಸ್ಸೆಫ್ ರಾಜ್ಯ ಸದಸ್ಯರಾದ ರಶೀದ್ ಮಡಂತ್ಯಾರು ಸಮ್ಮುಖದಲ್ಲಿ ಕಾರ್ಯದರ್ಶಿ ಅಲ್ತಾಫ್ ಮುಈನಿ ಸಮಿತಿಯ ವಾರ್ಷಿಕ ವರದಿ ಹಾಗೂ ವಾರ್ಷಿಕ ಆಯ - ವ್ಯಯ ಲೆಕ್ಕ ಮಂಡಿಸಿದ ಬಳಿಕ ನೂತನ ಸಮಿತಿಯನ್ನು ಘೋಷಣೆ ಮಾಡಲಾಯಿತು. ಅಧ್ಯಕ್ಷರಾಗಿ ಅಲ್ತಾಫ್

ಸಖಾಫಿ ಅಲ್ ಮುಈನಿ ಹಂಡುಗುಳಿ , ಪ್ರಧಾನ ಕಾರ್ಯದರ್ಶಿಯಾಗಿ ಜಾಸಿರ್ ಹಿಮಮಿ ಸಖಾಫಿ ಬಾಳೆಹೊನ್ನೂರು, ಕೋಶಾಧಿಕಾರಿಯಾಗಿ ಅಡ್ವೊಕೇಟ್ ನೌಶಾದ್ ಅಲ್ ಬದ್ರಿಯಾ, ಉಪಾಧ್ಯಕ್ಷರಾಗಿ ಸಲೀಂ. ಕೆ. ಕುದ್ರೆಗುಂಡಿ, ಕ್ವಾಲಿಟಿ ಡೆವಲಪ್ಮೆಂಟ್ ಕಾರ್ಯದರ್ಶಿಯಾಗಿ ಹಸೈನಾರ್ ಆಲ್ದೂರು, ಕ್ಯಾಂಪಸ್ ಕಾರ್ಯದರ್ಶಿಯಾಗಿ ತಮೀಮ್ ಉಪ್ಪಳ್ಳಿ, ವಿಸ್ಡಮ್ ಕಾರ್ಯದರ್ಶಿಯಾಗಿ ಆದಂ ಉಪ್ಪಳ್ಳಿ, ಕಲ್ಚರಲ್ ಕಾರ್ಯದರ್ಶಿಯಾಗಿ ಖಲಂದರ್ ಮಸೀದಿಕೆರೆ, ದಅವಾ ಕಾರ್ಯದರ್ಶಿಯಾಗಿ ಸಲಾಂ ಹನೀಫಿ, ರೈನ್ ಬೋ ಕಾರ್ಯದರ್ಶಿಯಾಗಿ ಮೊಹಿದ್ದೀನ್ ಮಾಗುಂಡಿ, ಮೀಡಿಯಾ ಕಾರ್ಯದರ್ಶಿಯಾಗಿ ಸಲೀಂ ಬಿ ಕುದ್ರೆಗುಂಡಿ, ರೀಡ್ ಪ್ಲಾಸ್ ಕಾರ್ಯದರ್ಶಿಯಾಗಿ ನಿಜಾಮ್ ಮಾಗುಂಡಿ, ಐ.ಟಿ. ಕಾರ್ಯದರ್ಶಿ ಆಗಿ ಜುನೈದ್ ಹಂಡುಗುಳಿ, ಕಾರ್ಯಕಾರಿ ಸದಸ್ಯರಾಗಿ ನಿಜಾಮುದ್ದೀನ್ ಬದ್ರಿಯಾ, ಷರೀಫ್ ಕುದ್ರೆಗುಂಡಿ, ಫಾಝಿಲ್ ಸಅದಿ, ಜಬಿವುಲ್ಲಾ ಉಪ್ಪಳ್ಳಿ , ಝಾಕಿರ್ ಶಾಂತಿಪುರ, ರಮೀಝ್ ಬಾಳೆಹೊನ್ನೂರು, ಅಲ್ಫಾಝ್ ಎನ್.ಆರ್.ಪುರ, ಇರ್ಫಾನ್ ಶೆಟ್ಟಿಕೊಪ್ಪ, ಹಾರಿಸ್ ಮಾಗುಂಡಿ, ಅಬೂಬಕ್ಕರ್ ಮಾರ್ಝೂಕಿ ತರೀಕೆರೆ ಎಂಬವರನ್ನು ಆಯ್ಕೆ ಮಾಡಲಾಯಿತು. ಕಾರ್ಯಕ್ರಮದಲ್ಲಿ ಎಸ್ಸೆಸ್ಸೆಫ್ ರಾಜ್ಯ ಪ್ರಧಾನ ಕಾರ್ಯದರ್ಶಿ ಸಫ್ವಾನ್ ಚಿಕ್ಕಮಗಳೂರು, ಎಸ್ವೈಎಸ್ ಜಿಲ್ಲಾ ನಾಯಕರಾದ ಉಸ್ಮಾನ್ ಹಾಜಿ ಹಂಡುಗುಳಿ, ಕೆ.ಎಂ.ಜೆ ನಾಯಕರಾದ ಯೂಸುಫ್ ಹಾಜಿ ಉಪ್ಪಳ್ಳಿ, ಅಲ್ ಬದ್ರಿಯಾ ಮಸೀದಿ ಖತೀಬರಾದ ಷರೀಫ್ ಸಖಾಫಿ, ಮುಂತಾದವರು ಉಪಸ್ಥಿತರಿದ್ದರು. ಕಾರ್ಯದರ್ಶಿ ಅಲ್ತಾಫ್ ಮುಈನಿ ಸ್ವಾಗತಿಸಿ, ಜಾಸಿರ್ ಸಖಾಫಿ ವಂದಿಸಿದರು.

## ಚಿಕ್ಕಮಗಳೂರು: ಹಬ್ಬದ ಊಟಕ್ಕೆ ಬಂದು ಬಾವಿಗೆ ಬಿದ್ದ ಮಹಿಳೆ; ರಾತ್ರಿಯೆಲ್ಲಾ ನರಳಾಟ

**ಚಿಕ್ಕಮಗಳೂರು:** ಅಜ್ಜಂಪುರ ತಾಲೂಕಿನ ತಡಗಾ ಗ್ರಾಮದಲ್ಲಿ 40 ವರ್ಷದ ಮಹಿಳೆಯೊಬ್ಬರು ಆಕಸ್ಮಿಕವಾಗಿ ತಡೆಗೋಡೆ ಇಲ್ಲದ 20 ಅಡಿ ಆಳದ ಬಾವಿಗೆ ಬಿದ್ದು ತೀವ್ರಗಾಯಗೊಂಡಿದ್ದಾರೆ.ಹೊಳಕೆರೆ ತಾಲೂಕಿನ ಚಿಕ್ಕಜಾಜೂರಿನ ತಿಮ್ಮಕ್ಕ (40) ತಡಗಾ ಗ್ರಾಮದ ಸಂಬಂಧಿಕರ ಮನೆಗೆ ಹಬ್ಬದ ಊಟ–ಕ್ಕೆ ಬಂದಿದ್ದರು. ರಾತ್ರಿ ಆಕಸ್ಮಿಕವಾಗಿ ಕಾಲುಜಾರಿ ಬಾವಿಗೆ ಬಿದ್ದಿದ್ದಾರೆ. ರಾತ್ರಿಯಿಡೀ ಸಹಾಯಕ್ಕಾಗಿ ಅಳುತ್ತಿದ್ದರು. ದುರದೃಷ್ಟವಶಾತ್, ಯಾರೂ ಅವಳನ್ನು ಗಮನಿಸಲಿಲ್ಲ.ಮರುದಿನ ಆಕೆಯ ಕಿರುಚಾಟ ಕೇಳಿದ ಗ್ರಾಮಸ್ಥರು ಮಹಿಳೆಯನ್ನು ಪತ್ತೆ ಮಾಡಿದರು. ಕೂಡಲೇ ಅವರು ಅಗ್ನಿಶಾಮಕ ಮತ್ತು ತುರ್ತು ಸೇವಾ ಸಿಬ್ಬಂದಿಗೆ ಮಾಹಿತಿ ನೀಡಿದರು. ನಂತರ ಬಂದ ಸಿಬ್ಬಂದಿ ಆಕೆಯನ್ನು ರಕ್ಷಿಸಿದ್ದಾರೆ. ಮಹಿಳೆ ಸದ್ಯ ಆರೋಗ್ಯದಿಂದ ಇದ್ದಾರೆ.

## ವೀರೇಂದ್ರ ಹೆಗ್ಗಡೆ ಸಹೋದರನ 7.59 ಎಕರೆ ಭೂ ಮಂಜೂರಾತಿ ರದ್ದುಗೊಳಿಸಿದ ಕೋರ್ಟ್

**ಮಂಗಳೂರು:** ರಾಜ್ಯಸಭಾ ಸಂಸದ ಹಾಗೂ ಧರ್ಮಸ್ಥಳದ ಧರ್ಮಾಧಿಕಾರಿ ಡಿ.ವೀರೇಂದ್ರ ಹೆಗ್ಗಡೆ ಅವರ ಸಹೋದರ ಡಿ.ಹರ್ಷೇಂದ್ರಕುಮಾರ್ ಹೆಗಡೆ ಅವರಿಗೆ ದಕ್ಷಿಣ ಕನ್ನಡ ಜಿಲ್ಲೆಯ ಧರ್ಮಸ್ಥಳದಲ್ಲಿ ನೀಡಿದ್ದ 7.59 ಎಕರೆ ಕೃಷಿ ಭೂಮಿಯ ಅನುದಾನವನ್ನು ರದ್ದುಗೊಳಿಸಿ ಪುತ್ತೂರು ಸಹಾಯಕ ಆಯುಕ್ತರ ನ್ಯಾಯಾಲಯ ಆದೇಶ ಹೊರಡಿಸಿದೆ. ಮೈಸೂರು ಭೂ ಮಂಜೂರಾತಿ ನಿಯಮಗಳು, 1969 ರ ಅಡಿಯಲ್ಲಿ 1972 ರಲ್ಲಿ ಹರ್ಷೇಂದ್ರ ಅವರಿಗೆ ಭೂಮಿಯನ್ನು ನೀಡಲಾಗಿತ್ತು. ಆಗ ಸಲ್ಲಿಸಿದ ಅಫಿಡವಿಟ್ನಲ್ಲಿ, ವಾರ್ಷಿಕ 1,200 ರೂ. ಆದಾಯವಿರುವ 'ಭೂರಹಿತ' ಎಂದು ಗುರುತಿಸಿಕೊಂಡಿದ್ದ ಹರ್ಷೇಂದ್ರ, ಪಿತ್ರಾರ್ಜಿತವಾಗಿ ಅಥವಾ ಸ್ವಯಂ ಸಂಪಾದಿಸಿರುವ ಯಾವುದೇ ಸ್ವಂತ ಆಸ್ತಿ ಹೊಂದಿಲ್ಲ ಎಂದು ಹೇಳಿಕೊಂಡಿದ್ದರು, ಇದರಿಂದಾಗಿ ಭೂರಹಿತರಿಗೆ ಸರ್ಕಾರದ ನಿಬಂಧನೆಗಳ ಅಡಿಯಲ್ಲಿ ಭೂಮಿಗೆ ಅರ್ಹರಾಗಿದ್ದೇವೆ ಎಂದು ಮಾಹಿತಿ ನೀಡಿದ್ದರು.ಭೂ ಮಂಜೂರಾತಿಯನ್ನು ಬೆಳ್ತಂಗಡಿಯ ನಾಗರಿಕ ಸೇವಾ ಟ್ರಸ್ಟ್‌ನ ಕೆ ಸೋಮನಾಥ ನಾಯಕ್ ಅವರು ಪುತ್ತೂರು ಸಹಾಯಕ ಆಯುಕ್ತರ ನ್ಯಾಯಾಲಯದಲ್ಲಿ 2015 ರಲ್ಲಿ ಪ್ರಶ್ನಿಸಿದ್ದರು. ಇದಕ್ಕೆ ಪ್ರತಿಕ್ರಿಯಿಸಿದ ಹರ್ಷೇಂದ್ರ ಅವರು ಕರ್ನಾಟಕ ಹೈಕೋರ್ಟ್‌ನಲ್ಲಿ ರಿಟ್ ಅರ್ಜಿ ಸಲ್ಲಿಸಿದರು, ಅದರಲ್ಲಿ ಅವರು ತಮ್ಮ ಹೆಸರಿನಲ್ಲಿ ಯಾವುದೇ ಜಮೀನು ಹೊಂದಿಲ್ಲ, ಎಸಿ ನ್ಯಾಯಾಲಯಕ್ಕೆ ಈ ಬಗ್ಗೆ ವಿಚಾರಣೆ ಮಾಡುವ ಅಧಿಕಾರವಿಲ್ಲ ಎಂದು ಪುನರುಚ್ಚರಿಸಿದ್ದರು.ಹರ್ಷೇಂದ್ರ ಕುಮಾರ್ ಹೆಗಡೆ ಅವರು ಸಾಕಷ್ಟು ಜಮೀನು ಹೊಂದಿರುವವರಲ್ಲ ಮತ್ತು ಅವರು ಭೂಮಿಯನ್ನು ಪಡೆಯಲು ಅರ್ಹರಾಗಿದ್ದಾರೆ ಎಂಬ ಅರ್ಜಿದಾರರ ಮನವಿಯನ್ನು ಪರಿಶೀಲಿಸುವಂತೆ 2022 ರಲ್ಲಿ ರಿಟ್ ಅರ್ಜಿಯನ್ನು ವಿಲೇವಾರಿ ಮಾಡುವಾಗ, ಎಸಿ ಕೋರ್ಟ್ ಗೆ ಉಚ್ಚ ನ್ಯಾಯಾಲ ನಿರ್ದೇಶನ ನೀಡಿತ್ತು.ಒಅ ಕೇವಲ ನ್ಯಾಯಾಲಯದ ಮುಂದೆ ಸಲ್ಲಿಸಲಾದ ಆಕ್ಷೇಪಣೆಗಳ ಹೇಳಿಕೆಯ ಆಧಾರದ ಮೇಲೆ, ಈ ನ್ಯಾಯಾಲಯವು ಆಕ್ಷೇಪಣೆಗಳ ಹೇಳಿಕೆಯ ವಿಷಯಗಳನ್ನು ದೃಢೀಕರಿಸಿದೆ ಎಂದು ಭಾವಿಸುವುದಿಲ್ಲ. ಅರ್ಜಿದಾರರು ತಯಾರಿಸಿದ ವಸ್ತುಗಳ ಆಧಾರದ ಮೇಲೆ ಒಅ ಸ್ವತಂತ್ರವಾಗಿ ವಿಷಯವನ್ನು ಪರಿಗಣಿಸುತ್ತದೆ ಮತ್ತು ನಂತರ ಸೂಕ್ತ ಆದೇಶಗಳನ್ನು ನೀಡುತ್ತದೆ. 2012ರಲ್ಲಿ ವೀರೇಂದ್ರ ಹೆಗ್ಗಡೆ ಅವರು ತಮ್ಮ ಅವಿಭಜಿತ ಕುಟುಂಬದಲ್ಲಿ (ಹರ್ಷೇಂದ್ರ ಸೇರಿದಂತೆ) 4,671.06 ಎಕರೆ ಹೊಂದಿತ್ತು. ಆದರೆ ಕರ್ನಾಟಕ ಭೂಸುಧಾರಣಾ ಕಾಯ್ದೆ ಜಾರಿಯಾದ ನಂತರ 71,050 ಎಕರೆ ಜಮೀನು ಹೊಂದಿದ್ದಾರೆ ಹೀಗಾಗಿ ಭೂ ಮಂಜೂರಾತಿ ರದ್ದುಗೊಳಿಸುವಂತೆ ಎಸಿ ನ್ಯಾಯಾಲಯದಲ್ಲಿ ನಾಯಕ್ ಮನವಿ ಮಾಡಿದ್ದರು.



# ಸಿಗಂದೂರು ಲಾಂಚ್: ಪಾವತಿಯಾಗದ ವೇತನ; ಸಂಕಷ್ಟದಲ್ಲಿ ನೌಕರರ ಜೀವನ



**ತುಮರಿ:** ಸಾಗರ ತಾಲ್ಲೂಕಿನ ಶರಾವತಿ ಎಡದಂಡೆಯ ದ್ವೀಪ ಪ್ರದೇಶ ತುಮರಿ, ಸುಳ್ಳಳ್ಳಿ ಸೇರಿ ನಾಲ್ಕು ಗ್ರಾಮ ಪಂಚಾಯಿತಿಗೆ ಸಂಪರ್ಕ ಕಲ್ಪಿಸುವ ಸಿಗಂದೂರು ಲಾಂಚ್ ಸೇರಿದಂತೆ ಇಲ್ಲಿನ ನಾಲ್ಕು ಕಡವು ಮಾರ್ಗಗಳಲ್ಲಿನ ಅರೆಕಾಲಿಕ ನೌಕರರಿಗೆ 8 ತಿಂಗಳಿಂದ ವೇತನ ಪಾವತಿಯಾಗಿಲ್ಲ. ಇದರಿಂದಾಗಿ ಅವರೆಲ್ಲಾ ಸಂಕಷ್ಟಕ್ಕೆ ಸಿಲುಕಿದ್ದಾರೆ.

ಸಾಗರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಅಂಬಾರಗೋಡ್ಲು–ಕಳಸವಳ್ಳಿ, ಮುಪ್ಪಾನೆ, ಹಸಿರುಮಕ್ಕಿ, ತಲಗಳಲೆ (ಬೋಟ್)ಯಲ್ಲಿ ಕಡವುಮಾರ್ಗಗಳು ಇವೆ. ಇದರಲ್ಲಿ 5 ಲಾಂಚ್ ಹಾಗೂ 1 ಬೋಟಿನಲ್ಲಿ ಒಟ್ಟು 17 ಜನರು ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆಯಡಿ ಅರೆಕಾಲಿಕ ನೌಕರರಾಗಿ ಕಾರ್ಯನಿರ್ವಹಿಸುತ್ತಿದ್ದಾರೆ. ವೇತನ ಪಾವತಿಸುವ ವಿಚಾರದಲ್ಲಿ ಇಲಾಖೆ ನಿರ್ಲಕ್ಷ್ಯ ಧೋರಣೆ ಅನುಸರಿಸುತ್ತಿರುವುದಾಗಿ ಇವರು ಆರೋಪಿಸಿದ್ದಾರೆ.

ಪ್ರತಿನಿತ್ಯ ಬಿಸಿಲು, ಮಳೆ, ಚಳಿಯನ್ನು ಲೆಕ್ಕಿಸದೇ ಸೂರ್ಯೋದಯಕ್ಕೂ ಮುನ್ನ ಹೊರಟು ಸೂರ್ಯಾಸ್ತದ ನಂತರ ಮನೆ ಸೇರುವ ಕಷ್ಟದ ಕಾಯಕ ಇವರದು. ಇವರಿಗೆ ಪ್ರತಿ ತಿಂಗಳು ತಲಾ 15,097 ಪಾವತಿಸಬೇಕು. ಆದರೆ ಇಲಾಖೆ, 8 ತಿಂಗಳಿಂದ ಒಟ್ಟು 20.53 ಲಕ್ಷ ಮೊತ್ತ ಬಾಕಿ ಉಳಿಸಿಕೊಂಡಿದೆ.

'ಶರಾವತಿ ಹಿನ್ನೀರಿನ ನಾಲ್ಕು ಕಡವು ಮಾರ್ಗಗಳಲ್ಲಿ ಅಂಬಾರಗೋಡ್ಲು–ಕಳಸವಳ್ಳಿ ಹೊಳೆಬಾಗಿಲು ಮಾರ್ಗದ ಶರಾವತಿ–1, ಶರಾವತಿ–2, ಶರಾವತಿ –3 ಲಾಂಚ್ ಸೇವೆಯಿಂದಲೇ ದಿನಕ್ಕೆ ಸರಾಸರಿ 25,000 ದಿಂದ 30,000 ಆದಾಯ ಬರುತ್ತದೆ. ಆದರೆ ಜಲ ಸಾರಿಗೆ ಇಲಾಖೆಯ ಕೆಲವು ಹಿರಿಯ ಅಧಿಕಾರಿಗಳು ಇದನ್ನು ಮರೆ ಮಾಚುತ್ತಿದ್ದಾರೆ. ಕಡಿಮೆ ಆದಾಯ ಬರುತ್ತಿರುವುದಾಗಿ ಸರ್ಕಾರಕ್ಕೆ ತಪ್ಪು ಮಾಹಿತಿ ನೀ ಡುತ್ತಿದ್ದಾರೆ. ನೌಕರರ ವೇತನ ವಿಳಂಬಕ್ಕೆ ಇದು ಪ್ರಮುಖ ಕಾರಣ' ಎಂದು ಹೆಸರು ಬಹಿರಂಗಪಡಿಸಲು ಇಚ್ಛಿಸದ ಇಲಾಖೆಯ ಸಿಬ್ಬಂದಿಯೊಬ್ಬರು ಹೇಳಿದರು.

'ಅರೆಕಾಲಿಕ ನೌಕರರು, ಪ್ರವಾಸಿಗರು ಹಾಗೂ ಸ್ಥಳೀಯರಿಗೆ ಗುಣಮಟ್ಟದ ಸೇವೆ ಒದಗಿಸುತ್ತಿದ್ದಾರೆ. ಒತ್ತಡದ ನಡುವೆಯೂ ದಕ್ಷತೆಯಿಂದ ಕೆಲಸ ನಿರ್ವಹಿಸುತ್ತಿದ್ದಾರೆ.

ಇವರಿಗೆ ಸಮಯಕ್ಕೆ ಸರಿಯಾಗಿ ವೇತನ ನೀಡುವಲ್ಲಿ ಇಲಾಖೆಯ ಅಧಿಕಾರಿಗಳು ನಿರ್ಲಕ್ಷ್ಯ ವಹಿಸಿರುವುದು ಖಂಡನೀಯ. ಸ್ಥಳೀಯ ಶಾಸಕರು ಮಧ್ಯಪ್ರವೇಶಿಸಿ ಬಾಕಿ ವೇತನ ಪಾವತಿಗೆ ಕ್ರಮ ಕೈಗೊಳ್ಳಬೇಕು' ಎಂದು ಸ್ಥಳೀಯರಾದ ಶೇಖರ್ ಹಾಗೂ ನಾಗರಾಜ ಒತ್ತಾಯಿಸಿದರು.

**ಆತಂಕದಲ್ಲಿ ನೌಕರರು:**

ಶರಾವತಿ ತಟದಲ್ಲಿ ನಿರ್ಮಾಣ ಆಗುತ್ತಿರುವ ಸಿಗಂದೂರು ಸೇತುವೆ ಕಾಮಗಾರಿ ಈ ವರ್ಷದ ಅಂತ್ಯದಲ್ಲಿ ಲೋಕಾರ್ಪಣೆ ಆಗಲಿದೆ ಎಂಬಮಾತು ಕೇಳಿಬರುತ್ತಿದೆ. ಸೇತುವೆ ಪೂರ್ಣಗೊಂಡರೆ ತಮ್ಮನ್ನು ಕೆಲಸದಿಂದ ತೆಗೆದು ಹಾಕಬಹುದು ಎಂಬ ಆತಂಕ ನೌಕರರಲ್ಲಿ ಮನೆಮಾಡಿದೆ. ಹಾಗೊಮ್ಮೆ ಕೆಲಸದಿಂದ ಬಿಡುಗಡೆಗೊಳಿಸಿದರೆ ಜೀವನ ನಿರ್ವಹಣೆಗೆ ಮುಂದೇನು ಮಾಡಬೇಕು ಎಂಬ ಪ್ರಶ್ನೆಯೂಅವರನ್ನು ಕಾಡುತ್ತಿದೆ.

'ವೇತನ ಪಾವತಿಯಾಗದೇ ಇರುವುದರಿಂದ ಮನೆಗೆ ದಿನಸಿ ಖರೀದಿಸಲೂ ಆಗುತ್ತಿಲ್ಲ. ಮಕ್ಕಳ ಓದು ಸೇರಿ ಇತರೆ ಖರ್ಚುವೆಚ್ಚಕ್ಕೆ ಹಣಹೊಂದಿಸುವುದು ಕಷ್ಟವಾಗಿದೆ.ಶೀಘ್ರ ವೇತನ ಬಿಡುಗಡೆಮಾಡಿದರೆ ಅನುಕೂಲವಾಗಲಿದೆ' ಎಂದು ಹೆಸರು ಬಹಿರಂಗಪಡಿಸಲು ಇಚ್ಛಿಸದ ನೌಕರರೊಬ್ಬರು ಅಳಲು ತೋಡಿಕೊಂಡರು.

**ವೇತನ ಬಿಡುಗಡೆಗೆ ಗಡುವು**

ಫೆಬ್ರವರಿ 10 ರೊಳಗೆ ಲಾಂಚ್ ನೌಕರರಿಗೆ ವೇತನ ಪಾವತಿಸಬೇಕು. ಇಲ್ಲದಿದ್ದರೆ ಸಾಗರ ಕಡವು ನಿರೀಕ್ಷಕರ ಕಚೇರಿ ಎದುರು ಸಾಂಕೇತಿಕವಾಗಿ ಭಿಕ್ಷಾಟನೆ ನಡೆಸಿ ಅಧಿಕಾರಿಗಳ ವಿರುದ್ಧ ಚಳವಳಿ ಹಮ್ಮಿಕೊಳ್ಳಲಾಗುವುದು ಎಂದು ಕರ್ನಾಟಕ ರಾಜ್ಯ ರೈತ ಸಂಘದ ಜಿಲ್ಲಾ ಘಟಕದ ಅಧ್ಯಕ್ಷ ದಿನೇಶ್ ಶಿರವಾಳ ಎಚ್ಚರಿಸಿದ್ದಾರೆ.

## ಅಂತರ್ಜಲ ಮಟ್ಟ ಏರಿಕೆ ಕೃಷಿ ಚಟುವಟಿಕೆಗಳಿಗೆ ಸಹಕಾರಿ

(ಮೊದಲ ಪುಟದಿಂದ)

ಬ್ಯಾರೇಜ್ ನಿರ್ಮಾಣ ಕಾಮಗಾರಿಗೆ ಶಂಕುಸ್ಥಾಪನೆ ನೆರವೇರಿಸಿ ಮಾತನಾಡುತ್ತಿದ್ದರು.

ಸೊರಬ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಗೊಳಪಡುವ ವಿವಿಧ ಗ್ರಾಮಗಳಲ್ಲಿ ಹರಿಯುವ ವರದಾ ನದಿಗೆ ಅಡ್ಡಲಾಗಿ 53 ಕೋಟಿ ರೂ. ಗಳ ವೆಚ್ಚದಲ್ಲಿ ಸರಣಿ ಬ್ಯಾರೇಜ್‌ಗಳ ನಿರ್ಮಾಣ ಕಾಮಗಾರಿಗೆ ಕಡಸೂರಿನಲ್ಲಿ ಹಾಗೂ ಲಕ್ಕವಳ್ಳಿಯ ಜೈನ ಮಠದ ಸಮೀಪದಲ್ಲಿ ಸುಮಾರು 495 ಲಕ್ಷ ರೂ. ಗಳ ವೆಚ್ಚದಲ್ಲಿ ಪ್ರವಾಹದಿಂದ ಬಾಧಿತ ಪ್ರದೇಶಕ್ಕೆ ತಡೆಗೋಡೆ ನಿರ್ಮಾಣ ಮತ್ತು ಇತರೆ ಅಭಿವೃದ್ಧಿ ಕಾರ್ಯಕ್ರಮಗಳಿಗೆ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಎನ್. ಎಸ್. ಬೋಸರಾಜು ಅವರೊಂದಿಗೆ ರಾಜ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತ ಇಲಾಖೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಸ್. ಮಧು ಬಂಗಾರಪ್ಪ ಅವರು ಚಾಲನೆ ನೀಡಿ–ದರು.

ರೈತರ ಹಿತ ಕಾಯುವ ಸಲುವಾಗಿ 900ಕೋಟಿ ಅಂ–ದಾಜು ವೆಚ್ಚದ ದಂಡಾವತಿ ಯೋಜನೆಯ ಅನುಷ್ಠಾನಗೊಳಿಸಲು ಉದ್ದೇಶಿಸಲಾಗಿದೆ. ಅಲ್ಲದೆ 600ಕೋಟಿ ರು. ಗಳ ಅಂದಾಜು ವೆಚ್ಚದಲ್ಲಿ 3 ಪಟ್ಟಣ ಪ್ರದೇಶ ಸೇರಿದಂತೆ 354 ಹಳ್ಳಿಗಳಿಗೆ ಶರಾವತಿಯಿಂದ ಶುದ್ಧ ಕುಡಿಯುವ ನೀರನ್ನು ಒದಗಿಸುವ ಯೋಜನೆ ಅತೀ ಶೀಘ್ರದಲ್ಲಿ ಸಾಕಾರಗೊಳ್ಳಲಿದೆ ಎಂದರು.

ರಾಜ್ಯದ ಬಹುತೇಕ ಜಿಲ್ಲೆಗಳಲ್ಲಿನ ಕೃಷಿ ಭೂಮಿ ಹಸಿರಾಗಿ ನಳನಳಿಸಲು ಮಾಜಿ ಮುಖ್ಯಮಂತ್ರಿ ದಿ. ಬಂಗಾರಪ್ಪನವರ ದೂರದೃಷ್ಟಿಯ ರೈತರ ಪಂಪ್ ಸೆಟ್ ಗಳಿಗೆ ಉಚಿತ ವಿದ್ಯುತ್ ನೀಡುವ ಯೋಜನೆ ಕಾರಣವಾಗಿದೆ. ಇಂತಹ ಯೋಜನೆಗಳು ಇಂದಿಗೂ ಮುಂದುವರೆಯುತ್ತಿವೆ. ರಾಜ್ಯದ ಪ್ರತಿಯೊಬ್ಬರೂ ಸರ್ಕಾರದ ಗ್ಯಾರಂಟಿ ಯೋಜನೆಗಳ ಫಲಾನುಭವಿಗಳಾಗಿದ್ದಾರೆ ಎಂಬುದು ಸಂತಸದ ಸಂಗತಿಯಾಗಿದೆ ಎಂದರು.

ರಾಜ್ಯದ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಪಡೆಯುತ್ತಿರುವ ಎಲ್ಲಾ ಮಕ್ಕಳ ಉಜ್ವಲ ಭವಿಷ್ಯ ರೂಪಿಸಲು ಪ್ರಾಮಾಣಿಕವಾಗಿ ಶ್ರಮಿಸುವುದಾಗಿ ತಿಳಿಸಿದ ಅವರು ರಾಜ್ಯದ ಸರ್ಕಾರಿ ಮತ್ತು ಅನುದಾನಿತ ಶಾಲಾ ಮಕ್ಕಳಿಗೆ ಸಕಾಲದಲ್ಲಿ ಪಠ್ಯಪುಸ್ತಕ, ಶೂ–ಸಾಕ್ಸ್‌ಗಳನ್ನ ಒದಗಿಸಲಾಗಿದೆಯಲ್ಲದೆ ಅಜೀಮ್ ಪ್ರೇಮ್ ಜಿ ಫೌಂಡೇಶನ್ ನ ಸಹಯೋಗದಲ್ಲಿ 1591 ಕೋಟಿ ಮೊತ್ತದ ನೆರವಿನೊಂದಿಗೆ ಮಕ್ಕಳಿಗೆ ಮಧ್ಯಾಹ್ನದ ಬಿಸಿಯೂಟದ ಜೊತೆಗೆ ಪೌಷ್ಟಿಕ ಆಹಾರ, ರಾಗಿ ಮಾಲ್ಟ್, ಹಾಲು, ಮೊಟ್ಟೆಯನ್ನು ವಿತರಿಸಲಾಗುತ್ತಿದೆ. ಇದರೊಂದಿಗೆ ಶಾಲಾ ಕೊಠಡಿಗಳ ದುರಸ್ಥಿಗೂ ಗಮನಹರಿಸಲಾಗಿದೆ ಎಂದರು. ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದ ಸಣ್ಣ ನೀರಾವರಿ ಸಚಿವ ಎನ್. ಎಸ್. ಬೋಸರಾಜು ಅವರು ಮಾತನಾಡಿ, ಯಾವುದೇ ಭ್ರಷ್ಟಚಾರಗಳಿಗೆ ಅವಕಾಶವಿಲ್ಲದಂತೆ ರಾಜ್ಯದಲ್ಲಿ 52000 ಕೋಟಿ ವೆಚ್ಚದ ಸಹಸ್ರಾರು ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ ಎಂದರು.

ರಾಜ್ಯದಲ್ಲಿ ಅತೀ ಹೆಚ್ಚು ಕೆರೆಗಳನ್ನು ಹೊಂದಿರುವ ಸೊರಬ ತಾಲೂಕಿನ ನದಿ, ನಾಲೆ, ಕೆರೆ ಕಟ್ಟೆ ಕಾಲುವೆಗಳ ಅಭಿವೃದ್ಧಿಗಾಗಿ ಸರ್ಕಾರದಿಂದ ಅಗತ್ಯ ಅನುದಾನವನ್ನು ಒದಗಿಸಲಾಗುವುದು ಎಂದರು. ತಾಲೂಕಿನಲ್ಲಿ ಪ್ರಸ್ತುತ ಕೈಗೊಂಡ ನೀರಾವರಿ ಯೋಜನೆಗಳನ್ನು ಮುಂದಿನ ಎರಡು ವರ್ಷಗಳ ಅವಧಿಯಲ್ಲಿ ಲೋಕಾರ್ಪಣೆಗೊಳಿಸಲಾಗುವುದು ಎಂದರು.

ಈ ಸಂದರ್ಭದಲ್ಲಿ ಸಾಗರ ಉಪವಿಭಾಗಾಧಿಕಾರಿ ದೃಷ್ಟಿ ಜೈಸ್ವಾಲ್, ಜಿಲ್ಲಾ ಉಪ ಕಾರ್ಯದರ್ಶಿ ಶ್ರೀಮತಿ ಸುಜಾತ, ಗ್ಯಾರೆಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಜಿಲ್ಲಾ ಅಧ್ಯಕ್ಷ ಚಂದ್ರಭೂಪಾಲ್, ಆರ್. ಪ್ರಸನ್ನಕುಮಾರ್ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

## ಗುರಿ ಹೊಂದಿರುವ ವಿದ್ಯಾರ್ಥಿಗಳಿಗೆ ದಾರಿ ತೋರುವುದು ಶಿಕ್ಷಕರ ಕರ್ತವ್ಯ: ಶಾಸಕ ಹೆಚ್.ಡಿ. ತಮ್ಮಯ್ಯ

**ಚಿಕ್ಕಮಗಳೂರು :** ಗುರಿ ಹೊಂದಿರುವ ವಿದ್ಯಾರ್ಥಿಗಳಿಗೆ ದಾರಿ ತೋರುವುದು ಶಿಕ್ಷಕರ ಕರ್ತವ್ಯವಾಗಿದೆ. ಶಿಕ್ಷಣ ಕೇವಲ ನೌಕರಿಗಲ್ಲ ಉತ್ತಮ ಜೀವನ ನಿರ್ವಹಣೆಗೂ ಅತ್ಯವಶ್ಯಕ ಎಂದು. ಶಾಸಕ ಹೆಚ್.ಡಿ ತಮ್ಮಯ ಹೇಳಿದರು.



ನಗರದ ಕುವೆಂಪು ಕಲಾ ಮಂದಿರದಲ್ಲಿ ಯುನೈಟೆಡ್ ಇಂಟರ್ ನ್ಯಾಷನಲ್ ಸ್ಕೂಲ್‌ನ 23 ನೇ ವರ್ಷದ ವಾರ್ಷಿಕೋತ್ಸವ ಕಾರ್ಯಕ್ರಮದ ಉದ್ಘಾಟನೆ ನಡೆಸಿ ಮಾತನಾಡಿದ ಅವರು ಮಕ್ಕಳು ಕಲಿಕೆಯಲ್ಲಿ ಹೆಚ್ಚು ಆಸಕ್ತಿ ವಹಿಸಬೇಕು. ಬಾಲ್ಯದಲ್ಲಿ ಮಕ್ಕಳ ಮನಸ್ಸು ಮತ್ತು ಬುದ್ಧಿಶಕ್ತಿ ಹೆಚ್ಚು ಕ್ರೀಯಾಶೀಲತೆಯಿಂದ ಕೂಡಿರುತ್ತದೆ. ಯಾವುದೇ ವಿಷಯವನ್ನು, ಕಲೆಯನ್ನು ಕರಗತ ಮಾಡಿಕೊಳ್ಳುವಂತ ಶಕ್ತಿ ಪ್ರತಿಯೊಂದು ಮಕ್ಕಳಲ್ಲಿ ಅಡಗಿರುತ್ತದೆ. ಪೋಷಕರು ಇವುಗಳನ್ನು ಅರಿತು ಮಕ್ಕಳನ್ನು ಪ್ರೋತ್ಸಾಹಿಸಬೇಕು ಎಂದರು.

ವಿದ್ಯೆ ಎಂಬುದು ಪ್ರಬಲ ಅಸ್ತ್ರ ಇದನ್ನು ಸರಿಯಾದ ರೀತಿಯಲ್ಲಿ ಉಪಯೋಗಿಸಿಕೊಂಡಲ್ಲಿ ಪ್ರಪಂಚವನ್ನೇ ಬದಲಾಯಿಸಬಹುದು. ಮಕ್ಕಳು ವಿದ್ಯೆಯ ಜೊತೆಗೆ ಸಂಸ್ಕಾರವನ್ನು ಕಲಿತು ತಂದೆ–ತಾಯಿ, ಗುರು, ಹಿರಿಯರಿಗೆ ಗೌರವ ನೀಡುವುದನ್ನು ಕಲಿಯಬೇಕು ಎಂದ ಅವರು ಸುಮಾರು 23 ವರ್ಷಗಳಿಂದ ಉತ್ತಮ ಶಿಕ್ಷಣ ನೀಡಿ, ಮಕ್ಕಳ ಭವಿಷ್ಯ ರೂಪಿಸುತ್ತಿರುವ ಈ ಸಂಸ್ಥೆಯು ಇನ್ನಷ್ಟು ಬೆಳವಣಿಗೆ ಹೊಂದಲಿ ಎಂದು ಹಾರೈಸಿದರು.

ಯುನೈಟೆಡ್ ಶಾಲೆಯ ಅಧ್ಯಕ್ಷ ಜಮೀರ್ ಅಹಮದ್ ಮಾತನಾಡಿ. ಶಿಕ್ಷಣ ಕೇವಲ ಪುಸ್ತಕ ಹಾಗೂ ಪರೀಕ್ಷೆಗೆ ಸೀಮಿತವಲ್ಲ. ಶಿಕ್ಷಣವೂ ಮಕ್ಕಳಲ್ಲಿ ವ್ಯಕ್ತಿತ್ವ ರೂಪಿಸುತ್ತದೆ. ಬದುಕು ನಿರ್ವಹಿಸುವ ಶಕ್ತಿ ನೀಡುತ್ತದೆ. ಒಬ್ಬ ಉತ್ತಮ ವಿದ್ಯಾರ್ಥಿ ಶಿಕ್ಷಣ ಸಂಸ್ಥೆಗೆ ಜೊತೆಗೆ ಸಾಮಾಜದಲ್ಲೂ ಉನ್ನತ ಸ್ಥಾನ ಗಳಿಸುತ್ತಾನೆ. ನಮ್ಮ ಸಂಸ್ಥೆಯ ಶಿಕ್ಷಕರು ಪ್ರತಿಯೊಂದು ಮಗುವಿನ ಉತ್ತಮ ಭವಿಷ್ಯಕ್ಕಾಗಿ ಶ್ರಮಿಸುತ್ತಿದ್ದಾರೆ. ವಿದ್ಯಾರ್ಥಿಗಳಲ್ಲಿ ಗುರಿ ಮುಖ್ಯ. ಪ್ರಸ್ತುತ ಸಮಾಜದಲ್ಲಿ ಜ್ಞಾನಕ್ಕೆ ಹೆಚ್ಚು ಪ್ರಾಮುಖ್ಯತೆ ದೊರಕುತ್ತಿದೆ ತಮ್ಮ ಆಸಕ್ತಿಯ ಕ್ಷೇತ್ರಗಳಲ್ಲಿ ಹೆಚ್ಚಿನ ಜ್ಞಾನ ಹೊಂದುವುದರ ಮೂಲಕ ತಮ್ಮ ಗುರಿ ತಲುಪಿ ಎಂದರು. ಶಾಲೆಯ ಪ್ರಾಂಶುಪಾಲರಾದ ಆಯಿಶಾ ಜಮೀರ್ ಅಹಮದ್ ಮಾತನಾಡಿ ಶಾಲೆಯೂ ವಿದ್ಯೆ ಜೊತೆಗೆ ಸಮಾಜದ ಅರಿವನ್ನು ಮೂಡಿಸುತ್ತದೆ. ಪೋಷಕರು ಮಕ್ಕಳಲ್ಲಿ ವಿನಯತೆ, ಮನುಷ್ಯತ್ವ, ಸಂಸ್ಕೃತಿಗಳನ್ನು ಮನೆಯಲ್ಲೇ ಕಲಿಸಬೇಕು ಹಾಗೂ ಮಕ್ಕಳ ಸ್ವಯಂ ಕಲಿಕೆಗೆ ಅವಕಾಶ ಮಾಡಿಕೊಡಬೇಕು. ಅಂಕಗಳನ್ನು ಪ್ರತಿಯೊಂದು ಮಗುವು ಗಳಿಸಬಹುದು ಆದರೆ ಮಕ್ಕಳಲ್ಲಿ ನೈತಿಕ ಶಿಕ್ಷಣ ನೀಡಿ ಅವರನ್ನು ಸಮಾಜದ ಗೌರವಯುತ ವ್ಯಕ್ತಿಯಾಗಿ ರೂಪಿಸುವುದು ನಮ್ಮ ಕರ್ತವ್ಯ ಎಂದ ಅವರು ತಮ್ಮ ಮಕ್ಕಳ ಆಸಕ್ತಿಗಳನ್ನು ಅರಿತು ಅವರ ಮುಂದಿನ ಭವಿಷ್ಯ ನಿರ್ಮಿಸಿಕೊಳ್ಳಲು ಸಹಕರಿಸಬೇಕು ಎಂದರು.

ಕಾರ್ಯಕ್ರಮದಲ್ಲಿ ನಜೀರ್ ಅಹಮದ್. ಶೇಖ್ ಇಸ್ಮಾಯಿಲ್, ಮುಖ್ಯ ಶಿಕ್ಷಕಿ ಇಂಪಾಗೌಡ, ಶಿಕ್ಷಕಿ ವನಿತ ಹೆಚ್. ಎಂ ಸೇರಿದಂತೆ ಪೋಷಕರು , ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ರಾಜ್ಯ ಬಜೆಟ್ 2025: ಸಿದ್ಧತೆ ಆರಂಭಿಸಿದ ಸಿಎಂ ಸಿದ್ದರಾಮಯ್ಯ; ಬಜೆಟ್ ಗಾತ್ರ 4 ಲಕ್ಷ ಕೋಟಿ ರೂಪಾಯಿಗೆ ಏರಿಕೆ ನಿರೀಕ್ಷೆ!

**ಬೆಂಗಳೂರು:** 2025–26 ನೇ ಸಾಲಿನ ಬಜೆಟ್ ಅನ್ನು ಹಣಕಾಸು ಇಲಾಖೆಯ ಜವಾಬ್ದಾರಿಯನ್ನೂ ಹೊತ್ತಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಾರ್ಚ್ 14 ರಂದು ಮಂಡಿಸಲಿದ್ದು, ಇದು ಸಿದ್ದರಾಮಯ್ಯ ಅವರ 16ನೇ. ದಾಖಲೆಯ ಬಜೆಟ್ ಮಂಡನೆಯಾಗಿರಲಿದೆ,ರಾಜ್ಯದಲ್ಲಿ ಜುಲೈ 2023ರಲ್ಲಿ 14ನೇ ಬಜೆಟ್ ಮಂಡಿಸಿದಾಗಲೇ ಅತಿ ಹೆಚ್ಚು ಬಜೆಟ್ ಮಂಡಿಸಿದ ದಾಖಲೆ ಸಿದ್ದರಾಮಯ್ಯ ಅವರ ಹೆಸರಿನಲ್ಲಿದೆ. 2024–25ನೇ ಸಾಲಿನ ಬಜೆಟ್ ಅನ್ನು ಫೆಬ್ರವರಿ ತಿಂಗಳಲ್ಲಿ ಮಂಡಿಸಿದ್ದರು. ಇದು ಅವರ 15ನೇ ಬಜೆಟ್ ಆಗಿತ್ತು. ಕರ್ನಾಟಕದ ಮಾಜಿ ರಾಜ್ಯಪಾಲರೂ ಆಗಿರುವ ಗುಜರಾತ್ ನ ಮಾಜಿ ಆರ್ಥಿಕ ಸಚಿವ ವಜೂಬಾಯಿ ವಾಲಾ ಅವರು 18 ಬಾರಿ ಬಜೆಟ್ ಮಂಡಿಸುವ ಮೂಲಕ ದೇಶದಲ್ಲೇ ದಾಖಲೆ ನಿರ್ಮಿಸಿದ್ದಾರೆ. ಈ ದಾಖಲೆಯನ್ನು ಮುರಿಯಬೇಕೆಂದರೆ ಸಿದ್ದರಾಮಯ್ಯ ಅವರು ಇನ್ನೂ ಎರಡು ಬಜೆಟ್ ಗಳನ್ನು ಮಂಡಿಸಬೇಕಾಗುತ್ತದೆ.ಸಿದ್ದರಾಮಯ್ಯ ಅವರ 16ನೇ ಬಜೆಟ್ ಹಲವು ವೈಶಿಷ್ಟ್ಯಗಳನ್ನು ಹೊಂದಿದೆ. ರಾಜ್ಯದ ಇತಿಹಾಸದಲ್ಲಿ ಇದೇ ಮೊದಲ ಬಾರಿಗೆ ಬಜೆಟ್ ಗಾತ್ರ 4 ಲಕ್ಷ ಕೋಟಿ ರೂ.ಗಳನ್ನು ದಾಟಲಿದೆ ಎಂದು ಮೂಲಗಳಿಂದ ತಿಳಿದುಬಂದಿದೆ.ಬಜೆಟ್ ಮಂಡನೆಗೆ ದಿನಗಣನೆ ಆರಂಭವಾಗಿದ್ದು. ಈ ಹಿನ್ನೆಲೆಯಲ್ಲಿ ಸಿದ್ದರಾಮಯ್ಯ ಅವರು ಸೋಮವಾರದಿಂದ ಪ್ರಗತಿ ಪರಿಶೀಲನಾ ಸಭೆಗಳನ್ನು ನಡೆಸಿ, ಸಿದ್ಧತೆಗಳನ್ನು ಆರಂಭಿಸಲಿದ್ದಾರೆಂದು ತಿಳಿದುಬಂದಿದೆ.ಈ ಸಭೆಗಳು ಬಜೆಟ್ ಮಂಡನೆಗೆ ಅಡಿಪಾಯ ಹಾಕಲಿದೆ. ಮುಖ್ಯಮಂತ್ರಿಗಳು ಸಮಾಜ ಕಲ್ಯಾಣ ಇಲಾಖೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ, ಆಹಾರ ಮತ್ತು ನಾಗರಿಕ ಸರಬರಾಜು, ಉನ್ನತ ಶಿಕ್ಷಣ, ವೈದ್ಯಕೀಯ ಶಿಕ್ಷಣ ಮತ್ತು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸೇರಿದಂತೆ ಪ್ರಮುಖ ಇಲಾಖೆಗಳ ಅಧಿಕಾರಿಗಳೊಂದಿಗೆ ಸಭೆ ನಡೆಸಲಿದ್ದಾರೆ.ಈ ಸಭೆಗಳು ಮುಖ್ಯಮಂತ್ರಿಗಳಿಗೆ ನಿರ್ಣಾಯಕವಾಗಿವೆ, ಏಕೆಂದರೆ ಮುಖ್ಯಮಂತ್ರಿಗಳು ಬೇಡಿಕೆಗಳನ್ನು ಸಮತೋಲನಗೊಳಿಸುವ ಸವಾಲಿನ ಕೆಲಸವನ್ನು ನಿಭಾಯಿಸಬೇಕಿದೆ. ಗ್ಯಾರಂಟಿ ಯೋಜನೆಗಳ ಒತ್ತಡ ಜೊತೆಗೆ ಅಭಿವೃದ್ಧಿಗೆ ಹಾಗೂ ಬೇಡಿಕೆಗಳಿಗೂ ಮುಖ್ಯಮಂತ್ರಿಗಳು ಆದ್ಯತೆ ನೀಡಬೇಕಿದೆ.ಮುಂದಿನ ದಿನಗಳಲ್ಲಿ ನಡೆಯುವ ಈ ಸಭೆಗಳು ಮತ್ತು ಬಜೆಟ್ ಪೂರ್ವ ಸಭೆಗಳು ರಾಜ್ಯದ ಆರ್ಥಿಕ ಕಾರ್ಯಕ್ಷಮತೆಯನ್ನು ಪರಿಶೀಲಿಸಲಿವೆ. ಆದಾಯ ಉತ್ಪಾದನೆಯನ್ನು ನಿರ್ಣಯಿಸುತ್ತವೆ ಮತ್ತು ಹಿಂದಿನ ವರ್ಷದಿಂದ ಹಣಕಾಸಿನ ಅಂತರವನ್ನು ಗುರುತಿಸಲಿವೆ.ಸಭೆಯಲ್ಲಿ ಆದಾಯ ಉತ್ಪಾದನೆ ಮತ್ತು ತೆರಿಗೆ ತಂತ್ರಗಳನ್ನು ರೂಪಿಸಲಿದ್ದು, ತಜ್ಞರ ಅಭಿಪ್ರಾಯವನ್ನೂ ಮುಖ್ಯಮಂತ್ರಿಗಳು ಸಂಗ್ರಹಿಸಲಿದ್ದಾರೆ.ಈ ಕಾರ್ಯತಂತ್ರಗಳ ಮಧ್ಯೆ, ಸರ್ಕಾರವು ಗ್ಯಾರಂಟಿ ಯೋಜನೆಗಳ ನಿರ್ವಹಿಸುವುದು, ಪ್ರಮುಖ ಮೂಲಸೌಕರ್ಯ ಯೋಜನೆಗಳನ್ನು ಪೂರ್ಣಗೊಳಿಸುವುದು, ಬೆಳೆಯುತ್ತಿರುವ ಸಾಲದ ಹೊರೆಯನ್ನು ನಿರ್ವಹಿಸುವುದು ಮತ್ತು ಕಲ್ಯಾಣ ಕಾರ್ಯಕ್ರಮಗಳಿಗೆ ನಿಧಿಯ ಪರಿಣಾಮಕಾರಿ ಹಂಚಿಕೆಯನ್ನು ಖಚಿತಪಡಿಸಿಕೊಳ್ಳುವುದು ಸೇರಿದಂತೆ ಇತರೆ ವಿಚಾರಗಳ ಕುರಿತಂತೆಯೂ ತಂತ್ರಗಳನ್ನು ರೂಪಿಸುವುದರತ್ತ ಗಮನಹರಿಸಲಿದೆ.



# ಕೇಳೋರೆ ಇಲ್ಲ ಸಿಪ್ಪೆಗೋಟು, ಗೊರಬಲು; ಬೆಲೆ ಕುಸಿತ





**ಹೊಳೆಹೊನ್ನೂರು:** ಮಲೆನಾಡಿನ ಬಹುಮುಖ್ಯ ಬೆಳೆಯಾಗಿರುವ ಅಡಿಕೆಯನ್ನು ನಂಬಿಕೊಂಡಿರುವ ರೈತರಿಗೆ ಸಿಪ್ಪೆಗೋಟು ಹಾಗೂ ಗೊರಬಲು ಬೆಲೆ ಆಘಾತ ತರಿಸಿದೆ.

ಪ್ರಸಕ್ತ ವರ್ಷ ರಾಶಿ ಅಡಿಕೆಗೆ ಬೆಲೆ ಇದ್ದು, ಸಿಪ್ಪೆಗೋಟು ಹಾಗೂ ಗೊರಬಲು ಕೇಳೋರೇ ಇಲ್ಲದಂತಾಗಿದೆ. ಇದರಿಂದ ಬೆಳೆಗಾರರು ಹಾಗೂ ಗೇಣಿದಾರರು ಪರಿತಪಿಸುವಂತಾಗಿದೆ.

ಕಳೆದ ವರ್ಷ ಗೊರಬಲು ಹಾಗೂ ಸಿಪ್ಪೆಗೋಟುಮಾರಿ ಹೆಚ್ಚಿನ ಲಾಭ ಗಳಿಸಿದ್ದ ಗೇಣಿದಾರರು ಈ ಬಾರಿ ನಷ್ಟ ಅನುಭವಿಸುವಂತಾಗಿದೆ. ಕಳೆದ ವರ್ಷ ಇದೇ ಸಮಯದಲ್ಲಿ ಕ್ವಿಂಟಲ್ ಗೊರಬಲು ದರ ಅಂದಾಜು 32,000 ದಿಂದ 33,000 ಇತ್ತು. ಈ ಬಾರಿ 14,000 ದಿಂದ 15,000 ಇದೆ.

ಸಿಪ್ಪೆಗೋಟು ದರ ಕಳೆದ ಬಾರಿ ಕ್ವಿಂಟಲ್ಗೆ 21,000 ದಿಂದ 22,000 ಇದ್ದದ್ದು, ಈ ಬಾರಿ 9,000 ದಿಂದ 10,000ಕ್ಕೆ ಕುಸಿದಿದೆ.

ಪ್ರಸ್ತುತ ರಾಶಿ ಅಡಿಕೆ ದರ 49,000ದಿಂದ 50,000ದವರೆಗೆ ಇದೆ. ಒಂದು ಕ್ವಿಂಟಲ್ ಹಸಿ ಅಡಿಕೆಗೆ 12,000 ದಿಂದ 13,000 ಬೆಲೆ ಇದೆ.

ಒಂದು ಕ್ವಿಂಟಲ್ ಹಸಿ ಅಡಿಕೆಗೆ 12 ರಿಂ ದ 13 ಕೆಜಿ ಕೆ.ಜಿ. ಒಣ ರಾಶಿ ಅಡಿಕೆ ನೀಡುವುದಾಗಿ ಹೇಳಿ ಕೆಲ ಖೇಣಿದಾರರು ರೈತರಿಂದ ತೋಟ ಪಡೆದಿದ್ದರು. ಇನ್ನೂ ಕೆಲವರು ಇದಕ್ಕಿಂತಲೂ ಹೆಚ್ಚು ಒಣ ರಾಶಿ ಅಡಿಕೆ ನೀಡುವುದಾಗಿ ಹೇಳಿ ತೋಟವನ್ನು ಖೇಣಿ ಪಡೆದಿದ್ದಾರೆ.

ಒಂದು ಕ್ವಿಂಟಲ್ ಹಸಿ ಅಡಿಕೆಯನ್ನು ಸುಲಿದು, ಬೇಯಿಸಿ, ಒಣಗಿಸಿದರೆ 13ರಿಂದ 14 ಕೆ.ಜಿ ಒಣಗಿದ ರಾಶಿ ಅಡಿಕೆ, 2 ಕೆ.ಜಿ. ಗೊರಬಲು, 1 ಕೆ.ಜಿ. ಸಿಪ್ಪೆಗೋಟು ಸಿಗುತ್ತದೆ. ಹೀಗಿರುವಾಗ ರೈತರಿಗೆ 14 ಕೆ.ಜಿ. ಒಣಗಿದ ರಾಶಿ ಅಡಿಕೆ ನೀಡಿದರೆ ಖೇಣಿದಾರರಿಗೆ ಉಳಿಯೋದು ಕೇವಲ 2 ಕೆ.ಜಿ. ಗೊರಬಲು, 1 ಕೆ.ಜಿ. ಸಿಪ್ಪೆಗೋಟು ಮಾತ್ರ. ಮಧ್ಯವರ್ತಿಗಳು ಗೊರಬಲು ಮತ್ತು ಸಿಪ್ಪೆಗೋಟನ್ನು ಖರೀದಿಸಿ ಕೃತಕ ಬಣ್ಣ ಬಳಸಿ ಅದನ್ನು ಒಣಗಿದ ರಾಶಿ ಅಡಿಕೆಗೆ ಮಿಶ್ರಣಮಾಡಿಮಾರಾಟ ಮಾಡುತ್ತಿದ್ದರು. ಆ ಮೂಲಕ ಹೆಚ್ಚು ಲಾಭ ಗಳಿಸುತ್ತಿದ್ದರು. ಆದರೆ, ಈಗ ಕಲಬೆರಕೆಮಾಡಿದ ಒಣ ಅಡಿಕೆ ಮಾರುಕಟ್ಟೆಯಲ್ಲಿ ತಿರಸ್ಕೃತಗೊಳ್ಳುತ್ತಿದೆ. ಇದರಿಂದ ಮಿಕ್ಸಿಂಗ್ ದಂಧೆಗೆ ಕಡಿವಾಣ ಬಿದ್ದಂತಾಗಿದ್ದು, ಸಿಪ್ಪೆಗೋಟು ಹಾಗೂ ಗೊರಬಲನ್ನು ಕೇಳುವವರೇ ಇಲ್ಲದಂತಾಗಿದೆ.

ದುಬಾರಿ ಕೂಲಿ, ಸಾಗಣೆ ವೆಚ್ಚದಿಂದ ಖೇಣಿದಾರರು ಕಂಗಾಲಾಗಿದ್ದಾರೆ. ಅತಿಯಾದ ಮಳೆಯಿಂದ ಅಡಿಕೆ ಸರಿಯಾಗಿ ಒಣಗದೆ ಟೊಳ್ಳಾಗಿ ತೂಕದಲ್ಲಿ ವ್ಯತ್ಯಾಸ ಕಂಡು ಬರುತ್ತಿರುವುದರಿಂದಲೂ ನಷ್ಟ ಅನುಭವಿಸುವಂತಾಗಿದೆ. ರಾಶಿ ಅಡಿಕೆಯಿಂದ ಗೊರಬಲನ್ನು ಬೇರ್ಪಡಿಸುವುದಕ್ಕೆ ಮಹಿಳೆಯರಿಗೆ ಚೀಲ ಒಂದಕ್ಕೆ 200 ನೀಡುತ್ತಿದ್ದು, ಅದು ಕೂಡಹೊರೆಯಾಗುತ್ತಿದೆ.

ಪೈಪೋಟಿ: ಮಳೆಗಾಲ ಆರಂಭಕ್ಕೂ ಮುನ್ನ ಖೇಣಿದಾರರು ಪೈಪೋ ಟಿಗಿಳಿದುಮಾರುಕಟ್ಟೆ ದರಕ್ಕಿಂತಲೂ ಹೆಚ್ಚಿನ ಬೆಲೆ ನೀಡಿ ತೋಟಗಳನ್ನು ಖೇಣಿ ಪಡೆದಿದ್ದಾರೆ. ನಾಲ್ಕೈದು ತಿಂಗಳಿಂದ ರಾತ್ರಿ ಹಗಲು ಎನ್ನದೇ ದುಡಿದಿದ್ದಾರೆ. ದಿಢೀರ್ ಬೆಲೆ ಕುಸಿತದಿಂದಾಗಿ ಅವರೀಗ ದಿಕ್ಕೇ ತೋಚದಾಗಿದ್ದಾರೆ.

## ಬಂಧನ ರೀತಿಯಲ್ಲಿ ಅಕ್ರಮ ವಲಸಿಗರ ಗಡೀಪಾರು ವಿರುದ್ಧ ಭಾರತ ವಿಶ್ವಸಂಸ್ಥೆಯಲ್ಲಿ ಕೇಸು ದಾಖಲಿಸಬಹುದು: ಕಾನೂನು ತಜ್ಞರ ಅಭಿಮತ



**ಬೆಂಗಳೂರು:** ಅಮೆರಿಕಾದಿಂದ 104 ಮಂದಿ ಭಾರತೀಯ ಅಕ್ರಮ ವಲಸಿಗರನ್ನು ಗಡೀಪಾರು ಮಾಡಿರುವುದು ದೇಶಾದ್ಯಂತ ಭಾರೀ ಆಕ್ರೋಶಕ್ಕೆ ಕಾರಣವಾಗಿದೆ. ಮಹಿಳೆಯರು ಮತ್ತು ಮಕ್ಕಳನ್ನು ಹೊರತುಪಡಿಸಿ, ಉಳಿದವರನ್ನು ಅಮೆರಿಕಾ ಮಿಲಿಟರಿ ವಿಮಾನದಲ್ಲಿ ಅಮೃತಸರಕ್ಕೆ ಕರೆತಂದ ಎಸಿ –17 ಗ್ಲೋಬ್ಮಾಸ್ಟರ್ ನಲ್ಲಿ 40 ಗಂಟೆಗಳ ಪ್ರಯಾಣದ ಸಮಯದಲ್ಲಿ ಸಾಕಷ್ಟು ತೊಂದರೆ ಕಿರುಕುಳ ನೀಡಲಾಗಿದೆ. ಕೈಕೋಳ ತೊಡಿಸಿ ಸರಪಳಿಯಿಂದ ಬಂಧಿಸಿ ಕರೆತರಲಾಗಿತ್ತು ಎಂಬ ಆರೋಪ ಕೇಳಿಬಂದಿದೆ.

ಎರಡು ಸ್ನೇಹಪರ ದೇಶಗಳ ನಡುವೆ ಗಡೀಪಾರು ಮಾಡುವ ಬಗ್ಗೆ ದ್ವಿಪಕ್ಷೀಯ ವ್ಯವಸ್ಥೆಗಳಿವೆ. ಇವುಗಳು ಹೆಚ್ಚು ರಾಜತಾಂತ್ರಿಕ ಮಟ್ಟದಲ್ಲಿರುತ್ತವೆ ಮತ್ತು ಸಾರ್ವಜನಿಕವಾಗಿ ಬಹಿರಂಗಪಡಿಸುವುದಿಲ್ಲ. ಅಕ್ರಮ ವಲಸಿಗರನ್ನು ಸಾಮೂಹಿಕವಾಗಿ ಗಡೀಪಾರು ಮಾಡುವುದು ಅವರ ಘನತೆಯ ಉಲ್ಲಂಘನೆಯಾಗಿದೆ. ಇದು 1976 ರ ಅಂತಾರಾಷ್ಟ್ರೀಯ ನಾಗರಿಕ ಮತ್ತು ರಾಜಕೀಯ ಹಕ್ಕುಗಳ ಒಪ್ಪಂದ (ಐಅಅಕಐ) ಮತ್ತು 1984 ರ ಚಿತ್ರಹಿಂಸೆ ಮತ್ತು ಇತರ ಕ್ರೂರ ಅಮಾನವೀಯ ಅಥವಾ ಅವಮಾನಕರವಾಗಿ ಪರಿಗಣಿಸುವುದು ಅಥವಾ ಶಿಕ್ಷೆಯ ವಿರುದ್ಧದ ವಿಶ್ವಸಂಸ್ಥೆಯ ಸಮಾವೇಶಕ್ಕೆ ವಿರುದ್ಧವಾಗಿದೆ ಎಂದು ಸುಪ್ರೀಂ ಕೋರ್ಟ್ನ ಸಾಂವಿಧಾನಿಕ ಕಾನೂನಿನ ವಕೀಲೆ ರೂಪಾಲಿ ಸ್ಯಾಮ್ಯುಯೆಲ್ ದಿ ನ್ಯೂ ಇಂಡಿಯನ್ ಎಕ್ಸ್ಪ್ರೆಸ್ ಪತ್ರಿಕೆ ಪ್ರತಿನಿಧಿ ಜೊತೆ ಮಾತನಾಡುತ್ತಾ ತಮ್ಮ ಅಭಿಪ್ರಾಯ ಹೇಳಿದರು.

ವಿದೇಶಗಳು ತಮ್ಮ ನೆಲದಲ್ಲಿ ತೆಗೆದುಕೊಳ್ಳುವ ಕ್ರಮಗಳ ಮೇಲೆ ಭಾರತಕ್ಕೆ ಯಾವುದೇ ನ್ಯಾಯವ್ಯಾಪ್ತಿ ಇಲ್ಲದಿದ್ದರೂ, ಐಅಅಕಐ ನ 41 ನೇ ವಿಧಿಯ ಅಡಿಯಲ್ಲಿ ಮಾನವ ಹಕ್ಕುಗಳ ಉಲ್ಲಂಘನೆಗಾಗಿ ಅಂತರ–ದೇಶ ವಿವಾದ ಪ್ರಕ್ರಿಯೆಯ ಅಡಿಯಲ್ಲಿ ವಿಶ್ವಸಂಸ್ಥೆ ಮಾನವ ಹಕ್ಕುಗಳ ಸಮಿತಿಯ ಮುಂದೆ ದೂರು ನೀಡಲು ಸಾಧ್ಯವಾಗಬಹುದು ಎಂದು ಅವರು ಹೇಳಿದರು. ಆದಾಗ್ಯೂ, ಈ ಪ್ರಕ್ರಿಯೆಗೆ ಒಂದು ಅಡಚಣೆಯೆಂದರೆ, ಭಾರತವು ಹೆಚ್ ಆರ್ ಸಮಿತಿಯಿಂದ ಅಂತಹ ರೀತಿಯ ಪರೀಕ್ಷೆಗೆ ಒಳಗಾಗಿಲ್ಲ, ಇದು ನ್ಯಾಯವ್ಯಾಪ್ತಿಯನ್ನು ನಿರಾಕರಿಸಲು ಒಂದು ಆಧಾರವಾಗಬಹುದು ಎಂದು ಸ್ಯಾಮ್ಯುಯೆಲ್ ಎಚ್ಚರಿಸಿದ್ದಾರೆ.

ಭಾರತೀಯ ಪೊಲೀಸ್ ಅಧಿಕಾರಿಗಳು ಮಾಸ್ಕ್ ಧರಿಸಿ, ಅಮೆರಿಕದಿಂದ ಗಡೀಪಾರು ಮಾಡಲ್ಪಟ್ಟ ವಲಸಿಗರನ್ನು ಕರೆಸಿಕೊಂಡಿದ್ದಾರೆ. ಕೇಂದ್ರ ಸರ್ಕಾರ ಸುರಕ್ಷಿತ, ಕ್ರಮಬದ್ಧವಾದ ವಿದೇಶ ವಲಸೆಗಾಗಿ ಹೊಸ ಕಾನೂನನ್ನು ಯೋಜಿಸುತ್ತಿದೆ. ಐಅಅಕಐ ನ 7 ನೇ ವಿಧಿಯು "ಯಾರನ್ನೂ ಚಿತ್ರಹಿಂಸೆ ಅಥವಾ ಕ್ರೌರ್ಯ, ಅಮಾನವೀಯವಾಗಿ ನಡೆಸಿಕೊಳ್ಳುವುದು ಅಥವಾ ಶಿಕ್ಷೆಗೆ ಒಳಪಡಿಸಬಾರದು ಎಂದು ಹೇಳುತ್ತದೆ.

ಒಡಂಬಡಿಕೆಯ 10 ನೇ ವಿಧಿಯು ಸ್ವಾತಂತ್ರ್ಯದಿಂದ ವಂಚಿತರಾದ ಎಲ್ಲ ವ್ಯಕ್ತಿಗಳನ್ನು ಅಂತರ್ಗತ ಘನತೆಗೆ ಗೌರವದಿಂದ ನಡೆಸಿಕೊಳ್ಳಬೇಕು ಎಂದು ಹೇಳುತ್ತದೆ.

ಸುಪ್ರೀಂ ಕೋರ್ಟ್ ಪ್ರಕಾರ, ಕೈಕೋಳ ಹಾಕುವುದು, ತೀವ್ರ ಸಂದರ್ಭಗಳಲ್ಲಿ ಹೊರತುಪಡಿಸಿ, ಮಾನವ ಘನತೆಗೆ ವಿರುದ್ಧವಾಗಿದೆ ಮತ್ತು ಸಂವಿಧಾನದ 21 ನೇ ವಿಧಿಯ ಉಲ್ಲಂಘನೆಯಾಗಿದೆ ಎಂದು ವಕೀಲರು ಹೇಳಿದರು.

## ಪರಿಶಿಷ್ಟ ಜನರ ಕಲ್ಯಾಣಕ್ಕಾಗಿ ಮೀಸಲಿಟ್ಟ ಹಣವನ್ನೂ ಚುನಾವಣೆಗೆ ಬಳಸಿಕೊಂಡಿದ್ದಾರೆ: ರಾಜ್ಯಸಭೆಯಲ್ಲಿ ಕಾಂಗ್ರೆಸ್ ವಿರುದ್ಧ ದೇವೇಗೌಡ ಗುಡುಗು

**ನವದೆಹಲಿ/ಬೆಂಗಳೂರು:** ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಕಲ್ಯಾಣಕ್ಕಾಗಿ ಮೀಸಲಿಟ್ಟ ಹಣವನ್ನೂ ಕಾಂಗ್ರೆಸ್ ಚುನಾವಣೆಗೆ ಬಳಸಿಕೊಂಡಿದೆ ಎಂದು ಮಾಜಿ ಪ್ರಧಾನಮಂತ್ರಿ ಹೆಚ್'ಡಿ.ದೇವೇಗೌಡ ಅವರು ಕಿಡಿಕಾರಿದ್ದಾ–ರೆ.ರಾಜ್ಯಸಭೆಯಲ್ಲಿ ರಾಷ್ಟ್ರಪತಿ ಭಾಷಣದ ವಂದನಾ ನಿರ್ಣಯದ ಚರ್ಚೆಯಲ್ಲಿ ಗುರುವಾರ ಮಾತನಾಡಿದ ಅವರು, ಕಾಂಗ್ರೆಸ್ ವಿರುದ್ಧ ಹರಿಹಾಯ್ದರು.ಲೋಕಸಭೆಯಲ್ಲಿ ಬಿಜೆಪಿಗೆ ಸಿಕ್ಕಿರುವುದು 240 ಸ್ಥಾನಗಳಷ್ಟೇ ಎಂದು ಕಾಂಗ್ರೆಸ್ ನಾಯಕರು ಲೇವಡಿ ಮಾಡುತ್ತಿದ್ದಾರೆ. ಆದರೆ, ಕರ್ನಾಟಕ ವಿಧಾನಸಭೆಯಲ್ಲಿ ಕಾಂಗ್ರೆಸ್ 136 ಸ್ಥಾನ ಗೆದ್ದಿದೆ. ಅದರಿಂದ ಉಪಯೋಗವೇನು? ಕಾಂಗ್ರೆಸ್ ಯಾವ ರೀತಿ ಕರ್ನಾಟಕದಲ್ಲಿ ಆಡಳಿತ ನಡೆಸುತ್ತಿದೆ ಎಂಬುದು ಎಲ್ಲರಿಗೂ ಗೊತ್ತು. ಅಲ್ಲಿರುವುದು ಕಡು ಭ್ರಷ್ಟ ಸರ್ಕಾರ. ಪ್ರಗತಿಶೀಲ ರಾಜ್ಯ ಕರ್ನಾಟಕವನ್ನು ಕಾಂಗ್ರೆಸ್ ಸರ್ಕಾರ ಹಾಳು ಮಾಡುತ್ತಿದೆ ಎಂದು ವಾಗ್ದಾಳಿ ನಡೆಸಿದರು.ಪರಿಶಿಷ್ಟ ಜಾತಿ–ಪರಿಶಿಷ್ಟ ಪಂಗಡದ ಜನರ ಕಲ್ಯಾಣಕ್ಕಾಗಿ ಮೀಸಲಿಟ್ಟ ಹಣವನ್ನೂ ಚುನಾವಣೆಗೆ ಬಳಸಿಕೊಂಡಿದ್ದಾರೆ. ಯಾವುದೇ ಅಂಜಿಕೆ ಇಲ್ಲದೆ ಭ್ರಷ್ಟಾಚಾರದಲ್ಲಿ ತೊಡಗಿರುವ ಈ ಸರ್ಕಾರದ ಕೆಟ್ಟ ಆಡಳಿತದಿಂದ ಅನೇಕ ಅಧಿಕಾರಿಗಳು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ನಾನು ಸತ್ಯವನ್ನು ಹೇಳಿದರೆ, ನಿಮಗೆ ಅರಗಿಸಿಕೊಳ್ಳುವುದು ತುಂಬಾ ಕಷ್ಟ ಎಂದು ಗುಡುಗಿದರು.ಇದೇ ಕರ್ನಾಟಕ ಸಚಿವರ ಕಾರ್ಯವೈಖರಿ ಬಗ್ಗೆಯೂ ಅಸಮಾಧಾನ ಹೊರಹಾಕಿದ ದೇವೇಗೌಡಅವರು, ಸ್ವತಃ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆಯವರೇ ಬೇಸರ ವ್ಯಕ್ತಪಡಿಸಿದ್ದಾರೆ. ಈ ಕುರಿತ ಪತ್ರಿಕಾ ವರದಿಗಳನ್ನು ನಾನು ಈ ಸದನದಲ್ಲಿ ಓದಲೇ? ತಮ್ಮ ಮಂತ್ರಿಗಳಿಗೆ ನೀಡಿದ ಸಲಹೆಯನ್ನು ನಾನು ಓದಿದರೆ ಖರ್ಗೆ ಅವರಿಗೆ ಬೇಸರವಾಗಬಹುದು ಎಂದು ಹೇಳಿದರು. ಈ ವೇಳೆ ಕಾಂಗ್ರೆಸ್ ಸದಸ್ಯರು ಭಾಷಣಕ್ಕೆ ಅಡ್ಡಿಯುಂಟು ಮಾಡಲು ಯತ್ನಿಸಿದರು.ಬಳಿಕ ಬೆಂಗಳೂರಿನ ಕುಡಿಯುವ ನೀರು ಬಿಕ್ಕಟ್ಟು ವಿಚಾರವನ್ನು ಪ್ರಸ್ತಾಪಿಸಿದ ದೇವೇಗೌಡ ಅವರು, ಬೆಂಗಳೂರಿನಲ್ಲಿ ಕುಡಿಯುವ ನೀರಿನ ಸಮಸ್ಯೆ ಗಂಭೀರವಾಗಿದೆ. ದಿನೇ ದಿನ ನೀರಿನ ಸಮಸ್ಯೆ ಬಿಗಡಾಯಿಸುತ್ತಿದೆ. ನಗರದ ಜನಸಂಖ್ಯೆ 1.45 ಕೋಟಿ ದಾಟಿದೆ. ನಗರಕ್ಕೆ ಕಾವೇರಿ ನ್ಯಾಯಮಂಡಳಿಯು 20 ಟಿಎಂಸಿ ಅಡಿ ನೀರು ಹಂಚಿಕೆ ಮಾಡಿದ್ದು, ಅಷ್ಟು ಪ್ರಮಾಣದ ನೀರು ಏನೇನಕ್ಕೂ ಸಾಲದು. ಕನಿಷ್ಟ 50 ಟಿಎಂಸಿ ನೀರು ಹಂಚಿಕೆ ಮಾಡಬೇಕೆಂದು ಒತ್ತಾಯಿಸಿದರು.



ಬೆಂಗಳೂರಿನ ನೀರಿನ ಸಮಸ್ಯೆ ಬಗೆಹರಿಸಲು ಹಿಂದಿನ ಪ್ರಧಾನಿ ಮನಮೋಹನ್ ಸಿಂಗ್ ಅವರಿಗೆ ಮನವಿ ಮಾಡಿದ್ದೆ. ಆಗ ಖರ್ಗೆ ಸಚಿವರಾಗಿದ್ದರು. ಆದರೆ, ಸಿಂಗ್ ಅವರ ಕೈ ಚೆಲ್ಲಿದ್ದರು. ಆದರೆ, ಈ ನೀರಿನ ಬಿಕ್ಕಟ್ಟನ್ನು ಬಗೆಹರಿಸಲು ಮೋದಿ ಅವರಿಂದ ಸಾಧ್ಯ. ಇದು ನನ್ನ ಬಲವಾದ ನಂಬಿಕೆ ಎಂದು ಪ್ರತಿಪಾದಿಸಿದರು.

## ರಕ್ತನಿಧಿ ಪ್ರಯೋಗ ಶಾಲಾ ತಂತ್ರಜ್ಞರ ಹುದ್ದೆಗೆ ಅರ್ಜಿ ಆಹ್ವಾನ

**ಹಾಸನ:** ಹಾಸನ ಜಿಲ್ಲಾ ಆಸ್ಪತ್ರೆಯ ಸರ್ಕಾರಿ ರಕ್ತನಿಧಿ ಕೇಂದ್ರಕ್ಕೆ ಗುತ್ತಿಗೆ ಆಧಾರದ ಮೇಲೆ ಪ್ರಯೋಗ ಶಾಲಾ ತಂತ್ರಜ್ಞರ ಒಂದು ಹುದ್ದೆಗೆ ನೇರ ನೇಮಕಾತಿಗೆ ಅರ್ಜಿ ಆಹ್ವಾನಿಸಲಾಗಿದೆ.

ವಿದ್ಯಾರ್ಹತೆ, ಅಂಗೀಕೃತ ವಿಶ್ವವಿದ್ಯಾನಿಲಯದ ಮಾನ್ಯತೆ ಪಡೆದ ಸಂಸ್ಥೆಯಿಂದ ಆಒಐಖಿ ಅಥವಾ ಸಮಾನವಾದ ವಿದ್ಯಾರ್ಹತೆ ಸಮನಾದ ವಿದ್ಯಾರ್ಹತೆ ಎಂದರೆ ಆಒಐಖಿ, ಃಛಿ.ಒಐಖಿ, ಎಂದು ಅಥೈಸಿಕೊಳ್ಳುವುದು) ಮತ್ತು ವಿಜ್ಞಾನ ವಿಷಯದಲ್ಲಿ ಪದವಿ ಪೂರ್ವ ವಿದ್ಯಾರ್ಹತೆ (ಪಿ.ಯು.ಸಿ ತೇರ್ಗಡೆ ಹೊಂದಿರಬೇಕು), ಹಾಗೂ 2 ವರ್ಷ ರಕ್ತ ಕೇಂದ್ರದಲ್ಲಿ ಕೆಲಸ ಮಾಡಿದ ಅನುಭವ ಹೊಂದಿರಬೇಕು.ವೇತನಶ್ರೇಣಿ,

ಸಂಚಿತ ಮೊತ್ತ ಮಾಸಿಕ 25000 ರೂಗಳು, ಸ್ಥಳೀಯರಿಗೆ ಆದ್ಯತೆ ಮೆರೆಗೆ ನೇಮಕ ಮಾಡಲಾಗುವುದು, ಕನ್ನಡ ಭಾಷಾ ಜ್ಞಾನ ಹೊಂದಿರತಕ್ಕದ್ದು, ಕಂಪ್ಯೂಟರ್ ಜ್ಞಾನ (ಇಂಟರ್‌ನೆಟ್ ಬ್ರೌಸಿಂಗ್, ಇ-ಮೇಲ್, ಎಂ.ಎಸ್.ಆಫೀಸ್‌ಗಳ ) ಪರಿಣಿತಿ ಹೊಂದಿರಬೇಕು.ನೇರ ಸಂದರ್ಶನದ ಮೂಲಕ ಆಯ್ಕೆ ಮಾಡಲಾಗುವುದು, ಸಾಮಾನ್ಯ ಆರೋಗ್ಯ ಸೇವೆಗಳ ನಿರ್ದೇಶನಾಲಯ, ನವದೆಹಲಿ/ರಾಜ್ಯ ಸರ್ಕಾರ/ ನ್ಯಾಕೋ ಕೆ.ಎಸ್.ಎ.ಪಿ.ಎಸ್ ನ ಷರತ್ತು ಮತ್ತು ನಿಬಂಧನೆಗೊಳಪಟ್ಟು ಆಯ್ಕೆ ಮಾಡಲಾಗುವುದು.ಸಂದರ್ಶನ ನಡೆಯುವ ಸ್ಥಳ, ಜಿಲ್ಲಾ ಏಡ್ಸ್ ನಿಯಂತ್ರಣ ಮತ್ತು ಪ್ರತಿಬಂಧಕ ಘಟಕ, 2ನೇ ಮಹಡಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಚೇರಿ ಕಟ್ಟಡ, ಹಾಸನಾಂಬ ಒಳ ಕ್ರೀಡಾಂಗಣದ ಹತ್ತಿರ, ಸಾಲಗಾಮೆ ರಸ್ತೆ, ಹಾಸನ. ಫೆ.21 ಬೆಳಗ್ಗೆ 10 ಗಂಟೆಗೆ ಸಂದರ್ಶನ ಮಾಡಲಾಗುತ್ತದೆ. ಮೂಲದಾಖಲಾತಿಗಳೊಂದಿಗೆ ಹಾಜರಾಗತಕ್ಕದ್ದು, ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 08172 250662, 9449846976 ನ್ನು ಸಂಪರ್ಕಿಸಿ ಮಾಹಿತಿ ಪಡೆದುಕೊಳ್ಳಬಹುದು ಎಂದು ಜಿಲ್ಲಾ ಏಡ್ಸ್ ನಿಯಂತ್ರಣ ಮತ್ತು ಪ್ರತಿಬಂಧಕ ಘಟಕದ ಜಿಲ್ಲಾ ಏಡ್ಸ್/ಕ್ಷಯ ನಿಯಂತ್ರಣಾಧಿಕಾರಿಗಳು ತಿಳಿಸಿದ್ದಾರೆ.

## ಕುರಿ ಮತ್ತು ಮೇಕೆ ಸಾಕಾಣಿಕೆ ತರಬೇತಿ

**ದಾವಣಗೆರೆ :** ದಾವಣಗೆರೆ ಪಶುಪಾಲನಾ ಮತ್ತು ಪಶುವೈದ್ಯಕೀಯ ತರಬೇತಿ ಕೇಂದ್ರದಲ್ಲಿ ಕುರಿ ಮತ್ತು ಮೇಕೆ ಸಾಕಾಣಿಕೆ ತರಬೇತಿ ಫೆಬ್ರವರಿ 14 ಮತ್ತು 15 ರಂದು ಆಯೋಜಿಸಲಾಗಿದೆ.ಆಸಕ್ತ ರೈತರು ಆಧಾರ್ ಕಾರ್ಡ್ ಜೆರಾಕ್ಸ್, 2 ಪಾಸ್ ಪೋರ್ಟ್ ಸೈಜ್ ಪೋಟೋ ಮತ್ತು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರು ಜಾತಿ ಪ್ರಮಾಣ ಪತ್ರದ ಜೆರಾಕ್ಸ್ ಪ್ರತಿಯೊಂದಿಗೆ ಹಾಜರಾಗಬೇಕು. ತರಬೇತಿ ಕಾರ್ಯಕ್ರಮಕ್ಕೆ ಯಾವುದೇ ಪ್ರೋತ್ಸಾಹಧನ ಮತ್ತು ಭತ್ಯೆಗಳನ್ನು ನೀಡಲಾಗುವುದಿಲ್ಲ. ಹೆಚ್ಚಿನ ಮಾಹಿತಿಗಾಗಿ ಪಶುಪಾಲನಾ ಮತ್ತು ಪಶುವೈದ್ಯಕೀಯ ತರಬೇತಿ ಕೇಂದ್ರ, ದಾವಣಗೆರೆ ಕಚೇರಿ ದೂ.ಸಂ: 08192-233787 ಸಂಪರ್ಕಿಸಿ ಮಾಹಿತಿ ಪಡೆದುಕೊಳ್ಳಬಹುದು ಎಂದು ಪಶುವೈದ್ಯಾಧಿಕಾರಿಗಳು ತಿಳಿಸಿದ್ದಾರೆ.

# ಪಠ್ಯಪುಸ್ತಕಗಳಲ್ಲಿ ಮತಭೇದದ ಬೀಜ: ಕಲಿಯುವವರ ಭವಿಷ್ಯವೇನು

ಪ್ರಾಚೀನ ಕಾಲದಿಂದಲೂ ಜಗತ್ತಿಗೆ ಅಗಾಧವಾದ ಜ್ಞಾನವನ್ನು ದಾರಿಯೆರೆಯುತ್ತಾ ಬಂದ ರಾಷ್ಟ್ರ ಭಾರತ. ನಳಂದ, ತಕ್ಷಶಿಲಾ, ವಿಕ್ರಮಶಿಲಾ, ಪುಷ್ಪಗಿರಿಯಂತಹ ಅನೇಕ ವಿಶ್ವವಿದ್ಯಾಲಯಗಳ ಮೂಲಕ ದೇಶ, ವಿದೇಶಗಳಿಂದ ಬಂದ ಲಕ್ಷಾಂತರ ವಿದ್ಯಾರ್ಥಿಗಳಿಗೆ ಜ್ಞಾನಾರ್ಜನೆ ಮಾಡಿದ್ದು ಇದೆ ನಮ್ಮ ಭಾರತ. ಆ ವಿಶ್ವವಿದ್ಯಾಲಯಗಳ ಇತಿಹಾಸ ಇಂದಿಗೂ ಭಾರತೀಯರನ್ನು ಹೆಮ್ಮೆ ಪಡುವಂತೆ ಮಾಡುತ್ತದೆ. ಕಾಲಾಂತರದಲ್ಲಿ ಅನೇಕ ವಿಶ್ವವಿದ್ಯಾಲಯಗಳು ದಾಳಿಕೋರರ ಕೈಗೆ ಸಿಲುಕಿ ನಾಶವಾದವು. ಅವುಗಳಂತೆಯೇ, ನಮ್ಮ ಕರ್ನಾಟಕದಲ್ಲೂ ಅತ್ಯಂತ ಪ್ರಾಚೀನ ವಿಶ್ವವಿದ್ಯಾಲಯವಾದ ಕರ್ನಾಟಕ ವಿಶ್ವವಿದ್ಯಾಲಯವು ಶಿಕ್ಷಣದಲ್ಲಿ ಅತ್ಯಂತ ಗೌರವವನ್ನು ಹೊಂದಿರುವ ವಿಶ್ವವಿದ್ಯಾಲಯವಾಗಿ ಗುರುತಿಸಿಕೊಂಡು ಬಂದಿದೆ. ರಾಜ್ಯಕ್ಕೆ ಧಾರ್ಮಿಕ, ಶೈಕ್ಷಣಿಕ, ರಾಜಕೀಯ ಮತ್ತು ಸಾಮಾಜಿಕವಾಗಿ ಅನೇಕ ಕೊಡುಗೆಗಳನ್ನು ನೀಡಿರುವುದು ನಮಗೆಲ್ಲರಿಗೂ ತಿಳಿದಿದೆ. ಸಹಜವಾಗಿ ನಾವೆಲ್ಲರೂ ಚುನಾವಣೆ ನಡೆದು ಹೊಸ ಸರ್ಕಾರ ಅಧಿಕಾರಕ್ಕೆ ಬಂದ ಸಂದರ್ಭದಲ್ಲಿ ಪಠ್ಯಪುಸ್ತಕಗಳ ಬದಲಾವಣೆಗಳನ್ನು, ವಿವಾದವನ್ನು ನೋಡುತ್ತಾ ಕೇಳುತ್ತಲೇ ಬಂದಿದ್ದೇವೆ. ಒಂದು ಸರ್ಕಾರ ಅಧಿಕಾರಕ್ಕೆ ಬಂದೊಡನೆ ಒಂದೇ ಸಮುದಾಯವನ್ನು ತುಷ್ಟೀಕರಿಸುವುದು, ಮತ್ತೊಂದು ಸರ್ಕಾರ ಅಧಿಕಾರಕ್ಕೆ ಬಂದ ತಕ್ಷಣ ಮತ್ತೊಂದು ಸಮುದಾಯವನ್ನು ತುಷ್ಟೀಕರಿಸುವುದು, ಇವುಗಳ ಗೊಂದಲದಲ್ಲಿ ವಿದ್ಯಾರ್ಥಿಗಳು ಹೆಚ್ಚು ತಲೆಕೆಡಿಸಿಕೊಳ್ಳದೆ ಹೇಗೋ ಕಂಠಪಾಠ ಮಾಡಿ ಪಾಸಾಗಿ ಬಿಡುತ್ತಾರೆ. ಹೆಚ್ಚು ತಲೆ ಕೆಡಿಸಿಕೊಳ್ಳದೆ ಓದಿದ್ದೆ ಒಳ್ಳೆಯದಾಯಿತು, ಕಾರಣ ನಾವು ಕಲಿತಿದ್ದೆಲ್ಲವು ದಾಳಿಕೋರರ ಕುರಿತೆ.

ಇರಲಿ, ಇದೀಗ ಕರ್ನಾಟಕ ವಿಶ್ವವಿದ್ಯಾಲಯದ ಬಿ.ಎ. ಪ್ರಥಮ ಸೆಮಿಸ್ಟರ್ ಕನ್ನಡ ಭಾಷೆಯ ಬೆಳಗು ಪಠ್ಯಪುಸ್ತಕದಲ್ಲಿ ಇಂತಹದ್ದೇ ರಾಷ್ಟ್ರ ವಿರೋಧಿ, ಸಂವಿಧಾನ ವಿರೋಧಿ ಮತ್ತು ಸಮಾಜವನ್ನು ವಿಘಟಿಸುವ ರೀತಿಯ ಪಠ್ಯವನ್ನು ವಿದ್ಯಾರ್ಥಿಗಳಿಗೆ ಬೋಧಿಸುತ್ತಿರುವುದನ್ನು ನೋಡಿದರೆ ಕರ್ನಾಟಕವನ್ನು ಏನು ಮಾಡಲು ಹೊರಟಿದ್ದಾರೆ ಎಂಬ ಭಯ ಕಾಡುತ್ತಿದೆ. ಬೆಳಗು ಸಂಪಾದಕೀಯ ಕೃತಿಯ ಘಟಕ ಒಂದರಲ್ಲಿ ರಾಷ್ಟ್ರೀಯತೆ ಎಂಬ ಶೀರ್ಷಿಕೆಯಡಿ ರವೀಂದ್ರನಾಥ್ ಠಾಗೋರ್, ದೇವನೂರು ಮಹಾದೇವ, ರಘುನಾಥ ಚ.ಹ., ರಾಮಲಿಂಗಪ್ಪ ಟಿ.ಬೇಗೂರ ಲೇಖನಗಳಿವೆ. ನಮ್ಮ ಪೂರ್ವಜರ ಕಾಲದಿಂದಲೂ ನಾವು ಭಾರತ ಮಾತೆಯನ್ನು ಅತ್ಯಂತ ಪೂಜನೀಯ ಸ್ಥಾನದಲ್ಲಿಟ್ಟು ಆರಾಧಿಸುತ್ತಿದ್ದೇವೆ. ಎಂದಿಗೂ ಇದು ಧರ್ಮಾದಾರಿತವಾಗಿ ಗುರುತಿಸಿಕೊಂಡಿದ್ದಲ್ಲ. ಆದರೆ ಈ ಪುಸ್ತಕದ 4ನೇ ಅಧ್ಯಾಯದಲ್ಲಿ ರಾಷ್ಟ್ರೀಯತೆಯ ಆಚರಣೆಯ ಸುತ್ತ ಎಂಬ ಲೇಖನವನ್ನು ರಾಮಲಿಂಗಪ್ಪ ಟಿ.ಬೇಗೂರ ಬರೆದಿದ್ದಾರೆ. ಭಾರತಾಂಬೆಯ ಕಲ್ಪನೆ ಎಂಬ ಉಪ ಅಧ್ಯಾಯದಲ್ಲಿ (ಪುಟ 28, ಕಂಡಿಕೆ 2) ಭಾರತ ಮಾತೆಯ ಚಿತ್ರ ಹಿಂದೂ ಮಾತೆಯ ಚಿತ್ರವೇ ಆಗಿದೆ. ಆ ಚಿತ್ರವನ್ನು ನೋಡಿದರೆ ಅಲ್ಲಿ ಯಾವ ಮುಸ್ಲಿಂ, ಸಿಖ್, ಜೈನ, ಗೊಲ್ಲ, ಹೊಲೆಯಾದಿ ಮುಂತಾದ ಬೇರೆ ಧರ್ಮಗಳ ಕುರುಹುಗಳು ಕಾಣಿಸುವುದಿಲ್ಲ.ಈಕೆ ಖಂಡಿತ ಹಿಂದೂ ಎಂಬ ಕಲ್ಪಿತ ಮಾತೆ. ಒಂದು ವರ್ಗ ಸಮುದಾಯದ ಕಲ್ಪನೆಯನ್ನು ಇನ್ನಿತರರು ಒಪ್ಪುವಂತೆ ಒತ್ತಾಯಿಸುತ್ತದೆ ಎಂದು ವ್ಯಕ್ತಪಡಿಸಿದ್ದಾರೆ. ಭಾರತ ಮಾತಾ ಕಿ ಜೈ ಎನ್ನುವ ಘೋಷಣೆ ಸ್ವತಂತ್ರ ಹೋರಾಟದ ಸಮಯದಿಂದ ಎಲ್ಲರನ್ನೂ ಒಗ್ಗೂಡಿಸುವಲ್ಲಿ ಅನೇಕ ಸ್ವಾತಂತ್ರ್ಯ ಹೋರಾಟಗಾರರು ಬಳಸಿದ ಧ್ಯೇಯ ಘೋಷ, ಆದರೆ ಭಾರತ ಮಾತಾ ಕಿ ಎಂದು ಯಾರಾದರೂ ಕೂಗಿದಾಗ ಜೈ ಎನ್ನುವುದೇ ಇನ್ನೊಬ್ಬರ ಸೋಲನ್ನು ನೆನಪಿಸುತ್ತದೆಯಂತೇ ಈ ಲೇಖಕರಿಗೆ.

ಸದಾ ಭಾರತವನ್ನು ವಿರೋಧಿಸುವ, ದ್ವೇಷಿಸುವ ಶತ್ರು ರಾಷ್ಟ್ರದ ಕುರಿತು, ದೇಶ ವಿಭಜನೆಯ ಹಿಂಸೆ ಘಟಿಸಿ 60 ವರ್ಷಗಳಾದರೂ ಭಾರತ ಹಿಂದೂಗಳ ಸ್ವತ್ತು, ಪಾಕಿಸ್ತಾನ ಮುಸ್ಲಿಮರ ಸ್ವತ್ತು ಎಂಬ ಭಾವನೆ ಗಾಢವಾಗಿರುವುದು ರಾಷ್ಟ್ರವನ್ನು ಧರ್ಮಗಳು ಆಳುವ ಪರಿಯಾಗಿವೆ ಎಂದು ಉಲ್ಲೇಖಿಸುತ್ತಾರೆ .(ಪುಟ 33, ಕಂಡಿಕೆ 1)

ರಾಷ್ಟ್ರೀಯತೆಯ ಪಿತ್ತ ನೆತ್ತಿಗೆ ಏರಿದರೆ ನಾವು ಸ್ವಾತಂತ್ರ್ಯವಾಗಿ ಅಣುಬಾಂಬು ತಯಾರಿಸುತ್ತೇವೆ. ಅದರಿಂದ ಪಾಕಿಸ್ತಾನವು ಭಯಪ್ರೇರಿತವಾಗಿ ನಾನೇನು ಕಡಿಮೆ ಎಂದು ಅದಕ್ಕಾಗಿ ತಾನು ಸಾವಿರಾರು ಕೋಟಿ ಖರ್ಚು ಮಾಡುತ್ತದೆ. ಸಾವಿರಾರು ಕೋಟಿ ರೂಪಾಯಿಗಳನ್ನು ಚಂದ್ರಯಾನಕ್ಕೆ ಖರ್ಚು ಮಾಡಿದ್ದೇವೆ. ಪ್ರಜಾಪ್ರಭುತ್ವದಲ್ಲಿ ಕಟ್ಟಕಡೆಯ ಪ್ರಜೆಗೆ ಈ ಸಾವಿರಾರು ಕೋಟಿಗಳ ಪ್ರತಿಷ್ಠೆಯ ಖರ್ಚಿನಿಂದ ಏನು ಲಾಭವಾಯಿತು? ನಮ್ಮಲ್ಲಿನ

ಬಡತನ, ಹಸಿವು, ನಿರುದ್ಯೋಗ, ಅನಕ್ಷರತೆ, ಪ್ರಾದೇಶಿಕ ಅಸಮಾನತೆ, ರೈತರ ಆತ್ಮಹತ್ಯೆ ಇಂಥ ಯಾವುದಾದರೂ ಸಮಸ್ಯೆ ಬಗೆಹರಿಯಿತೆ?(ಪುಟ 36, ಕಂಡಿಕೆ 2) ಎಂದು ಕರೆಯುವ ಮೂಲಕಾ ದೇಶದ ಸಾಧನೆಯನ್ನು ತುಚ್ಛವಾಗಿ ಕಂಡಿದ್ದಾರೆ. ಹೋಗಲಿ ಕೇವಲ ಭಾರತ ಮಾತೆಯ ಮೇಲೆ ಮಾತ್ರ ಈ ದ್ವೇಷ ಎಂದುಕೊಂಡು ಮುಂದೆ ಓದಿದರೆ ಹೀಗಿದೆ, ಸ್ವಾತಂತ್ರ್ಯಕ್ಕೆ ಮುಂಚೆ ಇದ್ದ ಒಬ್ಬಳೆ ಮಾತೆಯ ಜೊತೆಗೆ ಭಾಷಾವಾರು ಪ್ರಾಂತ್ಯಗಳ ವಿಂಗಡಣೆಯ ನಂತರ ರಾಜ್ಯವಾರು ಮಾತೆಯರು ಸೇರಿಕೊಂಡಿದ್ದಾರೆ. ಕನ್ನಡ ರಾಷ್ಟ್ರೀಯತೆಯ ಕುರುಹಾದ ಭುವನೇಶ್ವರಿ ಕೂಡ ಕೋಮುವಾದಿ ಮಾತೆಯೆ. ಎಲ್ಲ ವರ್ಗ, ಜಾತಿಗಳನ್ನು ಈಕೆ ಪ್ರತಿನಿಧಿಸುವುದಿಲ್ಲ (ಪುಟ 29, ಕಂಡಿಕೆ 3) ಎಂದು ಉಲ್ಲೇಖಿಸುವ ಮೂಲಕ ರಾಷ್ಟ್ರಕವಿ ಕುವೆಂಪುರವರ ಜಯ ಭಾರತ ಜನನಿಯ ತನುಜಾತೆ ಜಯ ಹೇ ಕರ್ನಾಟಕ ಮಾತೆ ಎಂಬ ಸಾಲುಗಳನ್ನು ಸಹ ಇಲ್ಲಿ ವ್ಯಂಗ್ಯವಾಗಿ ಬರೆದಿರುವುದು (ಪುಟ 30, ಕಂಡಿಕೆ 1) ಜನರ ಭಾವನೆಗೆ ಧಕ್ಕೆ ತರುವ ವಿಚಾರವಾಗಿದೆ. ಇಷ್ಟೇ ಅಲ್ಲ ಮುಂದೆ ಪ್ರಭು ಶ್ರೀರಾಮನು ದೋಷಿಯಾಗಿದ್ದಾನೆ, ಮುಸ್ಲಿಮರಿಗೆ ಒಂದು ಪವಿತ್ರ ಯಾತ್ರಾ ಕೇಂದ್ರ ಮೆಕ್ಕಾ ಇರುವಂತೆ ಎಲ್ಲಾ ಹಿಂದುಗಳಿಗೆ ಒಂದೇ ಪವಿತ್ರ ಯಾತ್ರಾ ಸ್ಥಳ ಅಯೋಧ್ಯ ಇರಬೇಕೆಂದು ಕೆಲಪರಿವಾರದವರು ಒತ್ತಾಯಿಸುತ್ತಾ ಬಂದಿದ್ದಾರೆ. (ಪುಟ 34, ಕಂಡಿಕೆ 1)

ಸ್ಥಳೀಯ ಪರಕೀಯವಾದ ಮಂಡಿಸುತ್ತಿರುವ ಪರಿವಾರದವರು ಸೋನಿಯಾ ಪರಕೀಯಳು ಎಂಬ ಕಾರಣಕ್ಕೆ ಇಲ್ಲಿ ಪ್ರಧಾನಿ ಆಗಕೂಡದೆಂದು ವಾದಿಸುತ್ತಾರೆ. ರಾಮ ಜನ್ಮಭೂಮಿ,

ಬಾಬ್ರಿ ಮಸೀದಿ ಅಗೆಯುತ್ತಾ ಹೋದರೆ ಇತಿಹಾಸದಲ್ಲಿ ಅದು ಯಾರಿಗೆ ಸೇರಿದ್ದೆಂದು ಶೋಧಿಸಲು ಸಾಧ್ಯವೇ?(ಪುಟ 34, ಕಂಡಿಕೆ 2) ಎಂದು ಉಲ್ಲೇಖಿಸುವ ಮೂಲಕ ರಾಮಮಂದಿರದ ಕುರಿತು ಮಾನ್ಯ ಸರ್ವೋಚ್ಚ ನ್ಯಾಯಾಲಯ ನೀಡಿದ ತೀರ್ಪನ್ನೇ ಸಂಶಿಸಿ, ಸಂವಿಧಾನ ಮತ್ತು ನ್ಯಾಯಾಲಯದ ಕುರಿತು ವಿದ್ಯಾರ್ಥಿಗಳಲ್ಲಿ ಅಗೌರವ ಭಾವನೆಯನ್ನು ಮೂಡಿಸುವಂತೆ ಬರೆದಿದ್ದಾರೆ. ಒಟ್ಟಾರೆ ಈ ಲೇಖನದಲ್ಲಿ ಬೇರೆ ರಾಷ್ಟ್ರಗಳ ಭಯೋತ್ಪಾದಕ ಕೃತ್ಯಗಳ ಬಗ್ಗೆ ಲೇಖಕರಿಗೆ ಇರುವ ಪ್ರೀತಿ, ಓದುವ ವಿದ್ಯಾರ್ಥಿಗಳಲ್ಲಿ ದೇಶ ಮತ್ತು ನಾಡಿನ ಬಗ್ಗೆ ಇರಬೇಕಾದ ಗೌರವದ ಭಾವನೆಯನ್ನು ಕುಗ್ಗಿಸುವ ನಿಟ್ಟಿನಲ್ಲಿ ವ್ಯಕ್ತವಾಗಿದೆ. ಆದರೆ ಈ ರೀತಿಯ ಲೇಖನವನ್ನು ಸೇರಿಸಿದ ಕರ್ನಾಟಕ ವಿಶ್ವವಿದ್ಯಾಲಯಕ್ಕೆ ಒಂದಿಷ್ಟು ನನ್ನ ಪ್ರಶ್ನೆಗಳು...

ಈ ರೀತಿಯ ಲೇಖನವನ್ನು ಪಠ್ಯಪುಸಕಕ್ಕೆ ಸೇರಿಸುವ ಮುನ್ನ ಪರಿಶೀಲಿಸುವುದಿಲ್ಲವೇ

ಒಂದು ವೇಳೆ ಪರಿಶೀಲನೆ ಮಾಡಿದ್ದೆ ಆದರೆ ಈ ರೀತಿಯ ರಾಷ್ಟ್ರವಿರೋಧಿ ಅಧ್ಯಾಯ ಇಟ್ಟಿದ್ಯಾರು

ವಿದ್ಯಾರ್ಥಿಗಳಿಗೆ ರಾಷ್ಟ್ರ ವಿರೋಧಿ ಅಧ್ಯಾಯವನ್ನು ಓದಿಸಿ ಏನು ಮಾಡಲು ಹೊರಟಿದ್ದೀರಿ

ಯಾರನ್ನು ಮೆಚ್ಚಿಸಲು ಈ ರೀತಿಯ ಲೇಖನಗಳು

ಪಠ್ಯ ಪರಿಷ್ಕರಣ ಸಮಿತಿ ತಪ್ಪಿಗೆ ಯಾರಿಗೆ ಶಿಕ್ಷೆ

ಇನ್ನು ಮುಂದಾದರೂ ಈ ರೀತಿಯ ಎಡವಟ್ಟುಗಳನ್ನು ಮಾಡದೆ ವಿಶ್ವವಿದ್ಯಾಲಯದ ಗೌರವವನ್ನು ಕಾಪಾಡಿಕೊಳ್ಳಬಲ್ಲಿರಾ.

ಈ ರೀತಿಯ ರಾಷ್ಟ್ರವಿರೋಧಿ, ಸಂವಿಧಾನ ವಿರೋಧಿ ಹಾಗೂ ಸಮಾಜವನ್ನು ವಿಘಟಿಸುವಂತಹ ಲೇಖನಗಳ ಮೂಲಕ ಹೆಚ್ಚು ಚರ್ಚೆಗೆ ಬರಲೋ,

ಯಾವುದೋ ಸರ್ಕಾರವನ್ನು ಮೆಚ್ಚಿಸುವುದಕ್ಕೋ, ಪ್ರಶಸ್ತಿ ಆಸೆಗೋ ಅಷ್ಟಕ್ಕಾಗಿಯೇ ಹೊರತು ಸಮಾಜಕ್ಕೆ ಸಂದೇಶ ನೀಡುವುದಕ್ಕಾಗಿ ಅಥವಾ ಸುಜ್ಞಾನವನ್ನು ಪಸರಿಸುವುದಕ್ಕಾಗಿ ಅಲ್ಲ. ಹಾಗಾಗಿ ಈಗಿನ ಯುವಜನತೆ ಇಂತಹ ಲೇಖಕರಿಂದ ದೂರವಿರುವುದೇ ಒಳಿತು.



**ಬ್ರಿಜೇಶ್ ಕುಮಾರ್. ಬಿ. ಟಿ.**
**ಯುವ ಚಿಂತಕರು**
**ಚಿತ್ರದುರ್ಗ**

## ಗೋವಾದ ರೇವಣದ ಶ್ರೀ ವಿಮಲೇಶ್ವರ ಸಂಸ್ಥಾನದ ಸಮಿತಿಗೆ ಉಪಾಧ್ಯಕ್ಷರಾಗಿ ಡಾ. ಅರುಣಾಚಲ ಎನ್.ರೇವಣಕರ್ ಪುನರಾಯ್ಕೆ



**ದಾವಣಗೆರೆ:** ಗೋವಾದ ರೇವಣದ ಶ್ರೀ ವಿಮಲೇಶ್ವರ ದೇವಸ್ಥಾನದ ಸಭಾಂಗಣದಲ್ಲಿ ಇತ್ತೀಚಿಗೆ ನಡೆದ ಸರ್ವ ಸದಸ್ಯರ ಮಹಾಸಭೆಯಲ್ಲಿ ದಾವಣಗೆರೆಯ ಡಾ. ಅರುಣಾಚಲ ಎನ್. ರೇವಣಕರ್‌ರವರು ಸರ್ವಾನುಮತದಿಂದ ಅವಿರೋಧವಾಗಿ ಉಪಾಧ್ಯಕ್ಷರಾಗಿ ಪುನರಾಯ್ಕೆಯಾಗಿದ್ದಾರೆ ಎಂದು ಸಮಿತಿಯ ಅಧ್ಯಕ್ಷರಾದ ರಾಮನಾಥ ಪ್ರಭು ದೇಸಾಯಿ ತಿಳಿಸಿದ್ದಾರೆ.

ದೈವಜ್ಞ ಸಮಾಜದ ರೇವಣಕರ ಪರಿವಾರದ ಪದಾಧಿಕಾರಿಗಳು, ಸರ್ವ ಸದಸ್ಯರು ಅಭಿನಂದನೆ ಸಲ್ಲಿಸಿದ್ದಾರೆ. ಸರ್ವ ಸದಸ್ಯರ ಮಹಾಸಭೆಯಲ್ಲಿ ಸಮಿತಿಯ ಪ್ರಧಾನ ಕಾರ್ಯದರ್ಶಿ ದಿಗಂಬರ ಪ್ರಭು ದೇಸಾಯಿ, ಖಜಾಂಚಿ ನಾರಾಯಣ ಜಿ.ಪ್ರಭು ದೇಸಾಯಿ, ಸಹ ಕಾರ್ಯದರ್ಶಿ ಮಧೂರ ಎನ್.ಪ್ರಭು ದೇಸಾಯಿ, ಸಮಿತಿ ಸದಸ್ಯರಾದ ಜಯಂತ್ ಪ್ರಭು ದೇಸಾಯಿ, ಮಹೇಲ ಕೆ.ರೇವಣಕರ್, ದಾವಣಗೆರೆಯ ನಲ್ಲೂರು ಲಕ್ಷ್ಮಣರಾವ್ ನರಹರಿ ರೇವಣಕರ್ ಮುಂತಾದವರು ಉಪಸ್ಥಿತರಿದ್ದರು.

# ನರೇಗಾ ಮಹಿಳೆಯರದ್ದೇ ಮೇಲುಗೈ





ಪುರುಷರ ಸಮಾನವಾಗಿ ಎಲ್ಲಾ ಕ್ಷೇತ್ರದಲ್ಲಿ ಸ್ಥಾನ ಗಿಟ್ಟಿಸಿಕೊಂಡಿರುವ ಮಹಿಳೆಯರು, ನರೇಗಾ ಯೋಜನೆಯಲ್ಲೂ ಮೇಲುಗೈ ಸಾಧಿಸಿದ್ದಾರೆ.

ಗ್ರಾಮೀಣ ಮಹಿಳೆಯರು ಕೇವಲ ಮನೆ, ಮಕ್ಕಳು ಎನ್ನದೇ ಈಗ ಅದನ್ನು ದಾಟಿ ಗಂಡಿಗೆ ಸಮಾನವಾದ ದುಡಿಮೆಗೆ ಕಾಲಿಟ್ಟಿದ್ದಾರೆ. ಇಂತಹ ಸಮಾನ ದುಡಿಮೆಗೆ ಅವಕಾಶ ಮಾಡಿಕೊಟ್ಟಿರುವುದು ನರೇಗಾ ಯೋಜನೆ.

ಮಹಿಳೆಯರಿಗೆ ಸಮಾನ ಮತ್ತು ಸಹಬಾಳ್ವೆಯ ಹಾದಿಯಲ್ಲಿ ಸಾಗಲು ಸಹಕಾರಿಯಾಗಿರುವುದು ಹಾಗೂ ಹೊಸ ಚೈತನ್ಯ ತುಂಬಿರುವುದು ಮಹಾತ್ಮಾಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ.

ಸರ್ಕಾರದ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ಜಿಲ್ಲೆಯ ಗ್ರಾಮೀಣ ಮಹಿಳೆಯರಿಗೆ ಹೆಚ್ಚಿನ ಆದ್ಯತೆ ನೀಡುತ್ತಿದೆ. ಆ ಮೂಲಕ ಮಹಿಳೆಯರಿಗೆ ಸ್ವಾವಲಂಬಿಯ ಬದುಕನ್ನು ಕಟ್ಟಿಕೊಡುತ್ತಿದೆ. ಕಳೆದ 6 ವರ್ಷಗಳಿಂದ ಜಿಲ್ಲೆಯಲ್ಲಿ ಈ ಯೋಜನೆ ಯಶಸ್ವಿಯಾಗಿ ಸಾಗುತ್ತಿರುವುದಲ್ಲದೆ ಪುರುಷರಿಗಿಂತ ಮಹಿಳೆಯರೇ ಹೆಚ್ಚಾಗಿ ತೊಡಗಿಸಿಕೊಂಡಿದ್ದಾರೆ.

ಜಿಲ್ಲೆಯ 7 ತಾಲ್ಲೂಕುಗಳಲ್ಲಿ ಒಟ್ಟು 262 ಗ್ರಾಮಗಳು ಇದ್ದು, 2.42 ಲಕ್ಷಕ್ಕೂ ಹೆಚ್ಚಿನ ಜನ ಉದ್ಯೋಗ ಕಾರ್ಡ್ನ್ನು ಹೊಂದಿದ್ದಾರೆ. ಇದರಲ್ಲಿ 1.47 ಲಕ್ಷ ಜನರ ಜಾಬ್ ಕಾರ್ಡ್ ಚಾಲ್ತಿಯಲಿದ್ದು, ಪ್ರಸ್ತುತದಲ್ಲಿ 5.57 ಲಕ್ಷ ಜನರು ಕೆಲಸದಲ್ಲಿ ನಿರತರಾಗಿದ್ದಾರೆ. ಇದರಲ್ಲಿ ಪರಿಶಿಷ್ಟ ಜಾತಿಯವರು ಶೇ. 2.82 ಹಾಗೂ ಪರಿಶಿಷ್ಟ ಪಂಗಡದವರು ಶೇ.5 ರಷ್ಟು ಇದ್ದಾರೆ. 2024-25 ರಲ್ಲಿ ಶೇ.54.95 ಮಹಿಳೆಯರು ಇದ್ದಾರೆ.

ಮಹಿಳೆಯರೇ ಮೇಲುಗೈ:

ಜಿಲ್ಲೆಯಲ್ಲಿ ಮಹಿಳೆಯರು ಇದರ ಲಾಭವನ್ನು ಹೆಚ್ಚಾಗಿ ಪಡೆಯುತ್ತಿದ್ದು, 2019-20 ರಲ್ಲಿ ಶೇ.64.96 ರಷ್ಟು ನರೇಗಾ ಯೋಜನೆಯ ಫಲಾನುಭಾವಿಗಳು ಇದ್ದರೆ ಅದರಲ್ಲಿ ಶೇ. 50.86 ರಷ್ಟು ಫಲಾನುಭವಿಗಳು ಮಹಿಳೆಯರೇ ಆಗಿದ್ದಾರೆ. 2020-21 ರಲ್ಲಿ ಶೇ.100 ರಷ್ಟರಲ್ಲಿ ಮಹಿಳೆಯರು ಶೇ.49.65, 2021-22 ರಲ್ಲಿ ಶೇ.102.19 ರಲ್ಲಿ ಮಹಿಳೆಯರು ಶೇ.49.39, 2022-23 ರಲ್ಲಿ ಶೇ.108.09 ರಲ್ಲಿ ಮಹಿಳೆಯರು ಶೇ.51.29, 2023-24 ರಲ್ಲಿ ಶೇ. 100.32 ರಷ್ಟರಲ್ಲಿ ಮಹಿಳೆಯರು ಶೇ.53.84, 2024-25 ರಲ್ಲಿ ಶೇ.77.22 ರಷ್ಟರಲ್ಲಿ ಮಹಿಳೆಯರು ಶೇ. 54.95 ರಷ್ಟು ಫಲಾನುಭವಿಗಳಿರುವುದು ಮಹಿಳೆಯರದ್ದೇ ಮೈಲುಗೈ ಎಂಬುದನ್ನು ಸಾಬೀತುಪಡಿಸಿದೆ.

ಆಯವ್ಯಯದಲ್ಲಿ ಕೊರತೆ ಇಲ್ಲ:

ಜಿಲ್ಲೆಯಲ್ಲಿ ನರೇಗಾ ಯೋಜನೆಯು ಯಶಸ್ವಿಯಾಗಿ ಸಾಗುತ್ತಿದೆ. ಪ್ರತಿ ವರ್ಷವೂ ಈ ಯೋಜನೆಗೆ ಬೇಕಾದ ಅನುದಾನವನ್ನು ಸರಿಯಾದ ಕ್ರಮದಲ್ಲಿ ಎಲ್ಲೂ ವ್ಯರ್ಥವಾಗದಂತೆ ಜಿಲ್ಲಾ ಪಂಚಾಯತ್ ನಿಗಾ ವಹಿಸಿ ಬಳಸುತ್ತಿದೆ. ಅದರಂತೆ ಜಿಲ್ಲೆಯ ಎಲ್ಲಾ ತಾಲ್ಲೂಕುಗಳಿಗೆ ಎಷ್ಟು ಅನುದಾನ ಬೇಕೋ ಅಷ್ಟು ಮಾತ್ರ ಅನುದಾನ ಪಡೆಯುತ್ತಿದ್ದು, ಅನುದಾನವನ್ನು ವ್ಯರ್ಥವಾಗದಂತೆ ಕಾಪಾಡಿಕೊಂಡು ಬರುತ್ತಿದೆ.

ಫಲಾನುಭವಿಗಳಿಗೆ ಕೂಲಿಯ ರೂಪದಲ್ಲಿ ದಿನಕ್ಕೆ ರೂ. 349 ರೂ ಗಳು ನೀಡಲಾಗುತ್ತದೆ. 2024-25 ನೇ ಸಾಲಿನಲ್ಲಿ ವಾರ್ಷಿಕ ಗುರಿ ಒಟ್ಟು 29,00,000 ಮಾನವ ದಿನಗಳಾಗಿದ್ದು 22,51,876 ಮಾನವ ದಿನಗಳನ್ನು ಪೂರೈಸಲಾಗಿದೆ. ಸಾಧನೆ ಮಾಡಲಾಗಿದ್ದು ಭೌತಿಕವಾಗಿ ಶೇ.77.56 ಹಾಗೂ ಆರ್ಥಿಕವಾಗಿ ಶೇ.58.77 ಆಗಿದೆ.

ಇದರಲ್ಲಿ ಭದ್ರಾವತಿ ಮೊದಲ ಸ್ಥಾನದಲ್ಲಿದ್ದರೆ, ತೀರ್ಥಹಳ್ಳಿ ಕೊನೆಯ ಸ್ಥಾನದಲ್ಲಿದೆ. ಭದ್ರಾವತಿ ಭೌತಿಕ ಗುರಿ ಶೇ.85.38, ಆರ್ಥಿಕ ಗುರಿ ಶೇ. 64.86 ಸಾಧಿಸಲಾಗಿದೆ ಹೊಸನಗರ ಭೌತಿಕ ಶೇ.59 ,ಆರ್ಥಿಕ ಶೇ.50.89, ಸಾಗರ ಭೌತಿಕ ಶೇ.86.84 ಹಾಗೂ ಆರ್ಥಿಕ ಶೇ.71.72, ಶಿಕಾರಿಪುರ ಭೌತಿಕ ಶೇ.73.69 ಮತ್ತು ಆರ್ಥಿಕ ಶೇ.59.52, ಶಿವಮೊಗ್ಗ ಭೌತಿಕ ಶೇ.91.45 ಹಾಗೂ ಆರ್ಥಿಕ ಶೇ.61.53, ಸೊರಬ ಭೌತಿಕ ಶೇ.74.93 ಹಾಗೂ ಆರ್ಥಿಕ ಶೇ.50.43, ತೀರ್ಥಹಳ್ಳಿ ಭೌತಿಕ ಶೇ.61.50 ಹಾಗೂ ಆರ್ಥಿಕ ಶೇ.47.02 ಗುರಿ ಸಾಧಿಸಲಾಗಿದೆ.

ನರೇಗಾ ಯೋಜನೆ ಕೇವಲ ಜಿಲ್ಲೆಯಲ್ಲಿ ಮಾತ್ರವಲ್ಲದೆ ದೇಶಾದ್ಯಂತ ಯಶಸ್ವಿಯಾಗಿ ನಡೆಯುತ್ತಿದೆ. ನಮ್ಮ ಜಿಲ್ಲೆಯಲ್ಲಿ ಮಹಿಳೆಯರು ಅತ್ಯಂತ ಸಕ್ರಿಯವಾಗಿ ಈ ಯೋಜನೆಯಡಿ ಪಾಲ್ಗೊಂಡು ಪ್ರಯೋಜನೆ ಪಡೆಯುತ್ತಿದ್ದಾರೆ. ಪ್ರಸ್ತುತ ಮಾನವ ದಿನಗಳನ್ನು 100 ದಿನಗಳಿಂದ 150 ದಿನಗಳಿಗೆ ಹೆಚ್ಚಿಸಲು ಆಲೋಚನೆ ನಡೆಸಲಾಗುತ್ತದೆ. ಈ ಹಿಂದೆ ಪ್ರವಾಹ, ಬರದಂತಹ ಪ್ರಾಕೃತಿಕ ವಿಕೋಪ ಸಂಭವಿಸಿದಾಗ 150 ದಿನಗಳು ಕೂಲಿಯನ್ನು ನೀಡಲಾಗುತ್ತಿತ್ತು. ಈಗ ಇದನ್ನು ಸಂಪೂರ್ಣ ಯೋಜನೆಗೆ 150 ದಿನಗಳನ್ನು ನೀಡುವ ಉದ್ದೇಶವನ್ನು ಕೇಂದ್ರ ಸರ್ಕಾರ ಹೊಂದಿದೆ.

**ಹೇಮಂತ್ ಎನ್,**
**ಜಿ.ಪಂ. ಸಿಇಒ**

## ಮಕ್ಕಳಿಗೆ ಉನ್ನತ ವಿದ್ಯಾಭ್ಯಾಸ ಮಾಡಿಸಿ : ಜಿಲ್ಲಾಧಿಕಾರಿ ಸತ್ಯಭಾಮ

**ಹಾಸನ :** ಇತ್ತೀಚಿನ ದಿನಗಳಲ್ಲಿ ಎಸ್.ಎಸ್.ಎಲ್.ಸಿ, ಪಿ.ಯು.ಸಿ ಗೆ ಕಾಲೇಜುಗಳನ್ನು ಬಿಡುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಹೆಚ್ಚುತ್ತಿದೆ ಸಾರ್ವಜನಿಕರು ತಮ್ಮ ಮಕ್ಕಳು ವ್ಯಾಸಾಂಗ ಮುದುವರೆಸಲು ಪ್ರೋತ್ಸಾಹಿಸಿ ಉನ್ನತ ವಿದ್ಯಾಭ್ಯಾಸ ಮಾಡಿಸಬೇಕು ಎಂದು ಜಿಲ್ಲಾಧಿಕಾರಿ ಸತ್ಯಭಾಮ ತಿಳಿಸಿದ್ದಾರೆ. ಕರ್ನಾಟಕ ಸರ್ಕಾರ, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ ಹಾಗೂ ಹಾಸನದ ಸ್ವಾಯತ್ತ ಸರ್ಕಾರಿ ಕಲಾ ವಾಣಿಜ್ಯ ಮತ್ತು ಸ್ನಾತಕೋತ್ತರ ಕಾಲೇಜಿನ ಸಹಯೋಗದಲ್ಲಿ ಇಂದು ಜಿಲ್ಲಾಧಿಕಾರಿ ಕಚೇರಿ ಆವರಣದಲ್ಲಿ ಆಯೋಜಿಸಿದ್ದ

2025-26ನೇ ಶೈಕ್ಷಣಿಕ ಸಾಲಿನ ಪದವಿ ತರಗತಿಗಳಿಗೆ ಪ್ರವೇಶಾತಿ ಅಭಿಯಾನಕ್ಕೆ ಚಾಲನೆ ನೀಡಿ ಮಾತನಾಡಿದ ಅವರು ಇತ್ತೀಚಿನ ದಿನಗಳಲ್ಲಿ ಕಲಾ, ವಾಣಿಜ್ಯ, ವಿಜ್ಞಾನ ವಿ?ಯಗಳಲ್ಲಿ ಪದವಿಯನ್ನು ಮಾಡುವವರು ಬಹಳ ವಿರಳವಾಗಿದ್ದಾರೆ ಮೆಡಿಕಲ್, ಇಂಜಿನಿಯರಿಂಗ್ ಕ್ಷೇತ್ರಗಳಲ್ಲಿ ವಿದ್ಯಾಭ್ಯಾಸ ಮಾಡಲು ಇಷ್ಟಪಡುತ್ತಾರೆ, ವಿದ್ಯಾರ್ಥಿಗಳು ಯಾವ ವಿಭಾಗದಲ್ಲಿ ವಿದ್ಯಾಭ್ಯಾಸ ಮಾಡುತ್ತಿದ್ದೀರಿ ಆ ವಿಭಾಗಕ್ಕೆ, ಕಾಲೇಜಿಗೆ ಕೀರ್ತಿ ತರುವಂತಹ ಕೆಲಸ ಮಾಡಬೇಕು ಎಂದರು.



ಕಲಾ ವಿಭಾಗದಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವಂತಹ ವಿದ್ಯಾರ್ಥಿಗಳಲ್ಲಿ ಕೀಳರಿಮೆ ಬೇಡ ಇತ್ತೀಚಿನ ದಿನಗಳಲ್ಲಿ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಬಹಳ ಪ್ರಯೋಜನಕಾರಿ ವಿ?ಯಗಳು ಕಲಾ ವಿಭಾಗದಲ್ಲಿಯೇ ಇವೆ, ವಿದ್ಯಾರ್ಥಿಗಳು ಯಶಸ್ಸು ಸಾಧಿಸಲು ಉತ್ತಮ ಕೌಶಲ್ಯಗಳನ್ನೂ ಬಳಸಿಕೊಂಡು ಕಠಿಣ ಪರಿಶ್ರಮದೊಂದಿಗೆ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಸಿದ್ಧತೆ ನಡೆಸಿಕೊಂಡು ಸಾಧನೆ ಮಾಡಿ ಎಂದು ತಿಳಿಸಿದರು.

ಸರ್ಕಾರಿ ಕಲಾ ವಾಣಿಜ್ಯ ಮತ್ತು ಸ್ನಾತಕೋತ್ತರ ಸ್ವಾಯತ್ತ ಕಾಲೇಜಿನ ಪ್ರಾಂಶುಪಾಲರು, ಪ್ರಾಧ್ಯಾಪಕರು ಹಾಗೂ ಕಾಲೇಜಿನ ಎನ್.ಸಿ.ಸಿ ವಿದ್ಯಾರ್ಥಿಗಳು ಭಾಗವಹಿಸಿದ್ದರು.

## ಬಿಜೆಪಿ ಅಕ್ರಮಗಳ ವಿರುದ್ಧ ಅಣ್ಣಾ ಹಜಾರೆ ಧ್ವನಿ ಎತ್ತುತ್ತಿಲ್ಲ ; ಸಂಜಯ್ ರಾವುತ್



**ಪುಣೆ :** ಹಿರಿಯ ಸಾಮಾಜಿಕ ಕಾರ್ಯಕರ್ತ ಅಣ್ಣಾ ಹಜಾರೆ ಅವರು 2014ರ ನಂತರ ಬಿಜೆಪಿ ನೇತೃತ್ವದ ಸರ್ಕಾರಗಳ ಅಕ್ರಮಗಳ ವಿರುದ್ಧ ಧ್ವನಿ ಎತ್ತಲಿಲ್ಲ ಎಂದು ಶಿವಸೇನೆ (ಯುಬಿಟಿ) ಸಂಸದ ಸಂಜಯ್ ರಾವುತ್ ಆರೋಪಿಸಿದ್ದಾರೆ.

ಅರವಿಂದ್ ಕೇಜ್ರಿವಾಲ್ ಅವರು ಹಣದ ಮೇಲೆ ಗಮನಹರಿಸಿದ್ದರಿಂದ ಇತ್ತೀಚಿನ ದೆಹಲಿ ವಿಧಾನಸಭಾ ಚುನಾವಣೆಯಲ್ಲಿ ಆಮ್ ಆದಿ ಪಕ್ಷ (ಎಎಪಿ) ಸೋತಿದೆ ಎಂದು ಹಜಾರೆ ಹೇಳಿದ ಕೆಲವು ದಿನಗಳ ನಂತರ ಮಂಗಳವಾರ ರಾವುತ್ ಅವರ ಈ ಕಾಮೆಂಟ್ಗಳು ಬಂದಿವೆ.

ಸೇನೆಯ (ಯುಬಿಟಿ) ನಾಯಕರ ಟೀಕೆಗೆ ಹಜಾರೆ ತಿರುಗೇಟು ನೀಡಿದರು, ಕೆಲವರು ತಮ ಮಾನಸಿಕ ಸೆಟಪ್ಗೆ ಅನುಗುಣವಾಗಿ ವಿಷಯಗಳನ್ನು ಗ್ರಹಿಸುತ್ತಾರೆ ಎಂದು ಹೇಳಿದರು.

ಅರವಿಂದ್ ಕೇಜ್ರಿವಾಲ್ ಮತ್ತು ಮನೀಶ್ ಸಿಸೋಡಿಯಾ ಮತ್ತಿತರರು ಅಣ್ಣಾ (ಹಜಾರೆ) ಅವರನ್ನು ಮಹಾತರನ್ನಾಗಿ ಮಾಡಿದರು. ಅವರಿಲ್ಲದಿದ್ದರೆ, ಅಣ್ಣಾ ದೆಹಲಿಯನ್ನು ನೋಡಲಾಗಲಿಲ್ಲ ಅಥವಾ ರಾಮ್ ಲೀಲಾ ಮತ್ತು ಜಂತರ್ ಮಂತರ್ (ಭ್ರಷ್ಟಾಚಾರದ ವಿರುದ್ಧ ಪ್ರತಿಭಟಿಸಲು) ಭೇಟಿ ನೀಡಲು ಸಾಧ್ಯವಿರಲಿಲ್ಲ ಎಂದು ಮುಂಬೈನಲ್ಲಿ ಸುದ್ದಿಗಾರರೊಂದಿಗೆ ಮಾತನಾಡುತ್ತಾ ರಾವತ್ ಹೇಳಿದ್ದಾರೆ.

2014ರ ನಂತರ ಬಿಜೆಪಿ ಆಡಳಿತದಲ್ಲಿರುವ ಕೇಂದ್ರ ಮತ್ತು ಮಹಾರಾಷ್ಟ್ರದಲ್ಲಿ ಅಕ್ರಮಗಳ ಸ್ಫೋಟ ಸಂಭವಿಸಿದೆ, ಆದರೆ ಅಣ್ಣಾ ಒಂದೇ ಒಂದು ಮಾತನ್ನೂ ಆಡಲಿಲ್ಲ ಎಂದು ರಾಜ್ಯಸಭಾ ಸದಸ್ಯ ಹೇಳಿದರು. ಟೀಕೆಗೆ ಪ್ರತಿಕ್ರಿಯಿಸಿದ ಹಜಾರೆ, ನಿರ್ದಿಷ್ಟ ಕನ್ನಡಕವನ್ನು ಧರಿಸಿದ ವ್ಯಕ್ತಿಯು ಜಗತ್ತನ್ನು ಅದಕ್ಕೆ ತಕ್ಕಂತೆ ನೋಡುತ್ತಾನೆ ಎಂದು ಹೇಳಿದರು.

ಇತ್ತೀಚಿನ ದೆಹಲಿ ವಿಧಾನಸಭಾ ಚುನಾವಣೆಯಲ್ಲಿ ಎಎಪಿ ಹೀನಾಯವಾಗಿ ಸೋತ ನಂತರ, ಕೇಜ್ರಿವಾಲ್ ಅವರು ಕೇವಲ ಮದ್ಯದ ಮೇಲೆ ಕೇಂದ್ರೀಕರಿಸಿದ್ದಾರೆ ಮತ್ತು ಜನರ ಸೇವೆಯನ್ನು ಮರೆತಿದ್ದಾರೆ ಎಂದು ಹಜಾರೆ ಹೇಳಿದ್ದಾರೆ.

## ಮಿಜೋರಾಂ : 173 ಕೋಟಿ ಮೌಲ್ಯದ ಡ್ರಗ್ಸ್ ಸೀಜ್



**ಐಜ್ವಾಲ್:** ಮಿಜೋರಾಂನ ಚಂಫೈ ಜಿಲ್ಲೆಯ ಭಾರತ-ಮ್ಯಾನಾರ್ ಗಡಿಯಲ್ಲಿ 173.73 ಕೋಟಿ ರೂಪಾಯಿ ಮೌಲ್ಯದ ಮೆಥಾಂಫೆಟಮೈನ್ ಮಾತ್ರೆಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಅಸ್ಸಾಂ ರೈಫಲ್ಸ್ ಹೇಳಿಕೆಯಲ್ಲಿ ತಿಳಿಸಿದೆ.ಬಂದ ಖಚಿತ ಸುಳಿವಿನ ಮೇರೆಗೆ ಅಸ್ಸಾಂ ರೈಫಲ್ಸ್ ಮತ್ತು ಮಿಜೋರಾಂ ಪೊಲೀಸರು ಜಂಟಿಯಾಗಿ ಫೆಬ್ರವರಿ 9 ರಂದು ಝೋಖಾವ್ತಾರ್ನ ಗಡಿ ದಾಟುವ ಸ್ಥಳದಲ್ಲಿ ಕೋಟ್ಯಂತರ ಮೌಲ್ಯದ ಡ್ರಗ್?ಸ ವಶಪಡಿಸಿಕೊಂಡರು ಎಂದು ಅದು ಹೇಳಿದೆ.

ಜಂಟಿ ತಂಡವು ಅಕ್ರಮ ಸಾಗಣೆಯನ್ನು ಸಾಗಿಸುತ್ತಿರುವ ಶಂಕಿತ ವ್ಯಕ್ತಿಗಳನ್ನು ಗುರುತಿಸಿ ಅವರನ್ನು ತಡೆದಿದೆ ಎಂದು ಹೇಳಿಕೆಯಲ್ಲಿ ಮಾಹಿತಿ ನೀಡಲಾಗಿದೆ.ದಾಳಿ ವೇಳೆ ಡ್ರಗ್ಸ್ ಸಾಗಿಸುತ್ತಿದ್ದವರು ಸರಕುಗಳನ್ನು ಸ್ಥಳದಲ್ಲೇ ಬಿಟ್ಟು ಓಡಿಹೋದರು ಎನ್ನಲಾಗಿದೆ.173.73 ಮೌಲ್ಯದ ಸರಕುಗಳನ್ನು ಹೆಚ್ಚಿನ ತನಿಖೆ ಮತ್ತು ಕಾನೂನು ಪ್ರಕ್ರಿಯೆಗಳಿಗಾಗಿ ಪೊಲೀಸರು ವಶಪಡಿಸಿಕೊಂಡಿದ್ದಾರೆ ಎಂದು ಹೇಳಿಕೆಯಲ್ಲಿ ತಿಳಿಸಲಾಗಿದೆ.

## ನಕ್ಸಲ್ ದಾಳಿಗೆ ಯೋಧ ಹುತಾತ್ಮ

**ಮುಂಬೈ:** ಗಡ್ಚಿರೋಲಿ ಜಿಲ್ಲೆಯಲ್ಲಿ ನಕ್ಸಲೀಯರೊಂದಿಗಿನ ಎನ್ಕೌಂಟರ್ನಲ್ಲಿ ಹುತಾತರಾದ ಕಾನ್ಸ್ಟೆಬಲ್ ಮಹೇಶ್ ನಾಗುಲ್ವಾರ್ ಅವರ ಕುಟುಂಬಕ್ಕೆ ರಾಜ್ಯ ಸರ್ಕಾರ 2 ಕೋಟಿ ರೂಪಾಯಿ ಆರ್ಥಿಕ ನೆರವು ನೀಡಲಿದೆ ಎಂದು ಮಹಾರಾಷ್ಟ್ರ ಮುಖ್ಯಮಂತ್ರಿ ದೇವೇಂದ್ರ ಫಡ್ನವೀಸ್ ಘೋಷಿಸಿದ್ದಾರೆ.ನಿನ್ನೆ ಗಡ್ಚಿರೋಲಿಯಲ್ಲಿ ನಕ್ಸಲೀಯರೊಂದಿಗಿನ ಗುಂಡಿನ ಚಕಮಕಿಯಲ್ಲಿ ಗಾಯಗೊಂಡಿದ್ದ ವಿಶೇಷ ಕಮಾಂಡೋ ಘಟಕ ಸಿ-60 ನ 39 ವರ್ಷದ ಕಾನ್ಸ್ಟೆಬಲ್ ಸಾವನ್ನಪ್ಪಿದ್ದರು. ನಕ್ಸಲೀಯರ ವಿರುದ್ಧದ ಕಾರ್ಯಾಚರಣೆಯ ವೇಳೆ ಸಿ-60 ಕಮಾಂಡೋ ಘಟಕದ ಸಿಬ್ಬಂದಿ ಗಡ್ಚಿರೋಲಿಯ ಭಮ್ರಗಡ ತಾಲೂಕಿನ ಫುಲ್ನಾರ್ ಅರಣ್ಯ ಪ್ರದೇಶದಲ್ಲಿ ಮಾವೋವಾದಿ ಶಿಬಿರವನ್ನು ಯಶಸ್ವಿಯಾಗಿ ಧ್ವಂಸಗೊಳಿಸಿದ್ದಾರೆ ಎಂದು ಗಹ ಖಾತೆಯನ್ನು ಹೊಂದಿರುವ ಫಡ್ನವಿಸ್ ಹೇಳಿದ್ದಾರೆ. ಆದರೆ, ಎನ್ಕೌಂಟರ್ ವೇಳೆ ಕಾನ್ಸ್ಟೆಬಲ್ ನಾಗುಲ್ವಾರ್ಗೆ ಬುಲೆಟ್ ಗಾಯಗಳಾಗಿವೆ. ತಕ್ಷಣ ಅವರನ್ನು ಹೆಲಿಕಾಪ್ಟರ್ ಮೂಲಕ ಹೆಲಿಕಾಪ್ಟರ್ ಮೂಲಕ ಹೊರತರಲಾಯಿತು ಮತ್ತು ಗಡ್ಚಿರೋಲಿಯ ಜಿಲ್ಲಾ ಆಸ್ಪತ್ರೆಗೆ ದಾಖಲಿಸಲಾಯಿತು ಎಂದು ಫಡ್ನವಿಸ್ ಎಕ್?ಸ ಪೋಸ್ಟ್ ನಲ್ಲಿ ತಿಳಿಸಿದ್ದರು.

ಎಲ್ಲಾ ಪ್ರಯತ್ನಗಳ ಹೊರತಾಗಿಯೂ, ಅವರು ಹುತಾತರಾದರು ಎಂದು ಸಿಎಂ ಹೇಳಿದರು.ನಕ್ಸಲ್ ಮುಕ್ತ ಭಾರತ ಅಭಿಯಾನದಲ್ಲಿ ಕಾನ್ಸ್ಟೆಬಲ್ ನಾಗುಲ್ವಾರ್ ಅವರ ತ್ಯಾಗವನ್ನು ಎಂದಿಗೂ ಮರೆಯಲಾಗದು, ರಾಷ್ಟ್ರಕ್ಕಾಗಿ ಅವರ ಸಮರ್ಪಣೆ ವ್ಯರ್ಥವಾಗುವುದಿಲ್ಲ ಎಂದು ಅವರು ಪ್ರತಿಪಾದಿಸಿದರು. ನಕ್ಸಲ್ ವಿರೋಧಿ ಕಾರ್ಯಾಚರಣೆಯ ನಂತರ ಗಡ್ಚಿರೋಲಿ ಪೊಲೀಸ್ ವರಿಷ್ಠಾಧಿಕಾರಿಯೊಂದಿಗೆ ಮಾತನಾಡಿದ ಫಡ್ನವಿಸ್, ನಾಗುಲ್ವಾರ್ ಅವರ ಕುಟುಂಬಕ್ಕೆ ತಮ ಒಗ್ಗಟ್ಟನ್ನು ವ್ಯಕ್ತಪಡಿಸಿದರು. ಅವರ ಕುಟುಂಬಕ್ಕೆ ರಾಜ್ಯ ಸರ್ಕಾರವು 2 ಕೋಟಿ ರೂಪಾಯಿ ಆರ್ಥಿಕ ನೆರವು ಮತ್ತು ಇತರ ಸೌಲಭ್ಯಗಳು ಮತ್ತು ಬೆಂಬಲವನ್ನು ನೀಡಲಿದೆ ಎಂದು ಫಡ್ನವಿಸ್ ಹೇಳಿದರು.

## ಗ್ರಾಹಕರ ಸಂವಹನ ಸಭೆ

**ಚಿಕ್ಕಮಗಳೂರು: ಫೆ. 13:** ಮೆಸ್ಕಾಂ ಚಿಕ್ಕಮಗಳೂರು ನಗರ ಉಪವಿಭಾಗ ಘಟಕ–3 ರ ವ್ಯಾಪ್ತಿಯಲ್ಲಿ ಬರುವ ಹಳೇ ಉಪ್ಪಳ್ಳಿ ಸರ್ಕಾರಿ ಹಿರಿಯ ಪ್ರಾಥಮಿಕ ಪಾಠ ಶಾಲೆಯಲ್ಲಿ ಫೆಬ್ರವರಿ 15 ರಂದು ಬೆಳಿಗ್ಗೆ 11.00 ಗಂಟೆಗೆ ಮಾಸಿಕ ಗ್ರಾಹಕರ ಸಂವಹನ ಸಭೆ ನಡೆಯಲಿದ್ದು, ಮೆಸ್ಕಾಂನ ಹಿರಿಯ ಅಧಿಕಾರಿಗಳು ಖುದ್ದು ಹಾಜರಿರುತ್ತಾರೆ. ಈ ಸಭೆಯಲ್ಲಿ ಸಂಬಂಧಪಟ್ಟ ಪ್ರದೇಶದ ಗ್ರಾಹಕರ ಅಹವಾಲುಗಳನ್ನು ಸ್ವೀಕರಿಸುವುದರಿಂದ ಸಾರ್ವಜನಿಕರು ನಗರ ಉಪವಿಭಾಗಕ್ಕೆ ಸಂಬಂಧಿಸಿದ ವಿದ್ಯುತ್ ಸಮಸ್ಯೆಗಳ ಬಗ್ಗೆ ಅಹವಾಲು ಸಲ್ಲಿಸಬಹುದಾಗಿರುತ್ತದೆ. ಈ ಅವಕಾಶವನ್ನು ಗ್ರಾಹಕರು ಸದುಪಯೋಗಪಡಿಸಿಕೊಳ್ಳುವಂತೆ ಮೆಸ್ಕಾಂನ ನಗರ ಉಪವಿಭಾಗ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್(ವಿ) ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮಕ್ಕಳ ಕಲ್ಯಾಣ ಸಮಿತಿ ರಚನೆ

**ಚಿಕ್ಕಮಗಳೂರು: ಫೆ. 13:** ಜಿಲ್ಲೆಗೆ ಮಕ್ಕಳ ರಕ್ಷಣಾ ನಿರ್ದೇಶನಾಲಯದಿಂದ ನೂತನವಾಗಿ ಮಕ್ಕಳ ಕಲ್ಯಾಣ ಸಮಿತಿಯನ್ನು ರಚನೆ ಮಾಡಿ ಸರ್ಕಾರದಿಂದ ಆದೇಶ ಹೊರಡಿಸಲಾಗಿದೆ. ಮಕ್ಕಳ ಕಲ್ಯಾಣ ಸಮಿತಿಯು ಒಟ್ಟು 5 ಜನರ ತಂಡವಾಗಿದೆ. ಈ ತಂಡದಲ್ಲಿ ಅಧ್ಯಕ್ಷೆ ಜಯಶೀಲ ಕೆ.ಆರ್., ಮೊ.ಸಂ. 9448324693 ಮತ್ತು ಸದಸ್ಯರಾಗಿ ಕುಮಾರ್ ಪಿ., ಮೊ.ಸಂ. 9964806237, ಜಯಮ್ಮ ಹೆಚ್.ವಿ., ಮೊ.ಸಂ. 9481332484, ಯಶವಂತ್ ಸಿ.ಎಂ., ಮೊ.ಸಂ. 9620647233, ಅಪ್ಪು ಎನ್., ಮೊ.ಸಂ. 9449176647, ಇವರುಗಳು ನೇಮಕವಾಗಿರುತ್ತಾರೆ. ಎಂದು ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪರಿಸರ ಚಾರಣ ಶಿಬಿರಕ್ಕೆ ಹೆಸರು ನೋಂದಣೆ

**ಚಿಕ್ಕಮಗಳೂರು: ಫೆ. 13:** ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಹೊಯ್ಸಳ ಅಡ್ವೆಂಚರ್ ಯೂತ್ ಸ್ಪೋರ್ಟ್ಸ್ ಕ್ಲಬ್, ಚಿಕ್ಕಮಗಳೂರು ಇವರ ಸಹಯೋಗದಲ್ಲಿ ಫೆಬ್ರವರಿ 22 ರಂದು ಸಖರಾಯಪಟ್ಟಣದ ಶಕುನಗಿರಿಗೆ ಪರಿಸರ ಚಾರಣ ಶಿಬಿರವನ್ನು ಆಯೋಜಿಸಲಾಗಿದೆ.

ಆಸಕ್ತ ಅರ್ಹ ಯುವಜನರು ತಮ್ಮ ಹೆಸರನ್ನು ಫೆಬ್ರವರಿ 21ರೊಳಗೆ ಆನಂದ್ ಮೊ.ಸಂ. 7349703244 ಇವರನ್ನು ಸಂಪರ್ಕಿಸಿ ನೋಂದಾಯಿಸಿಕೊಳ್ಳಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಉಪ ನಿರ್ದೇಶಕರ ಕಛೇರಿಯನ್ನು ಕಛೇರಿ ವೇಳೆಯಲ್ಲಿ ಸಂಪರ್ಕಿಸಬಹುದಾಗಿದೆ ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನ ಅಧ್ಯಕ್ಷರಿಗೆ ಅಧಿಕೃತ ಅಹ್ವಾನ

**ತರೀಕೆರೆ:** ಮಾ.7, 8ರಂದು ಪಟ್ಟಣದ ಬಯಲು ರಂಗಮಂದಿರದಲ್ಲಿ ನಡೆಯುತ್ತಿರುವ 20ನೇ ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನದ ಸಮ್ಮೇಳನ ಅಧ್ಯಕ್ಷರಿಗೆ ಜಿಲ್ಲಾ ಕಸಾಪ ಕಾರ್ಯಕಾರಿ ಮಂಡಳಿಯಿಂದ ಸಮ್ಮೇಳನ ಅಧ್ಯಕ್ಷ ಎಚ್.ಎಮ್.ಮರಳುಸಿದ್ದಯ್ಯ ಪಟೇಲ ಅವರಿಗೆ ಜಿಲ್ಲಾಧ್ಯಕ್ಷ ಸೂರಿ ಶ್ರೀನಿವಾಸ್ ನೇತೃತ್ವದ ತಂಡ ಅವರ ಸ್ವಗ್ರಾಮ ತಾಲ್ಲೂಕಿನ ರಂಗೇನಹಳ್ಳಿಯ ನಿವಾಸದಲ್ಲಿ ಅಹ್ವಾನ ನೀಡಿದರು. ಈ ನೆಲದ ಅಪ್ಪಟ ಗ್ರಾಮೀಣ ಪ್ರತಿಭೆಯಾದ ಪಟೇಲ್ ಸಾಕಷ್ಟು ಸಂಶೋಧನಾ ಗ್ರಂಥಗಳನ್ನು ರಚಿಸಿ, ಹಲವು ದೇಶಗಳನ್ನು ಸುತ್ತಿ ಪ್ರಶಸ್ತಿ ಪಡೆದಿರುವುದು ಈ ಗ್ರಾಮದ ಹೆಮ್ಮೆಯ ಸಂಗತಿ. ಇವರು ಈ ಸಮ್ಮೇಳನದ ಸರ್ವಾಧ್ಯಕ್ಷರಾಗಿ ಆಯ್ಕೆಯಾಗಿದ್ದಾರೆ. ಜಿಲ್ಲೆಯ ಇತಿಹಾಸದಲ್ಲಿ ಎಲ್ಲಾ ಭಾಗದ ಜನರು ಸೇರಿ ಸಮ್ಮೇಳನ ಅಧ್ಯಕ್ಷರಿಗೆ ಅಹ್ವಾನದಿಂದ ಸಮ್ಮೇಳನ ಯಶಸ್ವಿಯಾದಂತೆಯೇ ಸರಿ ಎಂದು ಜಿಲ್ಲಾಧ್ಯಕ್ಷ ಸೂರಿ ಶ್ರೀನಿವಾಸ್ ಹೇಳಿದರು. ಸಮ್ಮೇಳನದ ಸ್ವಾಗತ ಸಮಿತಿಯ ಗೌರವಾಧ್ಯಕ್ಷ, ಉಪವಿಭಾಗಾಧಿಕಾರಿ ಕೆ.ಜೆ.ಕಾಂತರಾಜ್ ಸಮಾರಂಭವನ್ನು ಕುರಿತು ಮಾತನಾಡಿ, ಜಿಲ್ಲಾ ಸಾಹಿತ್ಯ ಸಮ್ಮೇಳನ ನಮ್ಮ ಭಾಗದಲ್ಲಿ ನಡೆಯುತ್ತಿದ್ದು, ಇದೇ ಗ್ರಾಮದವರಾದ



ಮರಳುಸಿದ್ದಯ್ಯ ಪಟೇಲರು ಸಂಶೋಧಕರು ಸಮ್ಮೇಳನಾಧ್ಯಕ್ಷರಾಗಿರುವುದು ನಮಗೆಲ್ಲ ಹೆಮ್ಮೆಯ ಸಂಗತಿ ಎಂದರು. ಸಮಾರಂಭದಲ್ಲಿ ಜಿಪಂ ಮಾಜಿ ಅಧ್ಯಕ್ಷ ಹೆಚ್.ವಿಶ್ವನಾಥ್ ಮಾತನಾಡಿದರು. ತಾಲೂಕು ಅಧ್ಯಕ್ಷ ರವಿ ದಳವಾಯಿ, ಇಮ್ರಾನ್ ಅಹಮದ್ ಬೇಗ್, ಜಿಲ್ಲಾ ಕಾರ್ಯದರ್ಶಿ ಪವನ್ ಕುಮಾರ್, ತ.ಮ.ದೇವಾನಂದ, ಕೆ.ಜಯಸ್ವಾಮಿ, ಅರ್ಚನಾ, ರಶ್ಮಿ, ಸುನಿತಾ ಕಿರಣ್, ಉಮಾ ಪ್ರಕಾಶ್, ವಿಶಾಲಾಕ್ಷಮ್ಮ, ಗಾಯಿತ್ರಮ್ಮ, ಕೆ.ಎಸ್.ಶಿವಣ್ಣ, ಮಾವಿನಕಾಯಿ ದಯಾನಂದ್, ಸೋಮಶೇಖರ್ ಇನ್ನಿತರರಿದ್ದರು.

# ಸೌಹಾರ್ದಯುತರಾಗಿ ಸಂಘಟಿತರಾಗಲು ಬಿದರಿ ಕರೆ



ಸೊರಬ: ವೀರಶೈವ ಲಿಂಗಾಯತ ಎರಡು ಒಂದೇ, ಸಮಾಜ ಬಾಂಧ ವರು ಉಪಜಾತಿ ಮರೆತು ಒಂದಾಗಬೇಕು. ಪರಸ್ಪರ ವೈಮನಸ್ಸು ಹಾಗೂ ಅಸೂಯೆಯಿಂದ ಹೊರಬಂದು ಸೌಹಾರ್ದಯುತವಾಗಿ ಸಂಘಟಿತರಾ ಗಬೇಕು ಎಂದು ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ರಾಜ್ಯ ಘಟಕದ ಅಧ್ಯಕ್ಷ ಶಂಕರ ಬಿದರಿ ಕರೆ ನೀಡಿದರು. ಪಟ್ಟಣದ ಮುರುಘಾ ಮಠದಲ್ಲಿ ಮಂಗಳವಾರ ಅಖಿಲ ಭಾರತ ವೀರ ಶೈವ ಲಿಂಗಾಯತ ಮಹಾಸಭಾ ಸೊರಬ ತಾಲ್ಲೂಕು ಘಟಕದ ವತಿ ಯಿಂದ ಹಮ್ಮಿಕೊಂಡಿದ್ದ ಅಭಿನಂದನಾ ಕಾರ್ಯಕ್ರಮದಲ್ಲಿ ಮಾತನಾ ಡಿದರು. ಬೆಳೆಯುವವರನ್ನು ಕಾಲು ಎಳೆಯುವ ಕೆಲಸ ಮಾಡಬಾರದು. ವೀರಶೈವ ಲಿಂಗಾಯತರ ಎಲ್ಲಾ ಪಂಗಡಗಳು ಒಂದಾಗಬೇಕು. ಎಲ್ಲಾ ಸಮಗ್ರ ಮಾಹಿತಿಯನ್ನು ರಾಜ್ಯ ಮಹಾಸಭಾ ಕ್ರೋಢೀಕರಣ ಮಾಡಿಕೊಂಡು ಸಮಾಜದ ಒಗ್ಗಟ್ಟಿನ ಅಸ್ತ್ರವನ್ನು ಪ್ರಯೋಗಿಸಿ ನಮ್ಮ ಹಕ್ಕು ಬೇಡಿಕೆ ಮಂಡಿಸಿ ಮೀಸಲಾತಿ, ಹಕ್ಕು ಸೌಲಭ್ಯಗಳನ್ನು ನೀಡಲು ಸರ್ಕಾರ ಮನೆ ಬಾಗಿಲಿಗೆ ಬರುವಂತೆ ಮಾಡಲು ಸಾಧ್ಯವಿದ್ದು, ಅದು ಒಗ್ಗಟ್ಟಿನಿಂದ ಮಾತ್ರ ಸಾಧ್ಯ ಎಂದರು.

ತಾಲೂಕು ಸಂಘಟನೆಯ ಮೂಲಕ ಸಮಾಜದ ಪ್ರತಿ ಕುಟುಂಬದ ಜನ ಗಣತಿ, ಆರ್ಥಿಕ, ಶೈಕ್ಷಣಿಕ ಸಮಾಜಿಕ ಮಾಹಿತಿಯನ್ನು ಗಣಕೀಕೃತ ಮಾಡಲು ಉದ್ದೇಶಿಸಿದ್ದು, ಶೀಘ್ರದಲ್ಲೇ ರಾಜ್ಯದ ಎಲ್ಲಾ ತಾಲೂಕು ಘಟಕ ಗಳಿಗೆ ಕಂಪ್ಯೂಟರ್ ನೀಡಿ ಮಾಹಿತಿಯನ್ನು ಕಲೆ ಹಾಕಲಾಗುವುದು. ಕುಟುಂಬದ ಮುಖ್ಯಸ್ಥರು ಮಕ್ಕಳ ಹಾಗು ಸಮಾಜದ ಭವಿಷ್ಯದ ಹಿತದೃಷ್ಟಿ ಯಿಂದ ಮಾಹಿತಿ ಒದಗಿಸಬೇಕು ಎಂದರು. ತಾಲೂಕು ವೀರಶೈವ ಸಮಾಜದ ಅಧ್ಯಕ್ಷ ಗುರುಕುಮಾರ್ ಎಸ್.ಪಾಟೀಲ್ ಪ್ರಾಸ್ತಾವಿಕವಾಗಿ ಮಾತನಾಡಿ, ಈಗಾಗಲೇ 3000 ಸದಸ್ಯತ್ವ ಮಾಡಲಾ ಗಿದ್ದು, ಮುಂದಿನ ದಿನಗಳಲ್ಲಿ 10 ಸಾವಿರಕ್ಕೂ ಹೆಚ್ಚಿನ ಸದಸ್ಯತ್ವನ್ನು ಮಾಡುವ ಗುರಿ ಹೊಂದಲಾಗಿದೆ. ಈ ನಿಟ್ಟಿನಲ್ಲಿ ಜಿಲ್ಲಾ, ರಾಜ್ಯ ಘಟಕ ದೊಂದಿಗೆ ಸತತ ಸಂಪರ್ಕವನ್ನಿಟ್ಟುಕೊಂಡು ಆ ನಿಟ್ಟಿನಲ್ಲಿ ಎಲ್ಲರ ಸಹಕಾರ ಪಡೆದು ಮುನ್ನಡೆಯಲಾಗುವುದು ಎಂದರು. ರಾಜ್ಯ ಕಾರ್ಯದರ್ಶಿ, ಜಿಲ್ಲಾ ಉಸ್ತುವಾರಿ ಶಶಿಕಲಾ ಮಾತನಾಡಿ, ನಾವು ನಮ್ಮಲ್ಲಿರುವ ಸ್ವಾರ್ಥವನ್ನು ಬಿಟ್ಟು ಸಮಾಜದ ಅಭಿವೃದ್ಧಿಗೆ ಮುಂದಾ ಗ ಬೇಕು ಎಂದು ಹೇಳಿದರು. ಜಿಲ್ಲಾಧ್ಯಕ್ಷ ಶಿವರಾಜ ಸಜ್ಜನ್, ಕಾರ್ಯದರ್ಶಿ ಸಂತೋಷ ಬಳ್ಳೇಕೆರೆ, ಪ್ರಮುಖರಾದ ಕೆ.ವಿ.ಗೌಡ, ಸಿ.ಪಿ. ಈರೇಶಗೌಡ, ದಯಾನಂದಗೌಡ, ಡಾ.ಪ್ರಭು ಕೆ ಸಾಹುಕಾರ್, ಸಚಿನ್, ಪ್ರಕಾಶ್ ಅಗಸನಹಳ್ಳಿ, ಮಲ್ಲಿಕಾ ರ್ಜುನ ವೃತ್ತಿಕೊಪ್ಪ, ಹೆಚ್.ಕೆ ಜಯಶೀಲಗೌಡ, ಮಲ್ಲಿಕಾರ್ಜುನ ವೃತ್ತಿಕೊಪ್ಪ, ಡಿ. ಶಿವಯೋಗಿ, ಜಯಮಾಲ ಅಣ್ಣಾಜಿಗೌಡ, ಡಿ ಶಿವ ಯೋಗಿ ಮತ್ತಿತರರು ಇದ್ದರು.

# ಗೋಣಿಬೀಡಿನಲ್ಲಿ ನೂತನ ನಾಡಕಚೇರಿ ಉದ್ಘಾಟನೆ

ಮೂಡಿಗೆರೆ: ಗ್ಯಾರೆಂಟಿ ಯೋಜನೆಯಿಂದ ಮಹಿಳೆಯರು ಸ್ವಾವಲಂಭಿಗಳಾಗಿದ್ದಾರೆ. ಎಲ್ಲೆಡೆ ವ್ಯಾಪಾರ ವಹಿವಾಟು ಅಧಿಕಗೊಂಡಿದೆ. ಅಭಿವೃದ್ಧಿ ಕಿಂಚಿತ್ತೂ ಕುಂಠಿತವಾಗಿಲ್ಲವೆಂದು ಶಾಸಕಿ ನಯನಾ ಮೋಟಮ್ಮ ಹೇಳಿದರು. ಗೋಣಿಬೀಡಿನಲ್ಲಿ 18.84 ಲಕ್ಷ ರೂ. ವೆಚ್ಚದಲ್ಲಿ ನಿರ್ಮಿಸಿರುವ ನೂತನ ನಾಡ ಕಚೇರಿ ಉದ್ಘಾಟಿಸಿ ಮಾತನಾಡಿದ ಅವರು, ತಾನು ಶಾಸಕರಾದ ಬಳಿಕ 100 ಕೋಟಿಗೂ ಅಧಿಕ ಅನುದಾನ ಬಳಸಿ ಕ್ಷೇತ್ರದಲ್ಲಿ ರಸ್ತೆ, ಶಾಲೆ, ಅಂಗನವಾಡಿ ಸೇರಿದಂತೆ ಅನೇಕ ಕಾಮಗಾರಿಗಳು ನಡೆಸಲಾಗಿದೆ ಎಂದರು. ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರೊಂದಿಗೆ ಚರ್ಚಿಸಿ 50 ಕೋಟಿ ರೂ. ಅನುದಾನ ತಂದಿದ್ದೇನೆ. ಅದರಲ್ಲಿ 27 ಕೋಟಿ ರೂ. ವೆಚ್ಚದಲ್ಲಿ ಕಗ್ಗನಹಳ್ಳ ಸೇತುವೆ ನಿರ್ಮಾಣ ಕಾಮಗಾರಿ ನಡೆಯುತ್ತಿದೆ. ಉಳಿದಂತೆ ಕಳಸ, ಆಲ್ದೂರು, ಅಂಬಳೆ, ದೇವವೃಂದ ಗ್ರಾಮಗಳಲ್ಲಿ ಸೇತುವೆ ನಿರ್ಮಾಣ ಕಾಮಗಾರಿ ನಡೆಯುತ್ತಿದೆ ಎಂದರು. 10 ಕೋಟಿ ರೂ. ವೆಚ್ಚದಲ್ಲಿ ಗೋಣಿಬೀಡು ಹೋಬಳಿಯ ವಿವಿಧ ಗ್ರಾಮಗಳಲ್ಲಿ ಕಾಂಕ್ರೀಟ್ ರಸ್ತೆ ನಿರ್ಮಿಸಲಾಗಿದೆ. 25 ಕೋಟಿ ರೂ. ಅನುದಾನ ಬಳಸಿ ಕ್ಷೇತ್ರದಲ್ಲಿ 126 ರಸ್ತೆಗಳನ್ನು ಅಭಿವೃದ್ಧಿಪಡಿಸಲು 17 ಕೋಟಿ ಬಳಸಲಾಗಿದೆ. ಉಳಿದ ಅನುದಾನದಲ್ಲಿ ಲೋಕೋಪಯೋಗಿ ಇಲಾಖೆಗೆ ಸೇರಿದ ರಸ್ತೆಗಳ ಅಭಿವೃದ್ಧಿ ಕಾಮಗಾರಿ ನಡೆಯುತ್ತಿದೆ ಎಂದರು. ಗೋಣಿಬೀಡು ಗ್ರಾಪಂ ಅಧ್ಯಕ್ಷ ಜಿ.ಎಸ್.ದಿನೇಶ್, ಉಪಾಧ್ಯಕ್ಷೆ ಸುಜಾತ, ಸದಸ್ಯರಾದ ರಾಧಾ ಮಿತ್ರೇಶ್, ಜುಬೇದ, ಸುಮಿತ್ರಾ, ಆನಂದ, ಸುಧಾಮಣಿ, ಕೃಷ್ಣಪ್ಪ, ತಹಸೀಲ್ದಾರ್ ರಾಜಶೇಖರ್ ಮೂರ್ತಿ, ಉಪತಹಸಿಲ್ದಾರ್ ವೀಣಾಂಭ ಮತ್ತಿತರರಿದ್ದರು.

## ಬದುಕಿನ ಕ್ಷಣಗಳನ್ನು ಆನಂದಿಸಬೇಕು

**ಸೊರಬ:** ನಮಗೆ ಅದು ಸಿಕ್ಕಿಲ್ಲ, ನಮಗೆ ಇದು ಸಿಗಲಿಲ್ಲ ಎಂದು ಬದುಕಿನಲ್ಲಿ ಸಿಗದಿರುವುದರ ಕಡೆ ಚಿಂತಿಸುತ್ತಾ ಬದುಕಿನ ಆನಂದದ ಕ್ಷಣಗಳನ್ನು ಹಾಳು ಮಾಡಿಕೊಳ್ಳುವುದಕ್ಕಿಂತ ಬದುಕಿನಲ್ಲಿ ದೊರಕುವ ಆ ಸಂತೃಪ್ತ ಕ್ಷಣಗಳನ್ನು ಅನುಭವಿಸುವ ಪ್ರಯತ್ನ ಮಾಡಬೇಕು ಎಂದು ಸಮಾಧಾನ ಹಿರೇಮಠ ಜಡೆ ಬಂಕಸಾಣ ಹಾಗೂ ಸೊರಬ ಕಾನುಕೇರಿ ಮಠದ ಘನಬಸವ ಅಮರೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳು ಹೇಳಿದರು. ತಾಲ್ಲೂಕಿನ ಕಮನವಳ್ಳಿ ಗ್ರಾಮದಲ್ಲಿ ಹಲವಾರು ಗ್ರಾಮಗಳ ಆರಾಧ್ಯ ದೇವ ರಾದ ಬ್ರಹ್ಮ ದೇವರ ಪೂಜಾ ಕಾರ್ಯಕ್ರಮ ಹಾಗೂ ಧರ್ಮ ಸಭೆಯ ಸಾನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು. ನಾವು ಸಂಪತ್ತು ಸಂಗ್ರಹಿಸುವಲ್ಲಿ ಬಹಳ ಆಸಕ್ತಿ ತೋರುತ್ತೇವೆ. ಆಸ್ತಿ ಗಳಿಸು ವಲ್ಲಿ ಗಮನ ಹರಿಸುತ್ತೇವೆ. ಹಲವಾರು ಪದಕ ಪಾರಿತೋಷಕ ಪಡೆಯಲು ಶ್ರಮಿಸುತ್ತೇವೆ. ಆದರೆ ಈ ಎಲ್ಲವುಗಳ ನಡುವೆ ಬದುಕಿನ ಆಯಾ ಸಂದರ್ಭ ಗಳಲ್ಲಿ ದೊರಕುವ ಆನಂದದ ಕ್ಷಣಗಳನ್ನು ಅನುಭವಿಸುವುದನ್ನು ಮರೆಯು ತ್ತೇವೆ ಎಂದು ಹೇಳಿದರು. ಸಾನಿಧ್ಯ ವಹಿಸಿ ಆಶೀರ್ವಚನ ನೀಡಿದ ದುಗ್ಲಿ ಹಾಗೂ ಕಡೆ ನಂದಿಹಳ್ಳಿ ರೇವಣಸಿದ್ಧ ಶಿವಾಚಾರ್ಯ ಸ್ವಾಮಿಗಳು, ಮನುಷ್ಯ ಭಕ್ತಿಯನ್ನು ಮಾಡ ಬೇಕು. ಭಕ್ತಿ ಭಗವಂತನನ್ನು ಒಲಿಸಿಕೊಳ್ಳಲು ಮೂಲ ಸಾಧನ. ಇಲ್ಲಿಯ ಭಕ್ತರು ಭಕ್ತಿಗೆ ಕಾರಣರಾಗಿದ್ದಾರೆ ಎಂದರು. ಬೀದರ್ ಜಿಲ್ಲೆ ಭಾತಾಂಬ್ರದ ಶೂನ್ಯ ಸಿಂಹಾಸನ ಪೀಠದ ಉತ್ತರಾಧಿಕಾರಿ ಗಳಾದ ಡಾ ಗುರುಬಸವ ದೇವರು ಮಾತನಾಡಿದರು. ಪ್ರಾತಃ ಕಾಲದಲ್ಲಿ ಸ್ವಾಮಿಯ ಮೂರ್ತಿಗೆ ಅಭಿಷೇಕ ಅಷ್ಟೋತ್ತರ ಪೂಜಾದಿ ಸೇವೆ ನಡೆದವು. ನಂತರ ಮಹಾಪ್ರಸಾದ ವಿತರಿಸಲಾಯಿತು.

# ಪೊಲೀಸರಿಗೆ ಶಿಸ್ತಿನ ತರಬೇತಿ ಮುಖ್ಯ : ಅಲೋಕ್ ಕುಮಾರ್

**ಕಡೂರು:** ಪೊಲೀಸರಾಗಲು ಶಿಸ್ತು, ಸಮಯ ಪ್ರಜ್ಞೆ ಬಹಳ ಮುಖ್ಯ ಎಂದು ಹೆಚ್ಚುವರಿ ಪೊಲೀಸ್ ಮಹಾನಿರ್ದೇಶಕರು ತರಬೇತಿ ಬೆಂಗಳೂರು ಅಲೋಕ್ ಕುಮಾರ್ ಐಪಿಎಸ್ ತಿಳಿಸಿದರು.

ಕುರುಬರಹಳ್ಳಿ ಗ್ರಾಮದ ಪೊಲೀಸ್ ತರಬೇತಿ ಶಾಲೆಯ ಐದನೇ ತಂಡದ ಸಶಸ್ತ್ರ ಪೊಲೀಸ್ ಕಾನ್ಸ್ಟೇಬಲ್ ಅವರಿಗೆ ಬುನಾದಿ ತರಬೇತಿಯ ಉದ್ಘಾಟನಾ ಸಮಾರಂಭದಲ್ಲಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಕಳೆದ ಡಿಸೆಂಬರ್ ತಿಂಗಳಿನಿಂದ 498 ಅಭ್ಯರ್ಥಿಗಳಿಗೆ ಪೊಲೀಸ್ ಕಾನ್ಸ್ಟೇಬಲ್ ತರಬೇತಿ ಪ್ರಾರಂಭವಾಗಿದೆ, ಎರಡು ತಿಂಗಳಿನಿಂದ ಕಲಿತಿರುವ ಬಗ್ಗೆ ಪರಿಶೀಲನೆ ಮಾಡಲಾಗಿದೆ, ಇಲ್ಲಿ ಕಲಿತ ತಾವುಗಳು ಮುಂದೆ ಉತ್ತಮ ಕೆಲಸ ಮಾಡಬೇಕು, ತರಬೇತಿಯಲ್ಲಿ ಸುರಿಸಿದ ಬೆವರು ವೃತ್ತಿಜೀವನದಲ್ಲಿ ಉಪಯೋಗಕ್ಕೆ ಬರಲಿದೆ ಎಂದರು.

ಈ ಸಾಲಿನ ತರಬೇತಿಯಲ್ಲಿ ಹಲವಾರು ಹೊಸ ಸಿಲಬಸ್‌ಗಳನ್ನು ಸೇರಿಸಲಾಗಿದೆ. ತರಬೇತಿಯಲ್ಲಿ ಕಲಿಯುವ ಪ್ರತಿಯೊಂದು ವಿಷಯವು ತಮಗೆ ಜ್ಞಾಪಕದಲ್ಲಿ ಉಳಿಸಿಕೊಳ್ಳುವ ಪ್ರಯತ್ನ ಮಾಡಿ, ಕಲಿಯುವ ಹುಮ್ಮಸ್ಸು ಪ್ರತಿಯೊಬ್ಬರಲ್ಲಿಯೂ ಇರಬೇಕು,



ತರಬೇತುದಾರರು ಅರ್ಥವಾಗದ್ದನ್ನು ಮನವರಿಕೆ ಮಾಡಿಕೊಡಬೇಕು, ಯೋಗದ ತರಬೇತಿಯು ಮುಖ್ಯವಾಗಲಿದೆ, ಸಮಯವನ್ನು ನಷ್ಟ ಮಾಡಿಕೊಳ್ಳಬಾರದು, ಬೇರೆ ರಾಜ್ಯಗಳಲ್ಲಿ ತರಬೇತಿದಾರರಿಗೆ ವೇತನ ಸಿಗುವುದಿಲ್ಲ, ರಾಜ್ಯ ಸರ್ಕಾರ ವೇತನದ ಜೊತೆಗೆ ಎಲ್ಲಾ ರೀತಿಯ ಸೌಲಭ್ಯಗಳನ್ನು ನೀಡುತ್ತಿದೆ, ಇದರ ಸದುಪಯೋಗ ಪ್ರತಿಯೊಬ್ಬರಿಗೂ ಆಗಬೇಕಿದೆ ಎಂದರು.

ಮುಂದಿನ ದಿನಗಳಲ್ಲಿ ಸಮಾಜಕ್ಕೆ ನಿಮ್ಮಗಳ ಸೇವೆ ಮುಖ್ಯವಾಗಲಿದೆ. ತರಬೇತುದಾರರು ಸಂವಿಧಾನದ ಬಗ್ಗೆ ತಿಳಿದುಕೊಳ್ಳಬೇಕು, ಪೊಲೀಸ್ ತರಬೇತಿ ಪಡೆಯುವವರಲ್ಲಿ ಧೈರ್ಯ ಬಹಳ ಮುಖ್ಯವಾಗಲಿದೆ, ಪ್ರತಿಯೊಬ್ಬರೂ ಶಿಸ್ತನ್ನು ಬದುಕಿನಲ್ಲಿ ಅಳವಡಿಸಿಕೊಳ್ಳಬೇಕು, ತರಬೇತಿ ದಾರರು **(2ನೇ ಪುಟಕ್ಕೆ)**

ರಜೆ ಬೇಕಾದಲ್ಲಿ ಹಣ ನೀಡಿ ಪಡೆದುಕೊಂಡರೆ ಸೂಕ್ತ ಕ್ರಮ ಕೈಗೊಳ್ಳಲಾಗುವುದು, ತರಬೇತಿದಾರರಿಗೆ ಬೆದರಿಸುವ ಕಾರ್ಯವೂ ಆಗಬಾರದು, ತರಬೇತಿಯಲ್ಲಿಯೇ ಹಣದ ಆಮಿಷಗಳು ಬರಬಾರದು, ಇಲ್ಲಿ ಶಿಸ್ತು ಮುಖ್ಯವಾಗಲಿದೆ ಎಂದರು.

ಜಿಲ್ಲಾ ಪೊಲೀಸ್ ಅಧೀಕ್ಷಕರಾದ ವಿಕ್ರಂ ಅಮಟೆ ಮಾತನಾಡಿ, ಕಡೂರಿನ ತರಬೇತಿ ಶಾಲೆಯ ವಾತಾವರಣ ಕಲಿಕೆಗೆ ಪ್ರಶಸ್ತವಾಗಿದೆ, ರಾಜ್ಯದ ಯಾವುದೇ ತರಬೇತಿ ಶಾಲೆಗಳಲ್ಲಿ ಈ ರೀತಿ ವ್ಯವಸ್ಥೆ ಇಲ್ಲ, ಕಲಿಯುವಾಗ ಅನುಭವಿಸುವ ಕಷ್ಟ ಕರ್ತವ್ಯದ ದಿನಗಳಲ್ಲಿ ಅರ್ಥವಾಗುತ್ತದೆ, ಜಿಲ್ಲಾ ಪೊಲೀಸ್ ಯಾವಾಗಲೂ ನಿಮಗೆ ಸಹಕಾರ ನೀಡಲಿದೆ, ತರಬೇತಿ ಪಡೆಯುವಾಗ ಉದ್ವಿಗ್ನ ಪರಿಸ್ಥಿತಿಗಳಲ್ಲಿ ಯಾವ ರೀತಿಯಲ್ಲಿ ಬಂದೋಬಸ್ತ್ ನೀಡಲಾಗುತ್ತದೆ ಎಂಬುದನ್ನು ಮುಖ್ಯವಾಗಿ ತಿಳಿದುಕೊಳ್ಳಬೇಕು. ಪೊಲೀಸ್ ಠಾಣೆಗಳ ಕರ್ತವ್ಯದ ಬಗ್ಗೆಯೂ ತರಬೇತಿದಾರರು ತಿಳಿದುಕೊಳ್ಳಬೇಕು. ಡಿ.ಆರ್ ವ್ಯಾನ್‌ಗಳ ಕಾರ್ಯದ ಬಗ್ಗೆ ತಿಳಿದುಕೊಳ್ಳಬೇಕು, ಮುಂದಿನ ದಿನಗಳಲ್ಲಿ ತಾವುಗಳು ಪೊಲೀಸ್ ಠಾಣೆಗಳಲ್ಲಿ ಕೆಲಸ ಮಾಡಲಿದ್ದೀರಿ ಇಲ್ಲಿ ಪರಿಣಾಮಕಾರಿ ತರಬೇತಿ ಸಿಗಲಿದೆ. ಮುಂದೆ ಸಮಾಜಕ್ಕೆ ಸೇವೆ ಸಲ್ಲಿಸಲು ಸನ್ನದ್ಧರಾಗಿ ಎಂದರು.

ಈ ಸಂದರ್ಭದಲ್ಲಿ ಕಡೂರು ಪೊಲೀಸ್ ತರಬೇತಿ ಶಾಲೆಯ ಪ್ರಾಂಶುಪಾಲರಾದ ಪಾಪಣ್ಣ.ಪಿ, ತರೀಕೆರೆ ಡಿವೈಎಸ್ಪಿ ಹಾಲುಮೂರ್ತಿ, ಪೊಲೀಸ್ ತರಬೇತಿ ಶಾಲೆಯ ಡಿವೈಎಸ್ಪಿ ಮಲ್ಲಿಕಾರ್ಜುನ್. ಎಸ್ ಮರಳು ಹಾಗೂ ತರಬೇತಿ ಶಾಲೆಯ ಅಧಿಕಾರಿಗಳು, ಸಿಬ್ಬಂದಿಗಳು ಹಾಗೂ ತರಬೇತಿದಾರರು ಉಪಸ್ಥಿತರಿದ್ದರು.

## ಫೆ. 14, 15ರಂದು ಶ್ರೀ ಶಾರದಾಂಬ ದೇವಸ್ಥಾನದ ವಾರ್ಷಿಕೋತ್ಸವ

**ದಾವಣಗೆರೆ:** ಇಲ್ಲಿನ ನಿಜಲಿಂಗಪ್ಪ ಬಡಾವಣೆಯಲ್ಲಿರುವ ಶ್ರೀ ಗಣಪತಿ, ಶ್ರೀ ಶಾರದಾಂಬ, ಶ್ರೀ ಚಂದ್ರಮೌಳೇಶ್ವರ ಮತ್ತು ಶ್ರೀ ಶಂಕರಚಾರ್ಯರ ದೇವಸ್ಥಾನಗಳ 16ನೇ ವಾರ್ಷಿಕೋತ್ಸವ ಸಮಾರಂಭ ಅಂಗವಾಗಿ ಫೆಬ್ರವರಿ 14 ಮತ್ತು 15ರಂದು ಶ್ರೀ ಶಂಕರ ಸಮುದಾಯ ಭವನದಲ್ಲಿ ವಿಶೇಷ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ.

ಫೆಬ್ರವರಿ 14ರಂದು ಬೆಳಿಗ್ಗೆ 7.30 ರಿಂದ ಮಂಗಳವಾದ್ಯ ಕಲಶ ಸ್ಥಾಪನೆ, ಶ್ರೀ ಗಣಪತಿ ಮತ್ತು ಶ್ರೀ ಚಂದ್ರಮೌಳೇಶ್ವರರಿಗೆ ಅಭಿಷೇಕ, ಶ್ರೀ ಶಾರದಾಂಬ ಮೂರ್ತಿಗೆ ಸಹಸ್ರನಾಮ ಅರ್ಚನೆ, ಶ್ರೀಚಕ್ರ ಪೂಜೆ, ಸಪ್ತಶತಿ ಪಾರಾಯಣ, ಗಣ ಹೋಮ ಸೇರಿದಂತೆ ಪೂಜಾ ಕಾರ್ಯಗಳು ನೆರವೇರಲಿದ್ದು, ಮಧ್ಯಾಹ್ನ 12 ಗಂಟೆಗೆ ಪೂರ್ಣಾಹುತಿ ಮಂಗಳಾರತಿ ನಡೆಯಲಿದೆ.\

ಫೆ.14 ಮತ್ತು 15 ರಂದು ಸಂಜೆ 6ಕ್ಕೆ ಅದ್ವೈತ ಪ್ರತಿಷ್ಠಾನದ ಅಧ್ಯಕ್ಷ, ಆಧ್ಯಾತ್ಮಿಕ ಚಿಂತಕ ಡಾ. ಪಾವಗಡ ಪ್ರಕಾಶ್ ರಾವ್ ಅವರಿಂದ ಶ್ರೀ ಶಂಕರ ಸಮುದಾಯ ಭವನದಲ್ಲಿ ಉಪನ್ಯಾಸ ಕಾರ್ಯಕ್ರಮ ಜರುಗಲಿದೆ. ಸಂಜೆ 7:30ಕ್ಕೆ ಶ್ರೀ ಶಾರದಾಂಬ ದೇವಿಗೆ ಪಾಲಕಿ ಉತ್ಸವ, ಅಷ್ಟಾವಧಾನ ಮಂಗಳಾರತಿ ಮತ್ತು ಪ್ರಸಾದ ವಿನಿಯೋಗವಿರುತ್ತದೆ.


ಕರ್ನಾಟಕ ಸರ್ಕಾರ

**ಪಂಚಾಯತ್‌ರಾಜ್ ಇಂಜಿನಿಯರಿಂಗ್ ವಿಭಾಗ, ಕಾರ್ಯಪಾಲಕ ಇಂಜಿನಿಯರ್‌ರವರ ಕಛೇರಿ, ದಾವಣಗೆರೆ.**

ಸಂ:ಕಾಪಾಇಂ/ಪಂರಾಇಂ/ವಿ/ದಾ/ಸ.ಇಂ2/ಕೋಟೇಷನ್/2024–25/2054
ದಿನಾಂಕ:–13.02.2025

**ಅಲ್ಪಾವಧಿ ಕೋಟೇಷನ್ ಟೆಂಡರ್ ಪ್ರಕಟಣೆ**

**("ಕೆಪಿಪಿಪಿ–ಪ್ರೊಕ್ಯೂರ್‌ಮೆಂಟ್" ಮೂಲಕ)**

2024–25 ನೇ ಸಾಲಿನ ಜಿಲ್ಲಾ ಪಂಚಾಯತ್ ರಾಜ್ಯ ಹಣಕಾಸು ಆಯೋಗದ ಅನಿರ್ಬಂಧಿತ ಲೆಕ್ಕ ಶೀರ್ಷಿಕೆ ಅಡಿಯಲ್ಲಿ ಅನುಮೋದನೆಯಾಗಿರುವ ಜಟ್ಟಿಂಗ್ ಮತ್ತು ಸೈಕಿಂಗ್ ಮಿಷನ್, ದಾವಣಗೆರೆ ಜಿಲ್ಲೆಯ 27 ಗ್ರಂಥಾಲಯಗಳಿಗೆ, ಕಂಪ್ಯೂಟರ್, ಯು.ಪಿ.ಎಸ್. ಹಾಗೂ ದಾವಣಗೆರೆ ಜಿಲ್ಲೆಯ 27 ಗ್ರಂಥಾಲಯಗಳಿಗೆ, ಕಂಪ್ಯೂಟರ್, ಯು.ಪಿ.ಎಸ್. ಹಾಗೂ ಪಿಠೋಪಕರಣಗಳನ್ನು ಪೂರೈಕೆ ಮಾಡಲು ದರಗಳನ್ನು ನಮೂದಿಸಲು ಕರ್ನಾಟಕ ರಾಜ್ಯಪಾಲರ ಪರವಾಗಿ ಆಸಕ್ತ ಸಂಸ್ಥೆಗಳಿಂದ ದ್ವಿ ಲಕೋಟಿ ಪದ್ಧತಿಯಲ್ಲಿ ಕೆ.ಪಿ.ಪಿ.ಪಿ ಪೋರ್ಟಾಲ್‌ನಲ್ಲಿ ನೋಂದಾಯಿಸಲ್ಪಟ್ಟ ಸಂಸ್ಥೆಗಳಿಂದ ಇಲಾಖಾ ನಿಯಮಾವಳಿಯ ಮೇರೆಗೆ ಕೆ.ಪಿ.ಪಿ.ಪಿ ಪೋರ್ಟಾಲ್‌ನಲ್ಲಿ ಮುಖಾಂತರ ಕೋಟೇಷನ್ ದರಗಳನ್ನು ಆಹ್ವಾನಿಸಲಾಗಿದೆ. ಟೆಂಡರ್ ಫಾರಂಗಳನ್ನು ಭರ್ತಿ ಮಾಡಿ ಸಲ್ಲಿಸಲು ಕೊನೆಯ ದಿನಾಂಕ:20–2–2025 ಸಂಜೆ 4.00 ಗಂಟೆಯವರೆಗೆಹೆಚ್ಚಿನ ವಿವರಗಳಿಗೆ ಈ ಕಛೇರಿಯ ದೂರವಾಣಿ ಸಂಖ್ಯೆ:08192–250156 ಅಥವಾ www.KPPP.karnataka.gov.in ವೆಬ್‌ಸೈಟ್‌ನಲ್ಲಿ ಪಡೆಯಬಹುದಾಗಿರುತ್ತದೆ.

ವಾಸಾಇ/ಡಿಜಿ/740/
ಕೆಎಸ್‌ಎಂಸಿಎ/2024–25

ಸಹಿ/– ಕಾರ್ಯಪಾಲಕ ಇಂಜಿನಿಯರ್,
ಪಂ.ರಾ.ಇಂ.ವಿಭಾಗ, ದಾವಣಗೆರೆ.


### ಫೆ. 15 ರಂದು ವಸತಿ ಶಾಲೆಗಳ 6 ನೇ ತರಗತಿಗೆ ಪ್ರವೇಶ ಪರೀಕ್ಷೆ

# ಪರೀಕ್ಷಾ ಪಾವಿತ್ರ್ಯತೆ ಕಾಪಾಡಿ– ಬಿ.ಟಿ. ಕುಮಾರಸ್ವಾಮಿ

**ಚಿತ್ರದುರ್ಗ:** ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆ ಮತ್ತು ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಅಧೀನದಲ್ಲಿರುವ ವಿವಿಧ ವಸತಿ ಶಾಲೆಗಳಿಗೆ 06 ನೇ ತರಗತಿ ಪ್ರವೇಶಕ್ಕೆ ದಾಖಲಾತಿ ಪಡೆಯಲು ಪ್ರವೇಶ ಪರೀಕ್ಷೆ ಫೆ. 15 ರಂದು ಜಿಲ್ಲೆಯಾದ್ಯಂತ ನಡೆಯಲಿದ್ದು, ಅಧಿಕಾರಿಗಳು ಪರೀಕ್ಷಾ ಪಾವಿತ್ರ್ಯತೆ ಕಾಪಾಡುವ ನಿಟ್ಟಿನಲ್ಲಿ ಅಗತ್ಯ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ. ಕುಮಾರಸ್ವಾಮಿ ಅವರು ಸೂಚನೆ ನೀಡಿ–ದರು.

ವಸತಿ ಶಾಲೆಗಳಲ್ಲಿ ಬರುವ ಶೈಕ್ಷಣಿಕ ವರ್ಷಕ್ಕೆ 06 ನೇ ತರಗತಿ ದಾಖಲಿಗೆ ಪ್ರವೇಶ ಪರೀಕ್ಷೆ ನಡೆಸುವ ಸಂಬಂಧ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗುರುವಾರ ಏರ್ಪಡಿಸಿದ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆ ಮತ್ತು ಪರಿಶಿಷ್ಟವರ್ಗಗಳ ಕಲ್ಯಾಣ ಇಲಾಖೆ ಅಧೀನದಲ್ಲಿರುವ ಮೊರಾರ್ಜಿ ದೇಸಾಯಿ, ಕಿತ್ತೂರು ರಾಣಿ ಚೆನ್ನಮ್ಮ, ಏಕಲವ್ಯ ಮಾದರಿ, ಅಟಲ್ ಬಿಹಾರಿ ವಾಜಪೇಯಿ, ಶ್ರೀಮತಿ ಇಂದಿರಾ ಗಾಂಧಿ, ಡಾ. ಬಿ.ಆರ್. ಅಂಬೇಡ್ಕರ್, ಮಾಸ್ತಿ ವೆಂಕಟೇಶ ಅಯ್ಯಂಗಾರ್, ಸಂಗೊಳ್ಳಿ ರಾಯಣ್ಣ, ಕವಿ ರನ್ನ, ಗಾಂಧಿ ತತ್ವ, ಶ್ರೀ ನಾರಾಯಣ ಗುರು ಮುಂತಾದ ವಸತಿ



ಶಾಲೆಗಳಿಗೆ 06 ನೇ ತರಗತಿ ಪ್ರವೇಶಕ್ಕೆ ದಾಖಲಾತಿ ಪಡೆಯಲು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ವತಿಯಿಂದ ಫೆ. 15 ರಂದು ಮಧ್ಯಾಹ್ನ 02.30 ರಿಂದ ಸಂಜೆ 04.30 ರವರೆಗೆ ಜಿಲ್ಲೆಯ ಒಟ್ಟು 20 ಪರೀಕ್ಷಾ ಕೇಂದ್ರಗಳಲ್ಲಿ ಪ್ರವೇಶ ಪರೀಕ್ಷೆ ನಡೆಯಲಿದ್ದು, ಒಟ್ಟು 7317 ವಿದ್ಯಾರ್ಥಿಗಳು ಪರೀಕ್ಷೆ ಬರೆಯಲು ನೊಂದಾಯಿಸಿಕೊಂಡಿದ್ದಾರೆ. ಪ್ರವೇಶ ಪರೀಕ್ಷೆಯನ್ನು ವ್ಯವಸ್ಥಿತ ರೀತಿಯಲ್ಲಿ ಯಾವುದೇ ಗೊಂದಲಗಳಿಗೆ ಅವಕಾಶ ಮಾಡಿಕೊಡದಂತೆ, ಪರೀಕ್ಷಾ ಪಾವಿತ್ರ್ಯತೆಯನ್ನು ಕಾಪಾಡಿಕೊಂಡು ನಡೆಸಬೇಕು. ಪರೀಕ್ಷಾ ಕೇಂದ್ರಗಳಿಗೆ ನಿಗದಿತ ವೇಳೆಯೊಳಗೆ ಆಯಾ ಮಾರ್ಗಾಧಿಕಾರಿಗಳು ಪ್ರಶ್ನೆಪತ್ರಿಕೆಯನ್ನು ತಲುಪಿಸಬೇಕು. ಪರೀಕ್ಷೆ ಬಳಿಕ ಎಲ್ಲ ಸುರಕ್ಷತಾ ಕ್ರಮಗಳನ್ನು ಕೈಗೊಂಡು, ನಿಗದಿತ ಸ್ಥಳಕ್ಕೆ ಉತ್ತರ ಪತ್ರಿಕೆಗಳನ್ನು ಮೌಲ್ಯಮಾಪನಕ್ಕಾಗಿ ತಲುಪಿಸುವ ಕಾರ್ಯವನ್ನು ಕೈಗೊಳ್ಳಬೇಕು. ಈಗಾಗಲೆ ಪರೀಕ್ಷಾ ದಿನದಂದು ಪರೀಕ್ಷಾ ಕೇಂದ್ರಗಳ ಸುತ್ತ 200 ಮೀ. ವ್ಯಾಪ್ತಿಯಲ್ಲಿ ನಿಷೇಧಾಜ್ಞೆ ಜಾರಿಗೊಳಿಸಿದ್ದು, ಪೊಲೀಸ್ ಇಲಾಖೆಯವರು ಪರೀಕ್ಷಾ ದಿನದಂದು ಕೇಂದ್ರಗಳಿಗೆ ಸೂಕ್ತ ಪೊಲೀಸ್ ಬಂದೋಬಸ್ತ್ ಕೈಗೊಳ್ಳಬೇಕು. ಪರೀಕ್ಷಾ ಕೇಂದ್ರದೊಳಗೆ ಯಾವುದೇ ಮೊಬೈಲ್, ಎಲೆಕ್ಟ್ರಾನಿಕ್ ಉಪಕರಣಗಳನ್ನು ಬಳಸದಂತೆ ಸೂಕ್ತ ಮುಂಜಾಗ್ರತಾ ಕ್ರಮ ಕೈಗೊಳ್ಳಬೇಕು, ಹಾಗೂ ವಿದ್ಯಾರ್ಥಿಗಳು ಪರೀಕ್ಷಾ ಕೇಂದ್ರ ಪ್ರವೇಶ ಸಂದರ್ಭದಲ್ಲಿ ಸೂಕ್ತ ರೀತಿಯಲ್ಲಿ ತಪಾಸಣೆಯನ್ನು ಕೈಗೊಳ್ಳಬೇಕು ಎಂದು ಸೂಚನೆ ನೀಡಿದರು.

ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ (ಪದವಿಪೂರ್ವ) ಉಪನಿರ್ದೇಶಕ ಪುಟ್ಟಸ್ವಾಮಿ ಅವರು ಪ್ರವೇಶ ಪರೀಕ್ಷೆ ಕುರಿತು ಮಾಹಿತಿ ನೀಡಿ, ಪ್ರವೇಶ ಪರೀಕ್ಷೆಗೆ ಜಿಲ್ಲೆಯಲ್ಲಿ ಒಟ್ಟು 20 ಪರೀಕ್ಷಾ ಕೇಂದ್ರಗಳನ್ನು ಸ್ಥಾಪಿಸಿದ್ದು, 7317 ವಿದ್ಯಾರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ. ಚಳ್ಳಕೆರೆ ತಾಲ್ಲೂಕಿನಲ್ಲಿ 05 ಪರೀಕ್ಷಾ ಕೇಂದ್ರಗಳಲ್ಲಿ 1919 ವಿದ್ಯಾರ್ಥಿಗಳು. ಚಿತ್ರದುರ್ಗ ತಾಲ್ಲೂಕಿನ 02 ಕೇಂದ್ರಗಳಲ್ಲಿ 915 ವಿದ್ಯಾರ್ಥಿಗಳು, ಹಿರಿಯೂರಿನ 03 ಕೇಂದ್ರಗಳಲ್ಲಿ 1341 ವಿದ್ಯಾರ್ಥಿಗಳು, ಹೊಳಲ್ಕೆರೆಯ 02 ಕೇಂದ್ರಗಳಲ್ಲಿ 591 ವಿದ್ಯಾರ್ಥಿಗಳು, ಹೊಸದುರ್ಗದ 04 ಕೇಂದ್ರಗಳಲ್ಲಿ 1297 ವಿದ್ಯಾರ್ಥಿಗಳು ಹಾಗೂ ಮೊಳಕಾಲ್ಮೂರು ತಾಲ್ಲೂಕಿನ 04 ಪರೀಕ್ಷಾ ಕೇಂದ್ರಗಳಲ್ಲಿ 1254 ವಿದ್ಯಾರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ. ಪರೀಕ್ಷಾ ಕೇಂದ್ರಗಳಿಗೆ ಪ್ರಶ್ನೆಪತ್ರಿಕೆ ತಲುಪಿಸಲು ಹಾಗೂ ಉತ್ತರ ಪತ್ರಿಕೆ ಸ್ವೀಕರಿಸಲು ಈಗಾಗಲೆ 21 ಮಾರ್ಗಾಧಿಕಾರಿಗಳನ್ನು ನೇಮಿಸಲಾಗಿದೆ. ಅಭ್ಯರ್ಥಿಗಳು ಪರೀಕ್ಷಾ ಕೊಠಡಿಯ ಒಳಗೆ ಕ್ಯಾಲ್ಕುಲೇಟರ್, ಮೊಬೈಲ್ ಫೋನ್, ಬ್ಲೂಟೂತ್ ಡಿವೈಸ್, ವೈರ್‌ಲೆಸ್ ಸೆಟ್ ಇತ್ಯಾದಿ ಎಲೆಕ್ಟ್ರಾನಿಕ್ ಉಪಕರಣಗಳನ್ನು ತರುವುದನ್ನು ನಿಷೇಧಿಸಲಾಗಿದೆ ಎಂದರು.

ಸಭೆಯಲ್ಲಿ ಜಿಲ್ಲೆಯ ಎಲ್ಲ ಕ್ಷೇತ್ರ ಶಿಕ್ಷಣಾಧಿಕಾರಿಗಳು, ತಹಸಿಲ್ದಾರರು, ಪರೀಕ್ಷಾ ಕೇಂದ್ರಗಳ ವ್ಯಾಪ್ತಿಯ ಉಪನ್ಯಾಸಕರು, ಪ್ರಾಂಶುಪಾಲರುಗಳು ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

# ತಾಲ್ಲೂಕುಗಳಲ್ಲಿ ಕೆಎಫ್‌ಡಿ ಪ್ರಕರಣ ಹೆಚ್ಚದಂತೆ ಎಚ್ಚರಿಕೆ ವಹಿಸಿ

**ಶಿವಮೊಗ್ಗ :** ತಾಲ್ಲೂಕುಗಳಲ್ಲಿ ಕೆಎಫ್‌ಡಿ ಪ್ರಕರಣಗಳು ಹೆಚ್ಚದಂತೆ ಎಚ್ಚರಿಕೆ ವಹಿಸಬೇಕು. ಕೆಎಫ್‌ಡಿ ಕುರಿತು ಜನರಲ್ಲಿರುವ ಭಯ ಮುಕ್ತಗೊಳಿಸಿ, ಮುನ್ನೆಚ್ಚರಿಕೆ ಕ್ರಮಗಳ ಕುರಿತು ಜಾಗೃತಿ ಮೂಡಿಸಬೇಕೆಂದು ತಹಶೀಲ್ದಾರ್ ವಿ.ಎಸ್. ರಾಜೀವ್ ಸಲಹೆ ನೀಡಿದರು.

ಬುಧವಾರ ಶಿವಮೊಗ್ಗ ತಹಶೀಲ್ದಾರ್ ಕಚೇರಿಯ ಸಭಾಂಗಣದಲ್ಲಿ ಏರ್ಪಡಿಸಿದ್ದ ತಾಲ್ಲೂಕು ಮಟ್ಟದ ಟಾಸ್ಕ್ ಫೋರ್ಸ್ ಹಾಗೂ ವಿವಿಧ ಇಲಾಖೆಗಳ ಸಮನ್ವಯ ಸಮಿತಿಯ ತ್ರೈಮಾಸಿಕ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯ ತೀರ್ಥಹಳ್ಳಿ, ಹೊಸನಗರ, ಸಾಗರದ ಭಾಗದಲ್ಲಿ ಪ್ರಕರಣಗಳು ಕಂಡು ಬರುತ್ತಿದ್ದು, ಇದರಿಂದ ಜನರು ಭಯಭೀತರಾಗಿದ್ದಾರೆ, ಇದನ್ನು ಗಂಭೀರವಾಗಿ ಪರಿಗಣಿಸಿ ಜನರನ್ನು ಭಯಮುಕ್ತಗೊಳಿಸಬೇಕು. ಜೊತೆಗೆ ರೋಗ ಬಾರದಂತೆ ವಹಿಸಬೇಕಾದ ಮುನ್ನೆಚ್ಚರಿಕೆ ಕ್ರಮಗಳ ಬಗ್ಗೆ ತಿಳಿಸಬೇಕು. ಹೆಚ್ಚು ಜನ ಸಂದಣಿ ಹೊಂದಿರುವುದು ಸ್ಥಳದಲ್ಲಿ ಕರಪತ್ರಗಳು, ಪ್ರಕಟಣೆಗಳು, ಭಿತ್ತಿಚಿತ್ರಗಳ ಮೂಲಕ ಕೆಎಫ್‌ಡಿ ಕಾಯಿಲೆ ಬಗ್ಗೆ ಅರಿವು ಮೂಡಿಸಬೇಕು.

ಮಂಗನ ಸಾವಿನಿಂದ ಈ ಕಾಯಿಲೆ ಹರಡಲಿದ್ದು, ತಾಲ್ಲೂಕಿನ ಯಾವುದೇ ಭಾಗದಲ್ಲಿ ಮಂಗನ ಸಾವಾದರೆ ಅರಣ್ಯ ಇಲಾಖೆಗೆ ಮಾಹಿತಿ ನೀಡಬೇಕು. ಅರಣ್ಯ ಇಲಾಖೆ ನಿಯಮಾನುಸಾರ ಕ್ರಮ ಕೈಗೊಂಡು ವಿಲೇವಾರಿ ಮಾಡುತ್ತದೆ. ಈ ಕಾಯಿಲೆ ಹೆಚ್ಚಾಗಿ ಕಾಡಿನಲ್ಲಿ ಕಂಡುಬರುವುದರಿಂದ ಕಾಡಿನ ಕಡೆ ಹೋಗುವುದನ್ನು ಜನರು ಕಡಿಮೆ ಮಾಡಬೇಕು.

ಡೆಂಗ್ಯೂ ಪ್ರಕರಣ ಮಳೆಗಾಲದಲ್ಲಿ ಹೆಚ್ಚಾಗುವ ಸಾಧ್ಯತೆ ಇದ್ದು, ಆ ನಿಟ್ಟಿನಲ್ಲಿ ಮಹಾನಗರ ಪಾಲಿಕೆ ಹಾಗೂ ಪಂಚಾಯಿತಿಗಳು ಮುನ್ನೆಚರಿಕೆ ಕ್ರಮ ವಹಿಸಬೇಕು. 2024 ರಲ್ಲಿ ತಾಲ್ಲೂಕಿನಲ್ಲಿ ಒಟ್ಟು 268 ಪ್ರಕರಣಗಳು ಕಂಡು ಬಂದಿದ್ದು, ಅದರಲ್ಲಿ ಗ್ರಾಮೀಣ ಭಾಗದಲ್ಲಿ 77, ನಗರದ ಭಾಗದಲ್ಲಿ 191 ಪ್ರಕರಣಗಳು ದಾಖಲಾಗಿದೆ. ಈ ವರ್ಷ ಜನವರಿಯಲ್ಲಿ ಗ್ರಾಮೀಣ ಭಾಗದಲ್ಲಿ 6 ಪ್ರಕರಣಗಳು ಕಂಡು ಬಂದಿದೆ. ಇದರ ಬಗ್ಗೆ ನಾವೆಲ್ಲರೂ ಈಗಲೇ ಮುನ್ನೆಚ್ಚರಿಕೆ ಕ್ರಮ ವಹಿಸಬೇಕಿದೆ.

Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**